ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ



ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 267, ಪುಟಗಳು: 8, ಶುಕ್ರವಾರ, 5 ಜುಲೈ 2024 RNI NO. KARKAN/2002/08054
epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

ಸುಭಾಷಿತ

ಒಳ್ಳೆಯದು ಉಳಿಯಬೇಕಾದರೆ
ಕೆಟ್ಟವರೊಂದಿಗೆ ಹೋರಾಡಬೇಕು.
। ಅ.ನ.ಕೃ

## ಪಂಚಾಂಗ

(ಶುಕ್ರವಾರ 5, ಜುಲೈ-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ,
- ಕೃಷ್ಣಪಕ್ಷ, ಅಮಾವಾಸ್ಯೆ,
- ಶುಕ್ರವಾರ, ಆರಿದ್ರ ನಕ್ಷತ್ರ.
- ರಾಹುಕಾಲ: 10:51 ರಿಂದ 12:27
- ಗುಳಿಕಕಾಲ: 07:39 ರಿಂದ 09:15
- ಯಮಗಂಡಕಾಲ: 03:39 ರಿಂದ 05:15



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

## ಸಂಕ್ಷಿಪ್ತ ಸುದ್ದಿ

### ಜಾಮೀನಿಗಾಗಿ ನ್ಯಾಯಾಲಯಕ್ಕೆ ನಕಲಿ ದಾಖಲೆ ಸಲ್ಲಿಕೆ!




**ಬೆಂಗಳೂರು:** ಜಾಮೀನು ಪಡೆಯುವ ವೇಳೆ ನಕಲಿ ಶ್ಯೂರಿಟಿ ಸಲ್ಲಿಸಿ ನ್ಯಾಯಾಲಯಕ್ಕೆ ಮೋಸ ಮಾಡಿರುವುದು ದಾಖಲೆ ಪರಿಶೀಲನೆ ವೇಳೆ ತಿಳಿದಿದ್ದು, ಆರೋಪಿಗಳ ವಿರುದ್ಧ ಸಿಸಿಬಿಯಲ್ಲಿ (ಅಅಃ) ಎಫ್ ಐಆರ್ ದಾಖಲಾಗಿದೆ. 2021ರಲ್ಲಿ ಕಾಡುಗೋಡಿ ಪೊಲೀಸರು ಮಾದಕ ವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆಯಡಿ ಆದಿತ್ಯಮ್ ಎಂಬುವುನನ್ನು ಬಂಧಿಸಿದ್ದರು. ಆರೋಪಿಗೆ ನ್ಯಾಯಾಲಯ ಜಾಮೀನು ನೀಡಿತ್ತು. ಪುಟ 2

### ಚಲಿಸುತ್ತಿದ್ದ ಬಸ್‌ನಿಂದ ಕೆಳಗೆ ಬಿದ್ದ ಮಹಿಳೆ



**ನಾಮಕ್ಕಲ್:** ಸಾಮಾನ್ಯವಾಗಿ ಬಸ್ ಗಳಲ್ಲಿ ಸೀಟುಗಳಿರುವುದಕ್ಕಿಂತ ಹೆಚ್ಚು ಮಂದಿ ಸಂಚರಿಸುತ್ತಾರೆ. ಸಾಕಷ್ಟು ಪ್ರಯಾಣಿಕರು ನಿಂತೇ ಪ್ರಯಾಣಿಸುತ್ತಾರೆ. ಕೆಲವು ಬಸ್ ಗಳಲ್ಲಿ ಬಾಗಿಲು ತೆರೆದೇ ಇರುತ್ತದೆ, ಇನ್ನೂ ಕೆಲವು ಬಸ್ ಗಳನ್ನು ಬಾಗಿಲುಗಳು ಅಷ್ಟು ಗಟ್ಟಿ ಇರುವುದಿಲ್ಲ. ಒಮ್ಮೆ ಒರಗಿದರೂ ಕೆಳಗೆ ಬೀಳುವಂತಿರುತ್ತೆ.

ತಮಿಳುನಾಡಿನ ನಾಮಕ್ಕಲ್ ನಲ್ಲಿ ಇದೇ ರೀತಿಯ ಘಟನೆ ನಡೆದಿದೆ. ಮಹಿಳೆಯೊಬ್ಬರು ಚಲಿಸುತ್ತಿರುವ ಬಸ್ ನಿಂದ ಕೆಳಗೆ ಬಿದ್ದಿದ್ದಾರೆ. ಆ ಸಮಯದಲ್ಲಿ ಬಸ್ ನ ವೇಗವೂ ಹೆಚ್ಚಿತ್ತು, ಈ ದೃಶ್ಯ ಖಾಸಗಿ ಬಸ್ ನಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಮಹಿಳೆಗೆ ಗಂಭೀರ ಗಾಯಗಳಾಗಿವೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪುಟ 2

ಗೂಗಲ್ ಪೇ, ಫೋನ್ ಪೇ ಮೂಲಕ ಪಾವತಿಸುವ ವ್ಯವಸ್ಥೆ ಶೀಘ್ರ ಜಾರಿ

# ಕೆಎಸ್‌ಆರ್‌ಟಿಸಿಯೂ ಇನ್ಮುಂದೆ ಕ್ಯಾಶ್‌ಲೆಸ್

**ಬೆಂಗಳೂರು:** ಟಿಕೆಟ್ ಕೊಡುವ ಸಂದರ್ಭದಲ್ಲಿ ಪ್ರಯಾಣಿಕರು ಮತ್ತು ಕಂಡಕ್ಟರ್ ಗಳ ಮಧ್ಯೆ ಚಿಲ್ಲರೆಗಾಗಿ ಯಾವಾಗಲೂ ಜಗಳ ನಡೆಯುತ್ತಲೇ ಇರುತ್ತದೆ. ಈ ರೀತಿಯ ಕಿರಿಕಿರಿಗಳಿಗೆ ಮುಕ್ತಿಹಾಡಲು ಕೆಎಸ್ ಆರ್ ಟಿಸಿ ಮುಂದಾಗಿದೆ. ಗೂಗಲ್ ಪೇ, ಫೋನ್ ಪೇ, ಪೇಟಿಎಂ ಮೂಲಕ ಹಣ ಪಾವತಿಸಲು ಪ್ರಯಾಣಿಕರಿಗೆ ಅವಕಾಶ ಕಲ್ಪಿಸುವ ಹೊಸ ವ್ಯವಸ್ಥೆ ಜಾರಿಗೆ ತರಲು ಕೆಎಸ್ ಆರ್ ಟಿಸಿ ಮುಂದಾಗಿದೆ. ಶೀಘ್ರದಲ್ಲೇ ಈ ವ್ಯವಸ್ಥೆ ಅನುಷ್ಠಾನಗೊಳ್ಳುವ ನಿರೀಕ್ಷೆ ಇದೆ.



**ಕಾರ್ಡ್‌ಗಳನ್ನು ಬಳಸಿಯೂ ಪಾವತಿ ಮಾಡಬಹುದು!:** ಖಾಸಗಿ ಕಂಪೆನಿಯಿಂದ ಒಂದು ಮಷಿನ್‌ಗೆ ಪ್ರತಿ ತಿಂಗಳು 645 ರೂಪಾಯಿ ಬಾಡಿಗೆ ಆಧಾರದಲ್ಲಿ 10245 ಸಾವಿರ ಇಟಿಎಂ ಟಿಕೆಟ್ ಮಷಿನ್ ಗಳ ಖರೀದಿಗೆ ಕೆಎಸ್ ಆರ್ ಟಿಸಿ ಮುಂದಾಗಿದೆ. ಇದರಿಂದ ಇನ್ಮುಂದೆ ಕೆಎಸ್ ಆರ್ ಟಿಸಿ ಬಸ್ ನಲ್ಲಿ ಗೂಗಲ್ ಪೇ, ಫೋನ್ ಪೇ. ಪೇಟಿಎಂ ಮೂಲಕ ಹಣ ಪಾವತಿ ಮಾಡಿ ಟಿಕೆಟ್ ಪಡೆದು ಪ್ರಯಾಣಿಸಬಹುದಾಗಿದೆ. ಈ ನೂತನ ಮಷಿನ್ ಗಳಲ್ಲಿ ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್‌ಗಳನ್ನು ಬಳಸಿಯೂ ಹಣ ಪಾವತಿ ಮಾಡಬಹುದು.

**6500 ಬಸ್ ಗಳಿಗೆ ಹೊಸ ಮಷಿನ್:** ಸದ್ಯ ಈಗ ಇರುವ ಮಷಿನ್ ಗಳು ರೋಡ್ ಮಧ್ಯೆ ಕೈಕೊಟ್ಟು ಪ್ರಯಾಣಿಕರು ಮತ್ತು ಕಂಡಕ್ಟರ್ ಜೊತೆಗೆ ಜಗಳವಾಗುತ್ತಿದೆ. ಹೊಸ ಮಷಿನ್ ನಿಂದ ಇದು ತಪ್ಪಲಿದೆ. ಇತ್ತೀಚೆಗೆ ಕೆಎಸ್ ಆರ್ ಟಿಸಿ ಬಸ್ ಗಳಲ್ಲಿ ಪ್ರಯಾಣ ಮಾಡುವ ಹೆಚ್ಚಿನವರ ಬಳಿ ಕ್ಯಾಶ್ ಇರುವುದಿಲ್ಲ. ಹಾಗಾಗಿ ಪ್ರಯಾಣಿಕರ ಅನುಕೂಲಕ್ಕಾಗಿ ಇಟಿಎಂ ಸಹಕಾರಿ ಆಗಲಿದೆ. ನಿಗಮದ 6500 ಬಸ್ಸುಗಳಲ್ಲೂ ಹೊಸ ವ್ಯವಸ್ಥೆ ಪರಿಚಯ ಮಾಡಲಾಗುತ್ತದೆ. ಶಕ್ತಿ ಯೋಜನೆಯ ಪಿಂಕ್ ಟಿಕೆಟ್ ಗಳನ್ನು ಈ ಇಟಿಎಂ ಮಷಿನ್ ಗಳಲ್ಲಿ ಸ್ಕ್ಯಾನ್ ಮಾಡಿ ಅವಕಾಶ ನೀಡುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗುತ್ತಿದೆ. ಈ ಬಗ್ಗೆ ಪ್ರಯಾಣಿಕರು ಕೂಡ ಸಂತೋಷ ವ್ಯಕ್ತಪಡಿಸುತ್ತಿದ್ದಾರೆ

ಈ ಹಿಂದೆ ಬಿಎಂಟಿಸಿ ಬಸ್ ಗಳಲ್ಲಿ ಟಿಕೆಟ್ ಮಷಿನ್‌ಗಳು ಕೈಕೊಟ್ಟು ಕಂಡಕ್ಟರ್ ಗಳು ತೊಂದರೆ ಅನುಭವಿಸುತ್ತಿದ್ದರು. ನಂತರ ಹೊಸ ತಂತ್ರಜ್ಞಾನದ ಮಷಿನ್ ಖರೀದಿ ಮಾಡಲಾಗಿತ್ತು. ಇದೀಗ ಕೆಎಸ್ ಆರ್ ಟಿಸಿ ಕೂಡ ಹೊಸ ತಂತ್ರಜ್ಞಾನದ ಮಷಿನ್ ಗಳನ್ನು ಖರೀದಿ ಮಾಡಲು ಮುಂದಾಗಿದೆ.

ಉಪಚುನಾವಣೆಗೆ ಮೂರು ತಂಡ ರಚನೆ

# ಬಿಜೆಪಿ ಅಭ್ಯರ್ಥಿ ಆಯ್ಕೆ

**ಬೆಂಗಳೂರು:** ಕರ್ನಾಟಕದ ಮೂರು ಕ್ಷೇತ್ರಗಳಿಗೆ ನಡೆಯಲಿರುವ ಉಪಚುನಾವಣೆಯ ಅಭ್ಯರ್ಥಿಗಳ ಆಯ್ಕೆಗೆ ಬಿಜೆಪಿಯಿಂದ ತಂಡ ರಚನೆ ಮಾಡಿದೆ.

ಚನ್ನಪಟ್ಟಣ ಕ್ಷೇತ್ರಕ್ಕೆ ಡಾ.ಸಿ.ಎನ್.ಅಶ್ವತ್‌ನಾರಾಯಣ, ಸಂಡೂರಿಗೆ ಸಿ ಟಿ ರವಿ, ಶಿಗ್ಗಾವಿಗೆ ಆರ್ ಅಶೋಕ್ ನೇತೃತ್ವದ ತಂಡವನ್ನು ರಚನೆ ಮಾಡಲಾಗಿದೆ.

ಕ್ಷೇತ್ರಗಳಿಗೆ ತೆರಳಿ ಸ್ಥಳೀಯ ಮುಖಂಡರು ಮತ್ತು ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಕ್ಕೆ ಸೂಚನೆ ನೀಡಲಾಗಿದೆ. ವರದಿಗಳು ಪೂರ್ಣಗೊಂಡ ಬಳಿಕ ಹೈಕಮಾಂಡ್‌ಗೆ ಕಳಿಸಲು ಬಿಜೆಪಿ ನಿರ್ಧಾರ ಮಾಡಿದೆ

ಶಿಗ್ಗಾವಿ ವಿಧಾನಸಭಾ ಕ್ಷೇತ್ರದ ಶಾಸಕರಾಗಿದ್ದ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಶಿಗ್ಗಾವಿ ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ನಡೆಯಲಿದೆ. 2008, 2013, 2018 ಹಾಗೂ 2023ರ ನಾಲ್ಕು ವಿಧಾನಸಭಾ ಚುನಾವಣೆಗಳಲ್ಲಿ ಬಸವರಾಜ ಬೊಮ್ಮಾಯಿ ಅವರು ಶಿಗ್ಗಾವಿ ಕ್ಷೇತ್ರದಿಂದ ಸ್ಪರ್ಧಿಸಿ ಸತತವಾಗಿ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.



ಚನ್ನಪಟ್ಟಣದಿಂದ ಜೆಡಿಎಸ್ ಶಾಸಕರಾಗಿದ್ದ ಕುಮಾರಸ್ವಾಮಿ ಅವರು ಮಂಡ್ಯ ಲೋಕಸಭೆಯಿಂದ ಗೆದ್ದು ಕೇಂದ್ರದಲ್ಲಿ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆಯ ಸಚಿವರಾಗಿದ್ದಾರೆ.

ಸಂಡೂರು ಕಾಂಗ್ರೆಸ್ ಶಾಸಕರಾಗಿದ್ದ ಈ ತುಕಾರಾಂ ಅವರು ಬಳ್ಳಾರಿಯಿಂದ ಗೆದ್ದಿದ್ದರಿಂದ ಸಂಡೂರು ಕ್ಷೇತ್ರಕ್ಕೆ ಉಪಚುನಾವಣೆ ನಡೆಯಲಿದೆ.

## ರೈತರಿಗೆ ಕೋಚಿಮುಲ್ ಬಿಗ್ ಶಾಕ್ ಹಾಲು ಉತ್ಪಾದಕರಿಗೆ 2 ರೂ. ಕಡಿತ

**ಕೋಲಾರ:** ಕೆಎಂಎಫ್ ಹಾಲಿನ ದರ ಏರಿಕೆ ಮಾಡಿದ ಬೆನ್ನಲ್ಲೇ ರೈತರಿಗೆ ನೀಡುವ ಹಾಲಿನ ಬೆಲೆಯಲ್ಲಿ 2 ರೂಪಾಯಿ ಕಡಿತಗೊಳಿಸಿ ಕೋಲಾರ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟ ರೈತರಿಗೆ ಬಿಗ್ ಶಾಕ್ ನೀಡಿದೆ.



ಈಗಷ್ಟೇ ಮುಂಗಾರು ಆರಂಭವಾಗಿ ರೈತರು ನಿಟ್ಟುಸಿರು ಬಿಡುತ್ತಿದ್ದ ವೇಳೆ ಕೋಚಿಮುಲ್ ಆಡಳಿತ ಮಂಡಳಿ ದಿಢೀರ್ 2 ರೂ. ಕಡಿಮೆ ಮಾಡಿದ್ದರಿಂದ ರೈತರು ಕಂಗಾಲಾಗಿದ್ದಾರೆ. ಪ್ರತಿ ಲೀಟರ್ ಹಾಲಿನ ಮೇಲೆ 2 ರೂ. ಕಡಿತ ಮಾಡಿದ್ದು, ಇಂದು ಬೆಳಿಗ್ಗೆಯಿಂದ ಜಾರಿಗೆ ಬರುವಂತೆ ಕೋಚಿಮುಲ್ ಆದೇಶ ಆದೇಶ ಹೊರಡಿಸಿದೆ. ಪುಟ 2

## ಟೀಂ ಇಂಡಿಯಾ ಟಿ20 ವಿಶ್ವಕಪ್ ವಿಜಯೋತ್ಸವ ಮೆರವಣಿಗೆಯಲ್ಲಿ ಹಲವು ಮಂದಿಗೆ ಗಾಯ



**ಮುಂಬೈ:** ಇತ್ತೀಚೆಗೆ ನಡೆದ ಐಸಿಸಿ ಟಿ20 ವಿಶ್ವಕಪ್ ಫಿನಾಲೆಯಲ್ಲಿ ಭಾರತ ತಂಡವು ಜಯಗಳಿಸಿತು. ವಿಜೇತ ತಂಡದ ವಿಜಯೋತ್ಸವ ಪರೇಡ್ ಮುಂಬೈನ ಮರೈನ್ ಡ್ರೈವ್ ನಲ್ಲಿ ನಡೆಯಿತು. ಈ ಮೆರವಣಿಗೆಯಲ್ಲಿ ಹಲವು ಕ್ರಿಕೆಟ್ ಅಭಿಮಾನಿಗಳು ಗಾಯಗೊಂಡಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇದಕ್ಕೂ ಮುನ್ನ ರೋಹಿತ್ ಶರ್ಮಾ ನೇತೃತ್ವದ ತಂಡ ಮರೈನ್ ಡ್ರೈವ್ ನಿಂದ ಬಸ್ ಪರೇಡ್ ಗೆ ಚಾಲನೆ ನೀಡಿತು.

ಭಾರತ ತಂಡದ ಆಟಗಾರರನ್ನು ಸ್ವಾಗತಿಸಲು ಲಕ್ಷಾಂತರ ಕ್ರಿಕೆಟ್ ಅಭಿಮಾನಿಗಳು ಜಮಾಯಿಸಿದ್ದರು. ತೆರೆದ ಬಸ್ಸಿನಲ್ಲಿ ಆಟಗಾರರು ಈ ಪ್ರಯಾಣವನ್ನು ಸಂಪೂರ್ಣವಾಗಿ ಆನಂದಿಸಿದರು. ಈ ವಿಜಯೋತ್ಸವದ ಮೆರವಣಿಗೆಯೂ ಕೆಲ ಅಭಿಮಾನಿಗಳಿಗೆ ಸಮಸ್ಯೆಯಾಯಿತು. ಜನಸಂದಣಿಯಿಂದಾಗಿ ಕೆಲವು ಕ್ರಿಕೆಟ್ ಅಭಿಮಾನಿಗಳು ಗಾಯಗೊಂಡರು ಮತ್ತು ಕೆಲವರು ಉಸಿರಾಟದ ತೊಂದರೆ ಅನುಭವಿಸಿದರು. ಪುಟ 2

## ಮನೆ ಕೆಡವುದನ್ನು ತಡೆಯಲು ತನ್ನ ಮೈಗೆ ಬೆಂಕಿ ಹಚ್ಚಿಕೊಂಡ ಯುವಕ



**ತಿರುವಳ್ಳೂರು:** ಮನೆ ಕೆಡವುದನ್ನು ತಡೆಯಲು ಯುವಕನೊಬ್ಬ ಮೈಗೆ ಬೆಂಕಿ ಹಚ್ಚಿಕೊಂಡಿರುವ ಘಟನೆ ತಮಿಳುನಾಡಿನ ತಿರುವಳ್ಳೂರಿನಲ್ಲಿ ನಡೆದಿದೆ. ಅವರು ಆ ಜಾಗವನ್ನು ಅತಿಕ್ರಮಣ ಮಾಡಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ತಂದೆಯ ಮರಣದ ನಂತರ ರಾಜ್ ಕುಮಾರ್ ಎಂಬ ವ್ಯಕ್ತಿ ಕುಟುಂಬದೊಂದಿಗೆ ವರ್ಷಗಳಿಂದ ಈ ಮನೆಯಲ್ಲಿ ವಾಸಿಸುತ್ತಿದ್ದ. ಪುಟ 2

## ಬೆಂಗಳೂರಿನಲ್ಲಿ ಹೆಚ್ಚಿದ ಡೆಂಗ್ಯೂ

ಎಚ್ಚರ, ಮನೆ ಸುತ್ತ ಸ್ವಚ್ಚತೆ ಕಾಪಾಡದಿದ್ದರೆ ಬೀಳಲಿದೆ ದಂಡ

**ಬೆಂಗಳೂರು:** ಬೆಂಗಳೂರಿನಲ್ಲಿ ಡೆಂಗ್ಯೂ ಹಾವಳಿ ಮಿತಿ ಮೀರಿದ್ದು, ನೈರ್ಮಲ್ಯ ಕಾಪಾಡದಿರುವುದು ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗಿ ಮತ್ತಷ್ಟು ಸಮಸ್ಯೆಗೆ ಕಾರಣವಾಗುತ್ತಿದೆ. ಹೀಗಾಗಿ ಸ್ವಚ್ಛತೆ ಕಾಪಾಡದವರಿಗೆ ದಂಡ ವಿಧಿಸಲು ಬಿಬಿಎಂಪಿ ಮುಂದಾಗಿದೆ. ವೈಯಕ್ತಿಕ ಜಾಗಗಳಲ್ಲಿ ಮತ್ತು ಪ್ರದೇಶಗಳಲ್ಲಿ ಸೊಳ್ಳೆ ಉತ್ಪತ್ತಿಗೆ ಕಾರಣವಾಗುವಂತೆ ಮಾಡುವ ಸಾರ್ವಜನಿಕರಿಗೆ ದಂಡ ವಿಧಿಸಲು ತೀರ್ಮಾನಿಸಲಾಗಿದೆ ಎಂದು ಬಿಬಿಎಂಪಿ ಮೂಲಗಳು ತಿಳಿಸಿವೆ.



ಖಾಸಗಿಯವರ ನಿವೇಶನ, ಜಾಗ ಅಥವಾ ಸ್ವತ್ತುಗಳಲ್ಲಿ ಸೊಳ್ಳೆ ಉತ್ಪತ್ತಿ ಕಂಡು ಬಂದಲ್ಲಿ ಮೊದಲಿಗೆ ಎಚ್ಚರಿಕೆ ನೀಡಲಾಗುತ್ತದೆ. ಅದಕ್ಕೆ ಸ್ಪಂದಿಸದಿದ್ದರೆ ಮೊದಲ ಹಂತದಲ್ಲಿ 50 ರೂ. ದಂಡ ವಿಧಿಸಲಾಗುತ್ತದೆ. ನಂತರ ಆ ಸ್ಥಳ ಸ್ವಚ್ಛವಾಗುವ ತನಕ ಪ್ರತಿ ನಿತ್ಯ 15 ರೂ. ದಂಡ ವಿಧಿಸಲು ತೀರ್ಮಾನಿಸಲಾಗಿದೆ. ಕರ್ನಾಟಕ ಮುನ್ಸಿಪಲ್ ಕಾಯ್ದೆ ಪ್ರಕಾರ ಅನೈರ್ಮಲ್ಯಕ್ಕೆ ದಂಡದ ಮೊತ್ತ ಕಡಮೆ ಇದೆ. ಇದನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಬಿಬಿಎಂಪಿ ಸಿದ್ದತೆ ನಡೆಸಿದೆ ಎಂದು ಬಿಬಿಎಂಪಿ ಮೂಲಗಳಿಂದ ಅಧಿಕೃತ ಮಾಹಿತಿ ದೊರೆತಿದೆ. ಪುಟ 2

## ಆಸ್ಪತ್ರೆಗಳಲ್ಲಿ ಹೆಪಟೈಟಿಸ್ ಬಿ ಲಸಿಕೆಯ ಕೊರತೆ, ಲಸಿಕೆಗಾಗಿ ಸರ್ಕಾರಕ್ಕೆ ಮನವಿ

**ಬೆಂಗಳೂರು:** ರಾಜಾಧಾನಿ ಬೆಂಗಳೂರಿನಲ್ಲಿ ಹೆಪಟೈಟಿಸ್ ಬಿ ಲಸಿಕೆ ಕೊರತೆ ಎದುರಾಗಿದ್ದು, ನಗರದ ಲಸಿಕೆ ಸಿಗುತ್ತಿಲ್ಲ. ಸದ್ಯ ಆಸ್ಪತ್ರೆಗಳಲ್ಲಿ ಶೇ50 ರಷ್ಟು ಲಸಿಕೆಗೆ ಬೇಡಿಕೆ ಇದ್ದು, ಪೂರೈಕೆ ಮಾತ್ರ ಆಗುತ್ತಿಲ್ಲ. ಹೀಗಾಗಿ ಆದಾಷ್ಟು ಬೇಗ ಹೆಪಟೈಟಿಸ್ ಬಿ ಲಸಿಕೆ ನೀಡುವಂತೆ ವೈದ್ಯರು ಆರೋಗ್ಯ ಇಲಾಖೆಗೆ ಮನವಿ ಮಾಡಿದ್ದಾರೆ. ಪುಟ 2




## ಬೆಂಗಳೂರು ಟ್ರಾಫಿಕ್ ಮುಕ್ತಿಗೆ ಎಲಿವೇಟೆಡ್ ರೋಟರಿ ಫ್ಲೈಓವರ್

**ಬೆಂಗಳೂರು:** ಬೆಂಗಳೂರಿನ ಸಂಚಾರ ದಟ್ಟಣೆ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಡಬಲ್ ಡೆಕ್ಕರ್ ಫ್ಲೈಓವರ್ ನಿರ್ಮಾಣ ಮಾಡಲಾಗುತ್ತಿದ್ದು, ಶೀಘ್ರದಲ್ಲೇ ಇದು ಸಂಚಾರಕ್ಕೆ ಮುಕ್ತವಾಗುವ ನಿರೀಕ್ಷೆ ಇದೆ. ಇದರ ಬೆನ್ನಲ್ಲೇ ಇದೀಗ ಬಿಬಿಎಂಪಿ, ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಸುತ್ತ ಟ್ರಾಫಿಕ್ ಸಮಸ್ಯೆ ಕಡಿಮೆ ಮಾಡುವುದಕ್ಕಾಗಿ ಮುಕುಂದ ಥಿಯೇಟರ್ ಬಳಿಯಿಂದ ಬೆಂಗಳೂರಿನ ಮೊದಲ ಏಕಮುಖ ಎಲಿವೇಟೆಡ್ ರೋಟರಿ ಮೇಲ್ಸೇತುವೆ ನಿರ್ಮಾಣಕ್ಕೆ ಮುಂದಾಗಿದೆ.

ವಿಮಾನ ನಿಲ್ದಾಣದಲ್ಲಿರುವಂಥ ಮೂಲಸೌಕರ್ಯಗಳೊಂದಿಗೆ ಸರ್ ಎಂವಿ ಟರ್ಮಿನಲ್ ಅನ್ನು ಮೇಲ್ದರ್ಜೆಗೆ ಏರಿಸಿದ ನಂತರವೂ, ಕಿರಿದಾದ ರಸ್ತೆ ಮತ್ತು ಭಾರೀ ದಟ್ಟಣೆಯಿಂದಾಗಿ ನಗರದ ರೈಲು ನಿಲ್ದಾಣವು ಹಲವು ಸವಾಲುಗಳನ್ನು ಎದುರಿಸುತ್ತಿದೆ. ಟ್ರಾಫಿಕ್ ಜಾಮ್ ಸಮಸ್ಯೆಯನ್ನು ಪರಿಹರಿಸಲು, ಬಿಬಿಎಂಪಿ ಎಲಿವೇಟೆಡ್ ರೋಟರಿ ಮೇಲ್ಸೇತುವೆ ಯೋಜನೆಯನ್ನು ಪ್ರಸ್ತಾಪಿಸಿದೆ.



ಮೇಲ್ಸೇತುವೆ ನಿರ್ಮಾಣಕ್ಕೆ ಬಿಬಿಎಂಪಿ ಟೆಂಡರ್ ಕರೆದಿದ್ದು, ಬೈಯ್ಯಪ್ಪನಹಳ್ಳಿ ರೈಲ್ವೇ ಲೆವೆಲ್ ಕ್ರಾಸಿಂಗ್‌ನಲ್ಲಿ ಆರ್ ಒಬಿಗಾಗಿ ಹೆಚ್ಚುವರಿ 2 ಲೇನ್‌ಗಳನ್ನು ನಿರ್ಮಿಸಲಾಗಿದೆ. ಪುಟ 2

## ಯುವ ಡಿವೋರ್ಸ್ ಕೇಸ್, ಆ.23ಕ್ಕೆ ಮುಂದೂಡಿಕೆ

**ಬೆಂಗಳೂರು:** ಸ್ಯಾಂಡಲ್‌ವುಡ್ ನಟ ಯುವ ರಾಜ್ ಕುಮಾರ್ ಸಲ್ಲಿಸಿದ್ದ ವಿಚ್ಛೇದನ ಅರ್ಜಿ ವಿಚಾರಣೆ ಆಗಸ್ಟ್ 23ಕ್ಕೆ ಮುಂದೂಡಿಕೆಯಾಗಿದೆ. ಇಂದು 1 ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶೆ ಕಲ್ಪನಾ ಅವರಿದ್ದ ಪೀಠದಲ್ಲಿ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ವಿಚ್ಛೇದನ ಅರ್ಜಿಗೆ ಯುವ ಪತ್ನಿ ಶ್ರೀದೇವಿ ಭೈರಪ್ಪ ಅವರ ಪರ ವಕೀಲರು ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ನೀಡುವಂತೆ ಮನವಿ ಮಾಡಿದರು.



ಈ ಮನವಿಗೆ ನ್ಯಾಯಾಧೀಶರು, ಇದು ಕೌಟುಂಬಿಕ ಕಲಹವಾಗಿರುವ ಕಾರಣ ಮಿಡಿಯೇಷನ್ ಕೌನ್ಸಿಲಿಂಗ್ ಮುಕ್ತಾಯವಾಗಲಿ. ಮೊದಲು ಕೌನ್ಸಿಲಿಂಗ್ ಮುಕ್ತಾಯವಾಗಬೇಕು.ಕೌನ್ಸಿಲಿಂಗ್ ಮುಕ್ತಾಯದ ಬಳಿಕ ಇಬ್ಬರ ತೀರ್ಮಾನ ಕೇಳಬೇಕು. ಬಳಿಕ ವಿಚ್ಛೇದನದ ಆಕ್ಷೇಪಣೆ ಕೇಳುವುದಾಗಿ ನ್ಯಾಯಾಧೀಶರು ಹೇಳಿದರು.ಅಂತಿಮವಾಗಿ ಕೋರ್ಟ್ ಆಗಸ್ಟ್ 23ಕ್ಕೆ ಮಿಡಿಯೇಷನ್ ದಿನಾಂಕ ನಿಗದಿ ಮಾಡಿ ವಿಚಾರಣೆ ಮುಂದೂಡಿತು.

## ಪ್ರೇಮಿಗಳ ಹಾಟ್ ಸ್ಪಾಟ್ ಆದ ರಾಯಚೂರಿನ ಕನ್ನಡ ಭವನದ ಕಾಂಪೌಂಡ್

**ರಾಯಚೂರು:** ನಗರದ ಕನ್ನಡ ಭವನ ಕಾಂಪೌಂಡ್ ಹಾಗೂ ಸುತ್ತಲ ಪ್ರದೇಶ ಲವ್ವರ್ಸ್ ಳಿಗೆ ಹಾಟ್ ಸ್ಪಾಟ್ ಆಗಿ ಮಾರ್ಪಟ್ಟಿದೆ. ಸಾರ್ವಜನಿಕ ಸ್ಥಳದಲ್ಲಿ ಯಾವ ಮುಜುಗರವಿಲ್ಲದೆ ಕಾಲೇಜು ವಿದ್ಯಾರ್ಥಿಗಳು ಲವ್ವಿಡವ್ವಿ ಶುರುಮಾಡಿದ್ದಾರೆ. ಜನರು ಓಡಾಡುವ ಸ್ಥಳದಲ್ಲೇ ಯುವ ಪ್ರೇಮಿಗಳು ಕಿಸ್ಸಿಂಗ್, ಹಗ್ಗಿಂಗ್, ರೊಮ್ಯಾನ್ಸ್ ನಡೆಸಿದ್ದಾರೆ. ಪ್ರೇಮಿಗಳ ಈ ವರ್ತನೆಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕರು ಬೇಸತ್ತು ತರಾಟೆಗೆ ತೆಗೆದುಕೊಳ್ಳುತ್ತಿದ್ದಂತೆ ಯುವಕ-ಯುವತಿಯರು ಸ್ಥಳದಿಂದ ಓಡಿ ಹೋಗುತ್ತಾರೆ. ನಿತ್ಯ ಹೊಸ ಹೊಸ ಜೋಡಿಗಳು ಇಲ್ಲಿ ಕಾಣಿಸಿಕೊಳ್ಳುತ್ತಿವೆ. ಲವರ್ಸ್ ಗಳ ಈ ವರ್ತನೆಗೆ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಜಾಗದಲ್ಲಿ ಇದೇ ಗೋಳು ಅಂತ ಸ್ಥಳೀಯರು ಬೇಸರ ಹೊರಹಾಕಿದ್ದಾರೆ. ಪಕ್ಕದಲ್ಲಿ ದೇವಾಲಯಗಳು, ಕಲ್ಯಾಣ ಮಂಟಪ, ಸಮಾಜ ಕಲ್ಯಾಣ ಇಲಾಖೆ ಕಚೇರಿ ಇದ್ದರೂ ಯುವಕ-ಯುವತಿಯರು ಯಾವುದಕ್ಕೂ ಕೇರ್ ಮಾಡುತ್ತಿಲ್ಲ. ಹೀಗಾಗಿ ಇದಕ್ಕೆ ಕಡಿವಾಣ ಹಾಕಬೇಕು ಅಂತ ಸಾರ್ವಜನಿಕರು ಒತ್ತಾಯಿಸಿದ್ದಾರೆ.



# ರಾಷ್ಟ್ರೀಯ ವೈದ್ಯಕೀಯ ಆಯೋಗದ ಮುಖ್ಯಸ್ಥರಾಗಿ ಕನ್ನಡಿಗ ಡಾ.ಬಿ.ಎನ್.ಗಂಗಾಧರ್ ನೇಮಕ

**ಬೆಂಗಳೂರು:** ರಾಷ್ಟ್ರೀಯ ವೈದ್ಯಕೀಯ ಆಯೋಗದ ಮುಖ್ಯಸ್ಥರಾಗಿ ಕನ್ನಡಿಗ ಡಾ.ಬಿ.ಎನ್ ಗಂಗಾಧರ್ ನೇಮಕಗೊಂಡಿದ್ದಾರೆ.

ಗಂಗಾಧರ್ ಅವರು ನಿಮ್ಹಾನ್ಸ್ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದು, ಪದ್ಮಶ್ರೀ ಪುರಸ್ಕೃತರೂ ಆಗಿದ್ದಾರೆ. ಇದೀಗ ರಾಷ್ಟ್ರಮಟ್ಟದ ಉನ್ನತ ವೈದ್ಯಕೀಯ ಆಯೋಗಕ್ಕೆ ಮುಖ್ಯಸ್ಥರಾಗಿ ಕೇಂದ್ರ ಸರ್ಕಾರದಿಂದ ನೇಮಕಗೊಂಡಿದ್ದಾರೆ. ತಮ್ಮ ವೈದ್ಯಕೀಯ ರಂಗ ಸೇವೆಗೆ ಡಾ.ಬಿ.ಎನ್.ಗಂಗಾಧರ್ ಪದ್ಮಶ್ರೀ ಪ್ರಶಸ್ತಿ ಪಡೆದಿದ್ದರು.



ಡಾ.ಗಂಗಾಧರ್ ಪ್ರಸ್ತುತ ವೈದ್ಯಕೀಯ ಮೌಲ್ಯಮಾಪನ ಹಾಗೂ ರೇಟಿಂಗ್ ಮಂಡಳಿ ಅಧ್ಯಕ್ಷರಾಗಿದ್ದಾರೆ. ರಾಷ್ಟ್ರೀಯ ವೈದ್ಯಕೀಯ ಮಂಡಳಿ ಮುಖ್ಯಸ್ಥರಾಗಿದ್ದ ಡಾ.ಎಸ್.ಸಿ ಶರ್ಮಾ ಅಧಿಕಾರ ಅವಧಿ ಕಳೆದ ಸಪ್ಟಂಬರ್‌ನಲ್ಲಿ ಮುಗಿದಿತ್ತು. ಡಾ.ಸಂಜಯ್ ಬಿಹಾರಿ ಅವರನ್ನು ವೈದ್ಯಕೀಯ ಮೌಲ್ಯಮಾಪನ ಮತ್ತು ರೇಟಿಂಗ್ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಸಂಜಯ್ ತಿರುವನಂತಪುರದ ಶ್ರೀ ಚಿತ್ರ ತಿರುನಾಳ ವೈದ್ಯಕೀಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ ನಿರ್ದೇಶಕರಾಗಿದ್ದಾರೆ.

ಇನ್ನು ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣ ಮಂಡಳಿ ಪೂರ್ಣಾವಧಿ ಸದಸ್ಯರನ್ನಾಗಿ ಡಾ.ಅನಿಲ್ ಡಿಕ್ರೂಜ್ ಅವರನ್ನು ನೇಮಕ ಮಾಡಲಾಗಿದೆ. ಡಾ.ಅನಿಲ್ ಡಿಕ್ರೂಜ್ ಮುಂಬೈನ ಅಪೊಲೊ ಆಸ್ಪತ್ರೆಯ ಕ್ಯಾನ್ಸರ್ ಚಿಕಿತ್ಸಾ ವಿಭಾಗದ ನಿರ್ದೇಶಕರಾಗಿದ್ದಾರೆ. ಅರೆಕಾಲಿಕ ಸದಸ್ಯರನ್ನಾಗಿ ಡಾ.ರಾಜೇಂದ್ರ ಅಚ್ಯುತ ಬಡ್ಡೆ ನೇಮಕಗೊಂಡಿದ್ದಾರೆ. ಡಾ.ರಾಜೇಂದ್ರ ಅಚ್ಯುತ ಬಡ್ಡೆ ಟಾಟಾ ಮೆಮೋರಿಯಲ್ ಸೆಂಟರ್‌ನ ವಿಶ್ರಾಂತ ಪ್ರಾಧ್ಯಾಪಕರಾಗಿದ್ದಾರೆ.

# ಎಲ್ಲವನ್ನೂ ಸಿಬಿಐಗೆ ಕೊಡಲು ಸಾಧ್ಯವಿಲ್ಲ: ಪರಮೇಶ್ವರ್

**ಬೆಂಗಳೂರು:** ಮುಡಾ 50:50 ಅನುಪಾತ ಅವ್ಯವಹಾರ ಪ್ರಕರಣವನ್ನು ಸಿಬಿಐಗೆ ನೀಡುವಂತೆ ಬಿಜೆಪಿ ನಾಯಕರು ಆಗ್ರಹಿಸಿದ್ದು, ಗೃಹಸಚಿವ ಜಿ. ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಹಗರಣ ಕುರಿತು ವೆರಿಫೈ ಮಾಡುತ್ತಿದ್ದಾರೆ. ಎಲ್ಲವನ್ನೂ ಸಿಬಿಐ ಗೆ ಕೊಡಲು ಸಾಧ್ಯವಿಲ್ಲ. ಅವರು ಕೇಳ್ತಾರೆ ಅಂತಾ ಎಲ್ಲವನ್ನೂ ಸಿಬಿಐಗೆ ಕೊಡಲು ಆಗಲ್ಲ ಎಂದು ಹೇಳಿದರು. ಸಿಎಂ ಈಗಾಗಲೇ ಸ್ಪಷ್ಟನೆ ಕೊಟ್ಟಿದ್ದಾರೆ. ಎಲ್ಲವನ್ನೂ ಸಿಬಿಐ ತನಿಖೆಗೆ ಕೊಟ್ರೆ ಇಲ್ಲೇನೂ ಮಾಡೋ ಆಗಿಲ್ವಾ..?. ಅಸೆಂಬ್ಲಿಯಲ್ಲಿ ಅವರು ಯಾವ ವಿಷಯ ಚರ್ಚೆಗೆ ತಗೋತಾರೋ ಗೊತ್ತಿಲ್ಲ. ಸ್ಪೀಕರ್ ಗೆ ಯಾವ ವಿಚಾರದ ಬಗ್ಗೆ ಲೆಟರ್ ಕೊಡ್ತಾರೋ ನೋಡಬೇಕು. ಬಿಜೆಪಿಯವರಿಗೆ ನಾವು ಉತ್ತರ ಕೊಡ್ತೀವಿ, ಹಿಂಜರಿವುದಿಲ್ಲ ಎಂದು ತಿಳಿಸಿದರು. ರಾಜ್ಯದಲ್ಲಿ ಹೊಸ ಕಾನೂನು ನೀತಿ ಜಾರಿಗೆ ತರುವುದಕ್ಕೆ ಕಾನೂನು ಸಚಿವರು ಪ್ರಸ್ತಾಪ ಮಾಡಿದ್ದಾರೆ. ಇಂದಿನ ಕ್ಯಾಬಿನೆಟ್ ನಲ್ಲಿ ಚರ್ಚೆಗೆ ಬರಲಿದೆ. ಗ್ರಾಮ ಮಟ್ಟದಲ್ಲಿ ನ್ಯಾಯ ವ್ಯವಸ್ಥೆಗೆ



ಹೆಚ್ಚಿನ ಪ್ರಾಮುಖ್ಯತೆ ನೀಡುವ ಬಗ್ಗೆ ಚರ್ಚೆ ಆಗಲಿದೆ ಎಂದು ಪರಮೇಶ್ವರ್ ಹೇಳಿದ್ದಾರೆ.

ಬಿಜೆಪಿ ನಾಯಕರು ವಾಗ್ದಾಳಿ: ಮುಡಾ 50:50 ಅನುಪಾತ ಅವ್ಯವಹಾರ ಆರೋಪದ ಕುರಿತು ಸಿದ್ದರಾಮಯ್ಯ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ನಡೆಸುತ್ತಿದ್ದಾರೆ. ಮುಡಾ ಹಗರಣವನ್ನು ಸಿಬಿಐ ತನಿಖೆಗೆ ಆರ್. ಅಶೋಕ್ ಆಗ್ರಹಿಸಿದರೆ, ಸಿದ್ದರಾಮಯ್ಯ ಅವರ ತಪ್ಪು ಇಲ್ಲ ಅಂದ್ರೆ ಸಿಬಿಐಗೆ ಕೊಡಲಿ. ಸಿಎಂ ಸಿದ್ದರಾಮಯ್ಯ ಮುಡಾದ ಫಲಾನುಭವಿಗಳು. ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಮರ್ಯಾದೆ ಉಳಿಸಿಕೊಳ್ಳಲಿ ಎಂದು ಸಿ.ಟಿ ರವಿ ಆಗ್ರಹಿಸಿದ್ದಾರೆ.

# ವಿದ್ಯಾರ್ಥಿನಿಯರ ಮುಂದೆ ತಡೆದಿದ್ದಕ್ಕೆ ಕಾಲೇಜ್ ಸೆಕ್ಯೂರಿಟಿ ಹತ್ಯೆ

**ಬೆಂಗಳೂರು:** ಅಮೃತಹಳ್ಳಿಯ ಕಾಲೇಜೊಂದರಲಿ ನಡೆದಿದ್ದ ಸೆಕ್ಯೂರಿಟಿ ಗಾರ್ಡ್ ಜೈಕಿಶೋರ್ ರಾಯ್ ಕೊಲೆ ಪ್ರಕರಣದಲ್ಲಿ, ಆರೋಪಿ ವಿದ್ಯಾರ್ಥಿ ಭಾರ್ಗವ್ ಪೊಲೀಸರ ವಿಚಾರಣೆ ವೇಳೆ ಕೊಲೆಗೆ ಕಾರಣ ಬಿಚ್ಚಿಟ್ಟಿದ್ದಾನೆ. ಕಾಲೇಜಿನ ವಿದ್ಯಾರ್ಥಿನಿಯರ ಮುಂದೆ ಸೆಕ್ಯೂರಿಟಿ ಗಾರ್ಡ್ ತಡೆದಿದ್ದಕ್ಕೆ ಆತನನ್ನು ಚಾಕು ಇರಿದು ಹತ್ಯೆಗೈದಿದ್ದಾಗಿ ಆತ ಒಪ್ಪಿಕೊಂಡಿದ್ದಾನೆ.

ಕಾಲೇಜಿನಲ್ಲಿ ಕಾನ್ವೋಕೇಶನ್ ಡೇ ಆಯೋಜಿಸಲಾಗುತ್ತಿತ್ತು. ಈ ವೇಳೆ ಭಾರ್ಗವ್ ಮದ್ಯಪಾನ ಮಾಡಿ ಪದೇ ಪದೇ ಓಡಾಟ ಮಾಡುತ್ತಿದ್ದ. ಕಾರ್ಯಕ್ರಮ ಮುಗಿಯುವವರೆಗೂ ಓಡಾಟ ಮಾಡದಂತೆ ಆತನಿಗೆ ಸೂಚಿಸಲಾಗಿತ್ತು. ಆದರೂ ಮಾತು ಕೇಳದೆ ಪದೇ ಪದೇ ಆರೋಪಿ ಭಾರ್ಗವ್ ಕಾಲೇಜಿನ ಆವರಣದಲ್ಲಿ ಓಡಾಟ ನಡೆಸಿದ್ದ. ಈ ವೇಳೆ ಕಾಲೇಜಿನ ಸೆಕ್ಯೂರಿಟಿ ಗಾರ್ಡ್ ಜೈಕಿಶೋರ್ ರಾಯ್ ಅವರು ಆತನನ್ನು ತಡೆದು ಎಚ್ಚರಿಕೆ ನೀಡಿದ್ದರು. ಇದರಿಂದ ಕೋಪಗೊಂಡ ಭಾರ್ಗವ್ ಸೆಕ್ಯೂರಿಟಿ ಜೊತೆ ಗಲಾಟೆ ಮಾಡಿ, ಬಳಿಕ ಪಿಜಿಗೆ ತೆರಳಿ ಚಾಕು ತಂದು ಸೆಕ್ಯೂರಿಟಿಗೆ ಚುಚ್ಚಿ ಹತ್ಯೆಗೈದಿದ್ದ.

ಹತ್ತಾರು ಜನರ ಎದುರೇ ಆರೋಪಿ ಏಕಾಏಕಿ ಚಾಕುವಿನಿಂದ ಇರಿದಿದ್ದ. ಈ ವೇಳೆ ಆತನನ್ನು ತಡೆಯಲು ಇತರೇ ಸಿಬ್ಬಂದಿ ಯತ್ನಿಸಿದ್ದರು. ಆದರೆ ಅಷ್ಟರಲ್ಲಾಗಲೇ ಆತ ಹಲವು ಬಾರಿ ಚಾಕು ಇರಿದಿದ್ದು, ಸೆಕ್ಯೂರಿಟಿ ಗಾರ್ಡ್ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದರು. ಈ ಭಯಾನಕ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಅಸ್ಸಾಂ ಮೂಲದ ಭಾರ್ಗವ್ ಕಾಲೇಜಿನಲ್ಲಿ ಅಂತಿಮ ವರ್ಷದ ಬಿಎ ವ್ಯಾಸಂಗ ಮಾಡುತ್ತಿದ್ದ. ಆತ ಪಿಜಿಯಲ್ಲಿ ವಾಸವಿದ್ದ. ಪೋಷಕರ ಬಗ್ಗೆ ಮಾಹಿತಿ ಕಲೆ ಹಾಕಿದ್ದಾರೆ. ಕೊಲೆಯಾದ ಕಿಶೋರ್ ಉತ್ತರ ಭಾರತ ಮೂಲದವರಾಗಿದ್ದು,

### ಪೊಲೀಸರ ಮುಂದೆ ಬಾಯ್ಬಿಟ್ಟ ವಿದ್ಯಾರ್ಥಿ



ಕಳೆದ ಹತ್ತು ವರ್ಷಗಳಿಂದ ಇದೇ ಕಾಲೇಜಿನಲ್ಲಿ ಸೆಕ್ಯೂರಿಟಿ ಗಾರ್ಡ್‌ಗಳ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದರು. ಕಾಲೇಜಿನ ಭದ್ರತಾ ಲೋಪವೇ ಈ ಸಾವಿಗೆ ಕಾರಣ ಎಂದು ಮೃತ ಕಿಶೋರ್ ಕುಟುಂಬಸ್ಥರು ಆರೋಪಿಸಿದ್ದಾರೆ.

ಆರೋಪಿಯನ್ನು ಅಮೃತಹಳ್ಳಿ ಪೊಲೀಸರು ಬಂಧಿಸಿದ್ದು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

# ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯಲ್ಲಿ ಹೆಚ್‌ಡಿಕೆಗೆ ಸ್ಥಾನ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯಲ್ಲಿ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್ .ಡಿ.ಕುಮಾರಸ್ವಾಮಿಯವರು ಸ್ಥಾನ ಪಡೆದಿದ್ದಾರೆ. ಸಮಿತಿಯಲ್ಲಿ ಹೆಚ್ ಡಿಕೆ ಜೊತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗೃಹ ಸಚಿವ ಅಮಿತ್ ಶಾ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ವಿದೇಶಾಂಗ ಸಚಿವ ಜೈ ಶಂಕರ್, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ವಾಣಿಜ್ಯ ಸಚಿವ ಪಿಯೂಶ್ ಗೋಯಲ್, ಶಿಕ್ಷಣ ಸಚಿವ ಧರ್ಮೆಂದ್ರ



ಪ್ರಧಾನ್ ಮತ್ತು ಪಂಚಾಯತ್ ರಾಜ್ ಮತ್ತು ಮೀನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಅವರು ಸಹ ಸಮಿತಿಯಲ್ಲಿ ಸ್ಥಾನ ಪಡೆದಿದ್ದಾರೆ.

ಭದ್ರತೆ, ಆರ್ಥಿಕ ಮತ್ತು ರಾಜಕೀಯ ವ್ಯವಹಾರಗಳ ಕುರಿತಂತೆ ದೇಶದ ಅತ್ಯುನ್ನತ ಮಟ್ಟದಲ್ಲಿ ಮಹತ್ವದ ನಿರ್ಣಯ ಕೈಗೊಳ್ಳುವ 8 ವಿವಿಧ ಸಂಪುಟ ಸಮಿತಿಗಳನ್ನು ಕೇಂದ್ರ ಸರ್ಕಾರ ರಚನೆ ಮಾಡಿದೆ.

## ರಾಜ್ಯದ ಬಾಕಿ ರೈಲ್ವೆ ಯೋಜನೆ ಪೂರ್ಣಗೊಳಿಸಲು ಕೇಂದ್ರಕ್ಕೆ ಮಾಜಿ ಸಂಸದ ಡಿಕೆ ಸುರೇಶ್ ಮನವಿ

**ನವದೆಹಲಿ:** ರಾಜ್ಯದ ಬಾಕಿ ರೈಲ್ವೇ ಹಾಗೂ ಜಲ ಮಿಷನ್ ಯೋಜನೆಗಳನ್ನು ಆದಷ್ಟು ಶೀಘ್ರ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಮಾಜಿ ಸಂಸದ ಡಿ.ಕೆ.ಸುರೇಶ್ ಮನವಿ ಮಾಡಿದ್ದಾರೆ. ಡಿಕೆ ಸುರೇಶ್ ಅವರು ದೆಹಲಿಯಲ್ಲಿ ಕೇಂದ್ರ ರೈಲ್ವೇ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ಅವರನ್ನು ಬುಧವಾರ ಭೇಟಿ ಮಾಡಿ ಈ ಮನವಿ ಸಲ್ಲಿಸಿದರು. ಹೆಜ್ಜಾಲ, ಕನಕಪುರ ಹಾಗೂ ಚಾಮರಾಜನಗರ ಹೊಸ ರೈಲ್ವೇ ಮಾರ್ಗ ಈ ಹಿಂದೆಯೇ ಮಂಜೂರಾಗಿ, ಟೆಂಡರ್ ಪ್ರಕ್ರಿಯೆ ಆಗಿದ್ದರೂ ಕಾಮಗಾರಿ ಮಾತ್ರ ಆರಂಭವಾಗಿಲ್ಲ. ಅದೇ ರೀತಿ ರಾಜ್ಯದ ಅನೇಕ ರೈಲ್ವೇ ಯೋಜನೆಗಳು ಹತ್ತು ವರ್ಷಗಳಿಂದ ನೆನೆಗುದಿಗೆ ಬಿದ್ದಿವೆ. ಈ ಯೋಜನೆಗಳಿಗೆ ಅನುದಾನ ನೀಡಿ ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಿ ಎಂದು ಕೋರಿದರು. ಜಲಜೀವನ್ ಮಿಷನ್ ಅಡಿಯಲ್ಲಿ ಕುಡಿಯುವ ನೀರು ಯೋಜನೆಗಳಿಗೆ ಸಲ್ಲಿಸಿರುವ ಪ್ರಸ್ತಾವನೆಗಳು ಆರು ತಿಂಗಳಿನಿಂದ ಬಾಕಿ ಉಳಿದಿವೆ. ಅವುಗಳಿಗೆ ಮಂಜೂರಾತಿ ಕೊಡಿ ಎಂದು ಡಿಕೆ ಸುರೇಶ್ ವಿನಂತಿ ಮಾಡಿದ್ದು, ಸಚಿವ ಸೋಮಣ್ಣ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

## 2 ರೂ. ಕಡಿತ

ಈ ಮೊದಲು ಪ್ರತಿ ಲೀಟರ್ ಹಾಲಿಗೆ 33.40 ರೂ. ನೀಡಲಾಗುತ್ತಿತ್ತು. ಕೋಚಿಮುಲ್ ಆದೇಶದಿಂದ ಉತ್ಪಾದಕರಿಗೆ ಪರಿಷ್ಕೃತ ದರ ಲೀಟರ್ ಗೆ 31.40 ರೂ. ಸಿಗಲಿದೆ.

ಜನವರಿಯಲ್ಲಿ ಪ್ರತಿ ದಿನ ಕೋಚಿಮುಲ್‌ಗೆ 9.65 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿತ್ತು. ಆದರೆ ಜೂನ್ ತಿಂಗಳಿನಿಂದ ಪ್ರತಿ ದಿನ ಕೋಚಿಮುಲ್‌ಗೆ 12.37 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿದೆ.

ಕೋಲಾರ ? ಚಿಕ್ಕಬಳ್ಳಾಪುರ ಎರಡೂ ಜಿಲ್ಲೆಗಳಿಂದ ಎರಡೂವರೆ ಲಕ್ಷ ಲೀಟರ್ ಹಾಲು ಹೆಚ್ಚಳವಾದ ಕಾರಣ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಕೋಚಿಮುಲ್ ಈ ನಿರ್ಧಾರ ಕೈಗೊಂಡಿದೆ ಎನ್ನಲಾಗುತ್ತಿದೆ.

ಈಗಾಗಲೇ ಲೀಟರ್‌ಗೆ 2 ರೂ. ಹೆಚ್ಚಳ ಮಾಡಿ ಕೆಎಂಎಫ್ ಆದೇಶ ಹೊರಡಿಸಿದೆ. ಈಗ ರೈತರಿಗೆ 2 ರೂ. ಕಡಿತ ಮಾಡಿದ್ದು ಆಕ್ರೋಶಕ್ಕೆ ಕಾರಣವಾಗಿದೆ.

## ಮಂದಿಗೆ ಗಾಯ

ಜುಲೈ 4 ರಂದು ನಡೆದ ವಿಜಯ ಯಾತ್ರೆಯಲ್ಲಿ ವಾಂಖೆಡೆ ಸ್ಟೇಡಿಯಂಗೆ ಹೋಗುವ ಮುನ್ನ ಲಕ್ಷಾಂತರ ಅಭಿಮಾನಿಗಳು ಚಾಂಪಿಯನ್‌ಗಳನ್ನು ಸ್ವಾಗತಿಸಲು ಬಂದಿದ್ದರು. ಅಭಿಮಾನಿಗಳ ಇಂತಹ ಉತ್ಸಾಹವನ್ನು ಕಂಡ ವಿಶ್ವ ಚಾಂಪಿಯನ್‌ಗಳು ಎಲ್ಲರಿಗೂ ಧನ್ಯವಾದ ಹೇಳಿದ್ದಾರೆ.

ಈ ಯಾತ್ರೆಯ ನಂತರ ರಸ್ತೆಯ ಮೇಲೆ ಚಪ್ಪಲಿಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ ಮತ್ತು ಮರೈನ್ ಡ್ರೈವ್ ಸುತ್ತಮುತ್ತ ನಿಲ್ಲಿಸಿದ್ದ ಕಾರುಗಳಿಗೂ ಹಾನಿಗಳಾಗಿವೆ. ಬಾಲಕಿಯೊಬ್ಬಳು ಪ್ರಜ್ಞಾಹೀನಳಾಗಿ ಬಿದ್ದಿದ್ದಳು.

ವಿಜಯೋತ್ಸವದ ಮೆರವಣಿಗೆಯು ದಕ್ಷಿಣ ಮುಂಬೈನಲ್ಲಿ ಭಾರಿ ಟ್ರಾಫಿಕ್ ಜಾಮ್‌ಗೆ ಕಾರಣವಾಯಿತು ಮತ್ತು ಪೊಲೀಸರು ಮರೈನ್ ಡ್ರೈವ್ ಕಡೆಗೆ ವಾಹನ ಸಂಚಾರವನ್ನು ನಿಲ್ಲಿಸಿದರು, ಪರ್ಯಾಯ ಮಾರ್ಗಗಳಲ್ಲಿ ಗೊಂದಲವನ್ನು ಉಂಟುಮಾಡಿದರು. ಅದೇ ಸಮಯದಲ್ಲಿ, ವಾಂಖೆಡೆ ಕ್ರೀಡಾಂಗಣವು ಕಿಕ್ಕಿರಿದು ತುಂಬಿತ್ತು, ಅಲ್ಲಿ ಬಿಸಿಸಿಐನ ಉನ್ನತ ಅಧಿಕಾರಿಗಳು ಆಟಗಾರರಿಗೆ 125 ಕೋಟಿ ರೂಪಾಯಿಗಳ ಬಹುಮಾನವನ್ನು ನೀಡಿ ಗೌರವಿಸಿದರು.

## ಬೆಂಕಿ ಹಚ್ಚಿಕೊಂಡ ಯುವಕ

ನಮ್ಮ ಸ್ಥಿತಿಯಿಂದ ಬೇಸರಗೊಂಡು ಯಾರೋ ನಮಗೆ ಈ ಆಸ್ತಿ ನೀಡಿದ್ದರು ಎಂದು ಆತನ ತಾಯಿ ಕಲ್ಯಾಣಿ ಹೇಳಿದ್ದಾರೆ.

ಎರಡು ವರ್ಷಗಳ ಹಿಂದೆ ತಿರುವಳ್ಳೂರಿನ ಗುಮ್ಮಿಡಿಪೂಂಡಿ ಬಳಿಯ ನೇತಾಜಿ ನಗರದಲ್ಲಿ ಆಕೆಯ ಮನೆಯ ಪಕ್ಕದಲ್ಲಿ ಬಹುಮಹಡಿ ಅಪಾರ್ಟ್‌ಮೆಂಟ್ ನಿರ್ಮಾಣವಾದಾಗ ಪರಿಸ್ಥಿತಿ ಮತ್ತೊಂದು ತಿರುವು ಪಡೆಯಿತು. ಕಲ್ಯಾಣಿ ಅವರ ಮನೆ ಅತಿಕ್ರಮಣವಾಗಿದ್ದು ನಮ್ಮ ದಾರಿಗೆ ಅಡ್ಡಿಯಾಗುತ್ತಿದೆ ಎಂದು ಆರೋಪಿಸಿ ನಿವಾಸಿಗಳು ದೂರು ನೀಡಿದ್ದರು.

ಅಧಿಕಾರಿಗಳು ನಡೆಸಿದ ತನಿಖೆಯಲ್ಲಿ ಭೂಮಿಯ ಭಾಗವು ಇನ್ನೂ ಜಾಗ ನೀಡಿದವರ ಹೆಸರಿನಲ್ಲಿದೆ. ಆದರೂ ಕೂಡ ವಾರಗಳ ಹಿಂದೆ ಕಲ್ಯಾಣಿಯವರ ನಿವಾಸಕ್ಕೆ ಅಧಿಕಾರಿಗಳು ಬಂದು ಮನೆ ಖಾಲಿ ಮಾಡುವಂತೆ ನೋಟಿಸ್ ನೀಡಿದ್ದರು. ಕಲ್ಯಾಣಿ ಒಂದು ತಿಂಗಳ ಕಾಲಾವಕಾಶ ಕೋರಿದ್ದರು, ಗುರುವಾರ ಅಧಿಕಾರಿಗಳು ಬುಲ್ಡೋಜರ್ ನೊಂದಿಗೆ ಆಗಮಿಸಿ ಮನೆ ಕೆಡವಲು ಮುಂದಾಗಿದ್ದರು.

ಈ ಕ್ರಮ ತಡೆಯುವ ನಿಟ್ಟಿನಲ್ಲಿ ರಾಜ್ ಕುಮಾರ್ ಮೈಗೆ ಬೆಂಕಿ ಹಚ್ಚಿಕೊಂಡು ಹೊರಗೆ ಓಡಿ ಅಧಿಕಾರಿಗಳನ್ನು ಬೆದರಿಸಲು ಪ್ರಯತ್ನಿಸಿದರು.ಅಗ್ನಿ ಶಾಮಕ ತಂಡವು ತಕ್ಷಣವೇ ಅವರನ್ನು ರಕ್ಷಿಸಿದ್ದಾರೆ. ಆದರೆ ಅವರ ದೇಹದ 60ರಷ್ಟು ಭಾಗಕ್ಕೆ ಗಾಯಗಳಾಗಿವೆ. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ತಮಿಳುನಾಡು ಬಿಜೆಪಿ ಅಧ್ಯಕ್ಷ ಅಣ್ಣಾಮಲೈ ಕ್ರಮಗಳನ್ನು ಖಂಡಿಸಿದ್ದಾರೆ ಮತ್ತು ಎಂಕೆ ಸ್ಟಾಲಿನ್ ನೇತೃತ್ವದ ಡಿಎಂಕೆ ಸರ್ಕಾರವನ್ನು ದೂಷಿಸಿದ್ದಾರೆ. ಈ ಡಿಎಂಕೆ ಆಡಳಿತದಲ್ಲಿ ರಿಯಲ್ ಎಸ್ಟೇಟ್ ದೊರೆಗಳು ಲಾಭಗಳು ಮತ್ತು ಅಭೂತಪೂರ್ವ ಸವಲತ್ತುಗಳನ್ನು ಅನುಭವಿಸುತ್ತಿದ್ದರೆ, ಸಾಮಾನ್ಯ ಜನರ ಮನೆಗಳು ಅಕ್ರಮ ನಿರ್ಮಾಣ ಎಂದು ನೆಲಸಮವಾಗಿವೆ ಎಂದು ದೂರಿದ್ದಾರೆ.

ಮೊದಲನೇ ಪುಟದಿಂದ...

## ರೋಟರಿ ಫ್ಲೈಓವರ್

**ಎಷ್ಟು ವೆಚ್ಚದ ಯೋಜನೆ:** ಬಿಬಿಎಂಪಿ ಎಲಿವೇಟೆಡ್ ರೋಟರಿ ಮೇಲ್ಸೇತುವೆ ಯೋಜನೆಗೆ ಬಿಬಿಎಂಪಿ 380 ಕೋಟಿ ರೂಪಾಯಿಗಳನ್ನು ನಿಗದಿಪಡಿಸಿದೆ. ಇದಲ್ಲದೆ, ಐಟಿಸಿ ಲಿಮಿಟೆಡ್ ಬಳಿಯ ಮಾರುತಿ ಸೇವಾನಗರದಿಂದ ಬಾಣಸವಾಡಿ ಮುಖ್ಯರಸ್ತೆಯವರೆಗೆ 4.5 ಕಿಮೀ ಉದ್ದದ ಎಲಿವೇಟೆಡ್ ರೋಟರಿ ಮೇಲ್ಸೇತುವೆಯನ್ನು ನಿರ್ಮಾಣ ಮಾಡುವ ಬಗ್ಗೆಯೂ ಬಿಬಿಎಂಪಿ ಚಿಂತನೆ ನಡೆಸಿದೆ.

**ಎಲಿವೇಟೆಡ್ ರೋಟರಿ ಫ್ಲೈಓವರ್ ಕಾಮಗಾರಿ ಗಡುವು ಯಾವಾಗ?:** ಎಲಿವೇಟೆಡ್ ರೋಟರಿ ಫ್ಲೈಓವರ್ ನಿರ್ಮಾಣಕ್ಕೆ ಬಿಬಿಎಂಪಿ ಪ್ರಸ್ತಾವನೆ ಸಲ್ಲಿಸಿದ್ದು, ಈ ಸಂಬಂಧ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. ಮೇಲ್ಸೇತುವೆ ಉದ್ಘಾಟನೆ ದಿನಾಂಕ ಇನ್ನೂ ತಿಳಿದುಬಂದಿಲ್ಲ.

**ಫ್ಲೈಓವರ್ ವಿಶೇಷತೆಗಳೇನು?:** ಎಲಿವೇಟೆಡ್ ರೋಟರಿ ಫ್ಲೈಓವರ್ ಕಮ್ಮನಹಳ್ಳಿ, ಹಳೆ ಮದ್ರಾಸ್ ರಸ್ತೆ, ಬಾಣಸವಾಡಿ ಮತ್ತು ಸರ್ ಎಂವಿ ಟರ್ಮಿನಲ್ ಕಡೆಗೆ ನಾಲ್ಕು ನಿರ್ಗಮನಗಳೊಂದಿಗೆ ವೃತ್ತಾಕಾರದ ಜಂಕ್ಷನ್‌ನ ವೈಶಿಷ್ಟ್ಯಗಳನ್ನು ಹೊಂದಿರಲಿದೆ.

ವೃತ್ತಾಕಾರದ ಜಂಕ್ಷನ್‌ನಲ್ಲಿ ನಾಲ್ಕು ಲೇನ್‌ಗಳು, ಪ್ರತಿಯೊಂದೂ 3.5 ಮೀಟರ್ ಅಗಲ ಮತ್ತು 7.5 ಮೀಟರ್ ಅಗಲದ ಅಪ್ರೋಚ್ ರ ಯಾಂಪ್‌ಗಳು ಇರಲಿವೆ. ವಾಹನವು ನಿರ್ಗಮನವನ್ನು ತಪ್ಪಿಸಿಕೊಂಡರೆ, ನಿರ್ಗಮನ ರ ಯಾಂಪ್ ತಲುಪಲು ಅದು ಪೂರ್ಣ ಸರ್ಕಲ್ ಸಂಚರಿಸಬೇಕಾಗುತ್ತದೆ. ಈ ಮೇಲ್ಸೇತುವೆಯಲ್ಲಿ ವಾಹನದ ವೇಗ ಗಂಟೆಗೆ 30 ಕಿಮೀಗಿಂತ ಕಡಿಮೆ ಇರಲಿದೆ.

ರೋಟರಿ ಮೇಲ್ಸೇತುವೆಯ ವೃತ್ತಾಕಾರದ ಜಂಕ್ಷನ್ ಮುಕುಂದ ಥಿಯೇಟರ್ ಬಳಿ ಇದೆ ಮತ್ತು 95 ಮೀಟರ್ ವ್ಯಾಸವನ್ನು ಹೊಂದಿರಲಿದೆ ಎಂದು ನಿರೀಕ್ಷಿಸಲಾಗಿದೆ.

## ಮನವಿ

ಕಳೆದ ಒಂದು ತಿಂಗಳಿನಿಂದ ನಗರದ ಆಸ್ಪತ್ರೆಗಳಲ್ಲಿ ಹೆಪಟೈಟಿಸ್ ಬಿ ಲಸಿಕೆಯ ಕೊರತೆ ಎದುರಾಗಿದೆ. ಆಸ್ಪತ್ರೆಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೂ ಲಸಿಕೆಯನ್ನ ನೀಡಿಲ್ಲ. ಜೊತೆಗೆ ಮಗುವಿಗೆ ಹೆಪಟೈಟಿಸ್ ಬಿ ಲಸಿಕೆಯನ್ನು ಕಡ್ಡಾಯವಾಗಿ ನೀಡಬೇಕಾಗಿದ್ದು, ಹೊರ ರಾಜ್ಯಗಳಿಂದ ಆಮದು ಮಾಡಿಕೊಳ್ಳುವ ಅನಿವಾರ್ಯತೆ ಶೃಷ್ಠಿಯಾಗಿದೆ. ಮಗುವಿಗೆ ಬೂಸ್ಟರ್ ಡೋಸ್ ಸೇರಿದಂತೆ ಮೂರು ಡೋಸ್ ಲಸಿಕೆ ನೀಡಲಾಗುತ್ತದೆ. ಆದರೆ ನಗರದ ಖಾಸಗಿ ಆಸ್ಪತ್ರೆಗಳಲ್ಲಿ ಹೆಪಟೈಟಿಸ್ ಬಿ ವ್ಯಾಕ್ಸಿನ್ ಸಿಗುತ್ತಿಲ್ಲ, ಇದರಿಂದಾಗಿ ಸಾಕಷ್ಟು ಸಮಸ್ಯೆಯಾಗಿದೆ.

ಹೆಪಟೈಟಿಸ್ ಬಿ ಸೋಂಕು ಹೆಚ್?1ಎನ್1 ನಷ್ಟೇ ಪರಿಣಾಮಕಾರಿಯಾಗಿದ್ದು, ಲಸಿಕೆ ಕಡ್ಡಾಯವಾಗಿ ನೀಡಬೇಕು. ಜೊತೆಗೆ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ವೈದ್ಯರು ಮೂರು ಡೋಸ್?ಗಳನ್ನ ಅಗತ್ಯವಾಗಿ ತೆಗೆದುಕೊಳ್ಳಬೇಕು. ಲಸಿಕೆ ತಯಾರಿಕೆಗೆ ಬೇಕಾದ ಕಚ್ಚಾ ವಸ್ತುಗಳು ಸರಿಯಾಗಿ ಸಿಗುತ್ತಿಲ್ಲ ಎಂಬ ಕಾರಣಕ್ಕೆ ಲಸಿಕೆ ಉತ್ಪಾದನೆಯಾಗುವುದು ಕಡಿಮೆಯಾಗಿದೆ. ಹೀಗಾಗಿ ಆಸ್ಪತ್ರೆಗಳಿಗೆ ಸರಿಯಾಗಿ ಪೂರೈಕೆಯಾಗುತ್ತಿಲ್ಲ, ಜನವರಿಯಿಂದಲೂ ಹೆಪಟೈಟಿಸ್ ಬಿ ಲಸಿಕೆಗೆ ಬೇಡಿಕೆ ಇದ್ದು, ಮೊದಲು ಲಸಿಕೆ ಪೂರೈಸಿ ಅಂತ ವೈದ್ಯರು ಸರ್ಕಾರಕ್ಕೆ ಮನವಿ ಮಾಡುತ್ತಿದ್ದಾರೆ.

ಈ ಬಗ್ಗೆ ಆರೋಗ್ಯ ಸಚಿವ ದಿನೇಶ್ ಗುಂಡ್ ರಾವ್ ಮಾತನಾಡಿ, ನನಿಗೆ ಈಗಷ್ಟೇ ಮಾಹಿತಿ ಸಿಕ್ಕಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಸಮಸ್ಯೆಯಾಗುತ್ತಿದೆ. ಲಸಿಕೆ ಸಪ್ಲೈನಲ್ಲಿ ಸಮಸ್ಯೆಯಾಗುತ್ತಿದೆ ಸರಿಪಡಿಸುತ್ತೇನೆ ಎಂದು ಹೇಳಿದರು.

ಒಟ್ಟಿನಲ್ಲಿ, ಹೆಪಟೈಟಿಸ್ ಸೋಂಕು ಭಾರಿ ಪರಿಣಾಮಕಾರಿಯಾಗಿದ್ದು, ಲಸಿಕೆ ಕೊರತೆಯಿಂದ ಜನರಿಗೆ ಸಮಸ್ಯೆಯಾಗದಂತೆ ಸರ್ಕಾರ ನಿಗಾ ವಹಿಸಬೇಕಾಗಿದೆ.

## ಹೆಚ್ಚಿದ ಡೆಂಗ್ಯೂ

**ಸೊಳ್ಳೆ ಉತ್ಪತ್ತಿಯ ಹಾಟ್ ಸ್ಪಾಟ್ ಗಳು:** ಒಂದೆಡೆ ಖಾಸಗಿಯವರಿಗೆ ದಂಡ ವಿಧಿಸಲು ಬಿಬಿಎಂಪಿ ಮುಂದಾಗಿದ್ದರೆ ಅತ್ತ ಸಾರ್ವಜನಿಕ ಸ್ಥಳಗಳೇ ಸೊಳ್ಳೆ ಉತ್ಪತ್ತಿಯ ಹಾಟ್ ಸ್ಪಾಟ್ ಗಳಾಗಿ ಪರಿಣಮಿಸಿರುವುದು ಕಂಡುಬಂದಿದೆ. ನಗರದ ಬಹುತೇಕ ರಸ್ತೆಗಳಲ್ಲಿರುವ ಕಸದ ರಾಶಿ ಇದೀಗ ಸೊಳ್ಳೆಗಳ ಸ್ಪಾಟ್ ಆಗಿ ಬದಲಾಗಿದೆ. ಸಸ್ಯಕಾಶಿ ಲಾಲ್ ಬಾಗ್ ಸುತ್ತಮುತ್ತ ಫುಟ್ ಪಾತ್ ನಲ್ಲಿ ರಾಶಿ ರಾಶಿ ಕಸ ಬಿದ್ದಿದ್ದು, ಕಸದ ರಾಶಿ ಸೊಳ್ಳೆಗಳ ವಾಸಸ್ಥಾನವಾಗಿರುವುದರಿಂದ ಡೆಂಗ್ಯೂ ಮತ್ತಷ್ಟು ಹೆಚ್ಚಾಗುವ ಆತಂಕ ಎದುರಾಗಿದೆ.

ವಿಧಾನಸೌಧದ ಕೂಗಳತೆ ದೂರದಲ್ಲಿರುವ ಕೆಆರ್ ಸರ್ಕಲ್ ಬಳಿ ಪಾಲಿಕೆಯೇ ನಿರ್ಮಿಸಿದ್ದ ಕಾರಂಜಿ ಇದೀಗ ಸೊಳ್ಳೆಗಳ ಹಾಟ್ ಸ್ಪಾಟ್ ಆಗಿ ಬದಲಾಗಿದೆ. ಮಳೆ ನೀರು ನಿಂತಿರುವ ಜಾಗದಲ್ಲಿ ಸೊಳ್ಳೆಗಳ ಉತ್ಪತ್ತಿಯಾಗ್ತಿದ್ದು, ಕಾರಂಜಿಯನ್ನ ಸರಿಯಾಗಿ ನಿರ್ವಹಿಸದ ಪಾಲಿಕೆ ಹಾಗೂ ಸರ್ಕಾರಕ್ಕೆ ಜನರು ಹಿಡಿಶಾಪ ಹಾಕ್ತಿದ್ದಾರೆ.

ಇತ್ತ ನಗರದಲ್ಲಿ ಮನೆ ಮನೆ ಸರ್ವೆ ಮಾಡುತ್ತಿದ್ದೇವೆ ಎನ್ನುತ್ತಿರುವ ಪಾಲಿಕೆ ಅಧಿಕಾರಿಗಳನ್ನು ಈ ಬಗ್ಗೆ ಕೇಳಿದರೆ ಸಾರ್ವಜನಿಕ ಸ್ಥಳಗಳಲ್ಲಿ ಎಲ್ಲೆಲ್ಲಿ ಅಂಥ ಸ್ಥಳಗಳಿವೆಯೋ ಅಲ್ಲೆಲ್ಲ ನಿಗಾ ಇಟ್ಟಿದ್ದೇವೆ. ನಮ್ಮ ತಂಡ ಸ್ವಚ್ಛತೆ ಕಾಪಾಡಲು ಕ್ರಮ ಕೈಗೊಳ್ಳುತ್ತಿದೆ ಎಂದು ಸಬೂಬು ಹೇಳುತ್ತಿದ್ದಾರೆ.

## ಸಲ್ಲಿಕೆ!

ಆರೋಪಿ ಆದಿತ್ಯಮ್ ಕಡೆಯವರು ಜಾಮೀನಿಗಾಗಿ ನ್ಯಾಯಾಲಯಕ್ಕೆ ನಕಲಿ ಶ್ಯೂರಿಟಿ ಸಲ್ಲಿಸಿದ್ದರು.

ಚಿಕ್ಕಬಳ್ಳಾಪುರ ಮೂಲದ ಓರ್ವ ರೈತರ ಹೆಸರಿನಲ್ಲಿ ನಕಲಿ ಆಧಾರ್ ಕಾರ್ಡ್, ನಕಲಿ ಜಮೀನು ದಾಖಲೆಗಳನ್ನು ಸೃಷ್ಟಿಸಿದ್ದರು. ನಕಲಿ ದಾಖಲೆಗಳಲ್ಲದೆ ಈತನೇ ಜಮೀನು ಮಾಲಿಕ ಅಂತ ನಕಲಿ ವ್ಯಕ್ತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ಈ ವಿಚಾರ ತಿಳಿದ ಚಿಕ್ಕಬಳ್ಳಾಪುರ ಮೂಲದ ರೈತ ಸಿಸಿಬಿಗೆ ದೂರು ನೀಡಿದ್ದರು. ಪೊಲೀಸರ ತಪಾಸಣೆ ವೇಳೆ ದಾಖಲೆ ಪತ್ರಗಳು ನಕಲಿ ಎಂದು ತಿಳಿದು ಬಂತು. ಸದ್ಯ ಸಿಸಿಬಿ ಪೊಲೀಸರು ಎಫ್ ಐಆರ್ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಇದೇ ರೀತಿ ನಿವೃತ ಎಎಸ್ ಐ ಅಧಿಕಾರಿಯ ಹೆಸರಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಶ್ಯೂರಿಟಿ ಸಲ್ಲಿಸಲಾಗಿತ್ತು. ಸಿದ್ದಾಪುರ ಪೊಲೀಸರು ಪೋಕ್ಸೋ ಪ್ರಕರಣದಲ್ಲಿ ನವೀದ್ ಪಾಷ ಎಂಬಾತನನ್ನು ಬಂಧಿಸಿದ್ದರು. ಆರೋಪಿ ಕಡೆಯವರು ಜಾಮೀನು ವೇಳೆ ನಕಲಿ ಶ್ಯೂರಿಟಿ ಸಲ್ಲಿಸಿದ್ದರು. ನಿವೃತ್ತ ಎಎಸ್ ಐ ಅಧಿಕಾರಿ ಹೆಸರಿನ ನಕಲಿ ಆಧಾರ್ ಕಾರ್ಡ್, ಜಮೀನು ದಾಖಲೆಗಳನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಶ್ಯೂರಿಟಿ ಸಲ್ಲಿಸಿದ್ದರು. ಪೊಲೀಸ ತಪಾಸಣೆ ನಡೆಸಿದಾಗ ನಕಲಿ ದಾಖಲೆಗಳನ್ನು ಸಲ್ಲಿಸಿರುವುದು ಬಯಲಾಗಿದೆ.

ನಕಲಿ ದಾಖಲೆ ಸಲ್ಲಿಸಿದ್ದವರ ವಿರುದ್ಧ ಕ್ರಮಕ್ಕೆ ನಿವೃತ್ತ ಎಎಸ್ ಐ ನ್ಯಾಯಾಲಯದ ಮೊರೆಹೋಗಿದ್ದಾರೆ. ಸದ್ಯ ಆರೋಪಿ ನವೀನ್ ಪಾಷಾ ಜಾಮೀನನ್ನು ನ್ಯಾಯಾಲಯ ವಜಾಗೊಳಿಸಿದೆ. ನಕಲಿ ದಾಖಲೆ ಸೃಷ್ಟಿ ಹಿಂದೆ ದೊಡ್ಡ ಜಾಲವೇ ಇರುವುದು ಪತ್ತೆಯಾಗಿದೆ.

## ಮಹಿಳೆ

ಶಾರದಾ ಎಂಬ ಮಹಿಳೆ ಬಟ್ಟೆ ಖರೀದಿಸಲು ಜೇಡರಪಾಳ್ಯಂನಿಂದ ಸೇಲಂಗೆ ತೆರಳಿದ್ದು, ಖಾಸಗಿ ಬಸ್ ನಲ್ಲಿ ಮನೆಗೆ ಮರಳುತ್ತಿದ್ದರು. ಆಕೆ ಬಸ್ ನಿಂದ ಸುಮಾರು 20 ಅಡಿ ದೂರದಲ್ಲಿ ಬಿದ್ದಿದ್ದಾಳೆ, ಗಾಬರಿಗೊಂಡ ಪ್ರಯಾಣಿಕರು ಕಂಡಕ್ಟರ್ ಗೆ ಮಾಹಿತಿ ನೀಡಿ ಬಸ್ ನಿಲ್ಲಿಸಿದ್ದಾರೆ. ಪ್ರಯಾಣಿಕರು ಶಾರದಾಗೆ ಸಹಾಯ ಮಾಡಿದರು. ಚಿಕಿತ್ಸೆಗಾಗಿ ಸೇಲಂನ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಗಂಭೀರವಾಗಿ ಗಾಯಗೊಂಡಿದ್ದರೂ ಜೀವಕ್ಕೆ ಅಪಾಯವಿಲ್ಲ ಎಂಬುದು ತಿಳಿದುಬಂದಿದೆ. ಈ ವಿಡಿಯೋದಲ್ಲಿ ಹಲವು ಮಹಿಳೆಯರು ನಿಂತು ಪ್ರಯಾಣಿಸುತ್ತಿರುವುದು ಕಂಡು ಬಂದಿದೆ, ಅವರಲ್ಲಿ ಶಾರದಾ ಬಾಗಿಲ ಮುಂದೆಯೇ ನಿಂತಿದ್ದರು, ಬಾಗಿಲು ತೆರೆದಿತ್ತು, ಮಹಿಳೆಯರು ಮತ್ತು ಮಕ್ಕಳು ಬಸ್ಸಿನ ಮುಂಭಾಗದಲ್ಲಿ ನಿಂತಿದ್ದರೆ, ಪುರುಷರು ಹಿಂಭಾಗದಲ್ಲಿ ನಿಂತಿದ್ದರು.

ಈ ವೇಳೆ ಶಾರದಾ ಪೋಲ್ ಹಿಡಿದು ನಿಂತಿದ್ದರು, ಬಸ್ ಕರ್ವಿಂಗ್ ನಲ್ಲಿ ತಿರುಗಿದಾಗ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದಾರೆ. ಇದನ್ನು ಕಂಡು ಗಾಬರಿಗೊಂಡ ಜನರು ಬಸ್ ನಿಲ್ಲಿಸುವಂತೆ ಮನವಿ ಮಾಡಿದ್ದಾರೆ. ವಿಡಿಯೋ ಎರಡನೇ ಭಾಗದಲ್ಲಿ ಶಾರದಾ ಎಷ್ಟು ವೇಗವಾಗಿ ಬಿದ್ದಿದ್ದಾಳೆಂಬುದನ್ನು ಕಾಣಬಹುದು. ಬಸ್ ನಿಂತ ತಕ್ಷಣ ಜನರು ಆಕೆಯ ಸಹಾಯಕ್ಕಾಗಿ ಓಡಿದರು, ಬಳಿಕ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು.

# ಕರ್ನಾಟಕದಲ್ಲಿ 21 ಐಎಎಸ್ ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು:** ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆ ಕರ್ನಾಟಕ ಸರ್ಕಾರ ಆಡಳಿತ ವರ್ಗದಲ್ಲಿ ಮೇಜರ್ ಸರ್ಜರಿ ಮಾಡುತ್ತಿದೆ. ಇತ್ತೀಚಿಗೆ, ಸರ್ಕಾರ 25 ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿತ್ತು. ಇದೀಗ, ಕರ್ನಾಟಕ ಸರ್ಕಾರ 21 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಮೈಸೂರು ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ಅವರನ್ನು ಪ್ರವಾಸೋದ್ಯಮ ನಿರ್ದೇಶಕರಾಗಿ ಬೆಂಗಳೂರಿಗೆ ವರ್ಗಾವಣೆ ಮಾಡಲಾಗಿದೆ. ಮೈಸೂರು ಜಿಲ್ಲಾಧಿಕಾರಿಯಾಗಿ ಲಕ್ಷ್ಮೀಕಾಂತ್ ರೆಡ್ಡಿ ಅವರನ್ನು ನೇಮಕ ಮಾಡಲಾಗಿದೆ. ಲಕ್ಷ್ಮಿಕಾಂತ್ ಅವರು ಈ ಹಿಂದೆ ಮೈಸೂರು ಪಾಲಿಕೆ ಆಯುಕ್ತರಾಗಿದ್ದರು.




ವರ್ಗಾವಣೆಯಾದ ಅಧಿಕಾರಿಗಳು ಮತ್ತು ನಿಯುಕ್ತಗೊಂಡ ಇಲಾಖೆ

- ಡಾ ರಾಮ್ ಪ್ರಸಾತ್ ಮನೋಹರ್ ವಿ.: ನಗರಾಭಿವೃದ್ಧಿ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ, ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
- ನಿತೇಶ್ ಪಾಟೀಲ್: ನಿರ್ದೇಶಕರು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಇಲಾಖೆ, ಬೆಂಗಳೂರು.
- ಡಾ. ಅರುಂಧತಿ ಚಂದ್ರಶೇಖರ್: ಆಯುಕ್ತೆ ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
- ಜ್ಯೋತಿ ಕೆ: ಆಯುಕ್ತೆ ಜವಳಿ ಅಭಿವೃದ್ಧಿ ಮತ್ತು ಕೈಮಗ್ಗ ಮತ್ತು ಜವಳಿ ಇಲಾಖೆ ನಿರ್ದೇಶಕರು, ಬೆಂಗಳೂರು.
- ಶ್ರೀಧರ ಸಿಎನ್: ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
- ರಾಮ್ ಪ್ರಸಾತ್ ಮನೋಹರ್: ವ್ಯವಸ್ಥಾಪಕರು ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಬೆಂಗಳೂರು.
- ಚಂದ್ರಶೇಖರ ನಾಯಕ ಎಲ್: ಆಯುಕ್ತರು ವಾಣಿಜ್ಯ ತೆರಿಗೆಗಳ ಹೆಚ್ಚುವರಿ (ಜಾರಿ), ಬೆಂಗಳೂರು.
- ವಿಜಯಮಹಾಂತೇಶ ಬಿ ದಾನಮ್ಮನವರ್: ಉಪ ಆಯುಕ್ತ, ಹಾವೇರಿ ಜಿಲ್ಲೆ
- ಗೋವಿಂದ ರೆಡ್ಡಿ: ಉಪ ಆಯುಕ್ತ, ಬೀದರ್
- ರಘುನಂದನ್ ಮೂರ್ತಿ: ಆಯುಕ್ತರು ಖಜಾನೆಗಳು ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
- ಡಾ. ಗಂಗಾಧರಸ್ವಾಮಿ ಜಿ ಎಂ: ಉಪ ಆಯುಕ್ತ , ದಾವಣಗೆರೆ ಜಿಲ್ಲೆ
- ನಿತೀಶ್ ಕೆ: ಉಪ ಆಯುಕ್ತ, ರಾಯಚೂರು ಜಿಲ್ಲೆ
- ಮೊಹಮ್ಮದ್ ರೋಶನ್: ಉಪ ಆಯುಕ್ತ, ಬೆಳಗಾವಿ ಜಿಲ್ಲೆ
- ಶಿಲ್ಪಾ ಶರ್ಮಾ: ಉಪ ಆಯುಕ್ತೆ, ಬೀದರ್ ಜಿಲ್ಲೆ
- ಡಾ ದಿಲೀಶ್ ಸಸಿ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಸಿಟಿಜನ್ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ, ಸಿಬ್ಬಂದಿ ಇಲಾಖೆ ಮತ್ತು ಆಡಳಿತಾತ್ಮಕ ಸುಧಾರಣೆಗಳು (ಇ-ಆಡಳಿತ) ಕೇಂದ್ರ, ಬೆಂಗಳೂರು.
- ಲೋಖಂಡೆ ಸ್ನೇಹಲ್ ಸುಧಾಕರ್: ನಿರ್ದೇಶಕ, ಕರ್ನಾಟಕ ವಿದ್ಯುತ್ ವ್ಯವಸ್ಥಾಪಕ ಕಾರ್ಖಾನೆ ಲಿಮಿಟೆಡ್
- ಶ್ರೀರೂಪ: ಆಯುಕ್ತೆ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು, ನಿರ್ದೇಶರು ಕರ್ನಾಟಕ ರಾಜ್ಯ ರೇಷ್ಮೆ ಕೃಷಿ ಸಂಶೋಧನೆ ಅಭಿವೃದ್ಧಿ ಸಂಸ್ಥೆ
- ಗಿಟ್ಟೆ ಮಾಧವ್ ವಿಠ್ಠಲ್ ರಾವ್: ಪ್ರಧಾನ ವ್ಯವಸ್ಥಾಪಕರು, (ಪುನರ್ವಸತಿ ಮತ್ತು ಪುನರ್ವಸತಿ), ಬಾಗಲಕೋಟೆ.
- ಹೇಮಂತ್ ಎನ್: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ನೊಂಗ್ಜೈ ಮೊಹಮ್ಮದ್
- ಅಲಿ ಅಕ್ರಮ್ ಶಾ: ಮುಖ್ಯ ಕಾರ್ಯನಿರ್ವಾಹಕ, ವಿಜಯನಗರ ಜಿಲ್ಲೆ ಜಿಲ್ಲಾ ಪಂಚಾಯತ್ ಇಲಾಖೆ.
- 21 ಐಎಎಸ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ.

## ವರದಕ್ಷಿಣೆ ಕಿರುಕುಳ: ನವವಿವಾಹಿತೆ ಆತ್ಮಹತ್ಯೆಗೆ ಶರಣು

**ಬೆಂಗಳೂರು:** ಎರಡು ವರ್ಷದ ಹಿಂದೆ ಮದುವೆಯಾಗಿದ್ದ ಟೆಕ್ಕಿಯೊಬ್ಬರು ಆತ್ಮಹತ್ಯೆಗೆ ಶರಣಾದ ಘಟನೆ ಬೆಂಗಳೂರಿನ ಗಂಗಮ್ಮನ ಗುಡಿಯಲ್ಲಿ ನಡೆದಿದೆ. ಪೂಜಾ(22) ಆತ್ಮಹತ್ಯೆ ಶರಣಾದ ವಿವಾಹಿತೆ. ಪೂಜಾ ಮನೆಯಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಳೆದ ಎರಡು ವರ್ಷಗಳ ಹಿಂದೆ ಸುನೀಲ್ ಎಂಬಾತನನ್ನು ಪೂಜಾ ಮದುವೆಯಾಗಿದ್ದರು.

ಮದುವೆಯಾದ ಬಳಿಕ ವರದಕ್ಷಿಣೆಗಾಗಿ ಪತಿ ಪೀಡಿಸುತ್ತಿದ್ದ. ಇದರಿಂದ ಮನನೊಂದು ಮಗಳು ಆತ್ಮಹತ್ಯೆಗೆ ಶರಣಾಗಿದ್ದಾಳೆ. ಮಗಳ





ಸಾವಿಗೆ ಪತಿ ಸುನೀಲ್ ಹಾಗೂ ಮೈದುನ ಅನಿಲ್ ಕಾರಣ ಎಂದು ಪೂಜಾ ಪೋಷಕರು ಆರೋಪಿಸಿದ್ದಾರೆ.

ಪೂಜಾ ಆತ್ಮಹತ್ಯೆ ಸಂಬಂಧ ಗಂಗಮ್ಮನಗುಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕುಂದು ಕೊರತೆ ನಿವಾರಣಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಸೂಚನೆ

# ಲಿಂಗಾನುಪಾತ ಪ್ರಮಾಣ ಸಮತೋಲನಕ್ಕೆ ತನ್ನಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಲಿಂಗಾನುಪಾತದ ಪ್ರಮಾಣವನ್ನು ಸಮತೋಲನಕ್ಕೆ ತರಲು ಜಿಲ್ಲೆಗೆ ಸಂಪರ್ಕವಿರುವ ಅಂತರ್ ರಾಜ್ಯ ಗಡಿ ಜಿಲ್ಲೆಗಳ ಜಿಲ್ಲಾ ಆರೋಗ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ಕ್ರಮ ತೆಗೆದುಕೊಳ್ಳಲು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಅಧಿಕಾರಿಗಳಿಗೆ ಸಲಹೆಯನ್ನು ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ಕೆ.ಪಿ.ಎಂ.ಇ ಮತ್ತು ಪಿ.ಸಿ.ಪಿ.ಎನ್.ಡಿ.ಟಿ ನೋಂದಣಿ ಹಾಗೂ ಕುಂದು ಕೊರತೆ ನಿವಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಲಿಂಗಾನುಪಾತದ ಪ್ರಮಾಣವನ್ನು ಹೆಚ್ಚಿಸಲಾಗಿದೆ,2022ನೇ ಸಾಲಿನಲ್ಲಿ 1000 ಪುರುಷರಿಗೆ 870 ಮಹಿಳೆಯರಿದ್ದರು. 2023ನೇ ಸಾಲಿನಲ್ಲಿ 936ಕ್ಕೆ ಹೆಚ್ಚಳವಾಗಿದೆ. ಈ ವರ್ಷ 969ಕ್ಕೆ ಹೆಚ್ಚಳ ಮಾಡಿ ಲಿಂಗಾನುಪಾತ ಪ್ರಮಾಣವನ್ನು ತರುವ ಗುರಿಯನ್ನು ಹೊಂದಲಾಗಿದೆ.ನಾವೆಲ್ಲರೂ ಈ ಕೆಲಸ ಮಾಡಬೇಕಿದೆ. ಪ್ರತಿ ವರ್ಷ ಲಿಂಗಾನುಪಾತ ಪ್ರಮಾಣವನ್ನು ಸರಿದೂಗಿಸಿ 1000 ಪುರುಷರಿಗೆ 1000 ಮಹಿಳೆಯರು ಇರುವ ಹಾಗೆ ಆರೋಗ್ಯಕರ ಸಮಾಜ ನಿರ್ಮಾಣ ಮಾಡುವುದು ನಮ್ಮ ಜವಾಬ್ದಾರಿಯಾಗಿದೆ. ಜಿಲ್ಲೆಯಲ್ಲಿ ಪುರುಷ ಮತದಾರರಿಗಿಂತ ಮಹಿಳಾ ಮತದಾರರು ಅಧಿಕವಾಗಿದ್ದಾರೆ. ಇದು ಉತ್ತಮ ಬೆಳವಣಿಗೆಯಾಗಿದ್ದು, ಲಿಂಗಾನುಪಾತ ಪ್ರಮಾಣದಲ್ಲಿಯೂ ಈ ಸಾಧನೆ ಮಾಡಲು ಆರೋಗ್ಯ ಇಲಾಖೆ ಹಾಗೂ ಇತರೆ ಇಲಾಖೆಗಳ ಸಮನ್ವಯತೆಯಲ್ಲಿ ಹಲವು ಯುಕ್ತ ಕ್ರಮಗಳನ್ನು ಕೈಗೊಳ್ಳಬೇಕಿದೆ.



ಜಿಲ್ಲೆಯಲ್ಲಿರುವ 70 ಭ್ರೂಣ ಲಿಂಗ ಪತ್ತೆ (ಸ್ಕ್ಯಾನಿಂಗ್) ಕೇಂದ್ರಗಳ ಮಾಲಿಕರು, ಮುಖ್ಯಸ್ಥರು, ರೇಡಿಯಾಲಜಿಸ್ಟ್ ತಜ್ಞರಿಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಿ ಜಾಗೃತಿ ಮೂಡಿಸಬೇಕು. ಲಿಂಗಾನುಪಾತದ ಅಸಮತೋಲನವಾದರೆ ಸಮಾಜದಲ್ಲಿ ಎಂತಹ ಸಾಮಾಜಿಕ ಸಮಸ್ಯೆಗಳು ಎದುರಾಗಲಿವೆ ಎಂಬುದನ್ನು ಅವರಿಗೆ ಮನವರಿಕೆ ಮಾಡಬೇಕು. ಜಿಲ್ಲೆಗೆ ಹೊಂದಿಕೊಂಡಿರುವ ಅಂತರ್ ರಾಜ್ಯ ಗಡಿ ಪ್ರದೇಶಗಳಾದ ಬಾಗೇಪಲ್ಲಿ, ಗುಡಿಬಂಡೆ, ಗೌರಿಬಿದನೂರು ಮತ್ತು ಚಿಂತಾಮಣಿ ತಾಲ್ಲೂಕುಗಳಲ್ಲಿನ ಸ್ಕ್ಯಾನಿಂಗ್ ಕೇಂದ್ರಗಳಿಗೆ ಹೊರ ರಾಜ್ಯಗಳಿಂದ ಬರುವಂತಹ ಹಾಗೂ ಹೊರ ರಾಜ್ಯಗಳಿಗೆ ಹೋಗುವಂತಹ ಮೊದಲನೇ ಹಾಗೂ ಎರಡನೇ ಹೆಣ್ಣು ಮಕ್ಕಳಿರುವ ಗರ್ಭಿಣಿಯರನ್ನು ಗುರುತಿಸಿ ಅವರ ಬಗ್ಗೆ ನಿಗಾ ವಹಿಸಬೇಕು. ಲಿಂಗ ಪತ್ತೆ ಕೇಂದ್ರಗಳಿಗೆ ಅನಿರೀಕ್ಷಿತವಾಗಿ ಪುನರಾವರ್ತಿತ ಭೇಟಿಗಳನ್ನು ನೀಡಿ ಪರಿಶೀಲಿಸಬೇಕು. ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಬೇಕು.12 ವಾರದ ನಂತರದಲ್ಲಿ ಆಗುವ ಗರ್ಭಪಾತಗಳ ಬಗ್ಗೆ ಅನುಸರಣೆ ಮಾಡಿ ಪರಿಶೀಲಿಸಬೇಕು. ಸಂಶಯವಿದ್ದಲ್ಲಿ ಪತ್ತೆ ಹಚ್ಚಿ ತನಿಖೆ ನಡೆಸಬೇಕು. ಪ್ರಸವ ಪೂರ್ವ ಮತ್ತು ಗರ್ಭಪೂರ್ವ ಲಿಂಗ ಪತ್ತೆ ಕೇಂದ್ರಗಳ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.

ಜಿಲ್ಲೆಯಲ್ಲಿ ನಕಲಿ ವೈದ್ಯರು, ನಕಲಿ ಕ್ಲಿನಿಕ್ ಗಳು ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ,ಅಂತಹ ಕ್ಲಿನಿಕ್ ಗಳನ್ನು ಮುಲಾಜಿಲ್ಲದೆ ಮುಚ್ಚಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಜಿಲ್ಲೆಯ ಗಡಿಭಾಗದ ಗ್ರಾಮಗಳಲ್ಲಿ ಮೊಬೈಲ್ ಮೆಡಿಕಲ್ ಘಟಕಗಳನ್ನು ಸ್ಥಾಪಿಸಬೇಕು. ಆಶಾ ಕಾರ್ಯಕರ್ತೆಯರಿಗೆ ಪ್ರಾಥಮಿಕ ಚಿಕಿತ್ಸಾ ವಿಧಾನಗಳ ಕುರಿತು ತರಬೇತಿ ನೀಡಿ ಅವರನ್ನು ಜನರ ಮನೆ ಬಾಗಿಲಿಗೆ ತೆರಳಿ ಚಿಕಿತ್ಸೆ ಕೊಡಿಸುವುದರಿಂದ ನಕಲಿ ಕ್ಲಿನಿಕ್, ನಕಲಿ ವೈದ್ಯರ ಹಾವಳಿಯನ್ನು ತಪ್ಪಿಸಬಹುದು. KPME (Karnataka Private Medical Establishment) ಅಧಿನಿಯಮದಡಿ ಜಿಲ್ಲೆಯಲ್ಲಿ 251 ಸಂಸ್ಥೆಗಳು ನೋಂದಣಿಯಾಗಿವೆ,ಆ ಸಂಸ್ಥೆಗಳಲ್ಲಿನ ಚಿಕಿತ್ಸಾ ಪದ್ಧತಿಗೆ ಅನುಗುಣವಾಗಿ ನಾಮಫಲಕವನ್ನು ಅಳವಡಿಸಬೇಕು. ಚಿಕಿತ್ಸಾ ದರಪಟ್ಟಿಗಳನ್ನು ತಜ್ಞ ವೈದ್ಯರ ವಿವರವನ್ನು ಸಾರ್ವಜನಿಕರ ಕಾಣುವ ರೀತಿಯಲ್ಲಿ ಪ್ರದರ್ಶಿಸಬೇಕು. ಸರ್ವೇಕ್ಷಣಾ ಕಾರ್ಯಕ್ರಮದಡಿ ಖಾಸಗಿ ಆಸ್ಪತ್ರೆಗಳು ಖಾಯಿಲೆಗಳ ತಂತ್ರಾಂಶದಲ್ಲಿ ವರದಿಗಳನ್ನು ಪ್ರತಿನಿತ್ಯ ನಮೂದಿಸಬೇಕು. ಜ್ವರ, ವಾಂತಿ, ಭೇದಿ,ಡೆಂಗ್ಯೂ, ಚಿಕುನ್ ಗುನ್ಯ, ಟೈಫಾಯಿಡ್ ಪ್ರಕರಣಗಳನ್ನು ಗುಣಮುಖವಾಗುವವರೆಗೂ ನಿಗಾವಹಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಯವರು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್. ಮಹೇಶ್ ಕುಮಾರ್, ಜಿಲ್ಲಾ ಮಟ್ಟದ ವೈದ್ಯಾಧಿಕಾರಿಗಳು, ತಾಲೂಕು ಮಟ್ಟದ ವೈದ್ಯಾಧಿಕಾರಿಗಳು, ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು, ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ವಿಕಲಚೇತನರಿಂದ ಅರ್ಜಿ ಆಹ್ವಾನ

**ಮಂಡ್ಯ:** 2024-25 ನೇ ಸಾಲಿಗೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನರುಗಳಿಂದ ವಿವಿಧ ಯೋಜನೆಗಳಿಗೆ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಟಾಕಿಂಗ್ ಲ್ಯಾಪ್ ಟಾಪ್, ಬ್ರೈಲ್ ಕಿಟ್, ಯಂತ್ರಚಾಲಿತ ತ್ರಿಚಕ್ರ ವಾಹನ, ಹೊಲಿಗೆ ಯಂತ್ರ, ಸಾಧನ ಸಲಕರಣೆ, ಶಿಶು ಪಾಲನಾ ಭತ್ಯೆ, ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ, ನಿರುದ್ಯೋಗ ಭತ್ಯೆ, ಸಾಧನೆ ಯೋಜನೆ, ಪ್ರತಿಭೆ ಯೋಜನೆ ಹಾಗೂ ಮರಣ ಪರಿಹಾರ ನಿಧಿ ಯೋಜನೆಗಳಿಗೆ 2024-25 ನೇ ಸಾಲಿಗೆ ಸೌಲಭ್ಯ ಪಡೆಯಲು ಆಗಸ್ಟ್ 31 ರೊಳಗೆ ಗ್ರಾಮ-ಒನ್, ಕರ್ನಾಟಕ ಒನ್, ಬೆಂಗಳೂರು-ಒನ್ ಆನ್ ಲೈನ್ ಮೂಲಕ ಸೇವಾಸಿಂಧು ವೆಬ್ ಸೈಟ್ ಬೆಂಗಳೂರು-ಒನ್ ಆನ್ ಲೈನ್ ಮೂಲಕ ಸೇವಾಸಿಂಧು ವೆಬ್ ಸೈಟ್ https://sevasindu.karnataka.gov.in/Sevasindhu/kannada ಪೋರ್ಟಲ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ದಾಖಲಾತಿಗಳ ಒಂದು ಪ್ರತಿಯನ್ನು ಜಿಲ್ಲಾ ಕಛೇರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ತಾಲ್ಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಕರ್ತವ್ಯ ನಿರ್ವಹಿಸುವ ವಿವಿಧ್ದೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಮ್ಮ ಗ್ರಾಮ ಪಂಚಾಯಿತಿ/ ನಗರ ಸಭೆ / ಪುರಸಭೆ/ ಪಟ್ಟಣ ಪಂಚಾಯಿತಿಯಲ್ಲಿ ಕಾರ್ಯಾಲಯದಲ್ಲಿ ಕರ್ತವ್ಯ ನಿರ್ವಹಿಸುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು / ನಗರ ಪುನರ್ವಸತಿ ಕಾರ್ಯಕರ್ತರನ್ನು ಭೇಟಿ ಮಾಡಿ ಅಥವಾ 08232-231090/239234 ಗೆ ಕರೆಮಾಡಿ ಮಾಹಿತಿ ಪಡೆಯಬಹುದು ಎಂದು ಮಂಡ್ಯ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಲೇಖಕ / ಪ್ರಕಾಶಕರಿಂದ ಅರ್ಜಿ ಆಹ್ವಾನ

**ಮಂಡ್ಯ:** ಕರ್ನಾಟಕ ಯಕ್ಷಗಾನ ಅಕಾಡೆಮಿಯು ಯಕ್ಷಗಾನ (ತೆಂಕು, ಬಡಗು ಬಡಾಬಡಗು, ಯಕ್ಷಗಾನ ಗೊಂಬೆಯಾಟ), ಮೂಡಲಪಾಯ ಯಕ್ಷಗಾನ, ಕೇಳಿಕೆ, ಘಟ್ಟದಕೋರೆ ಮತ್ತು ತಾಳಮದ್ದಲೆ, ಇತ್ಯಾದಿ ಕಲಾಪ್ರಕಾರಗಳಲ್ಲಿ 2022 ಹಾಗೂ 2023ನೇ ಸಾಲಿನ ಕ್ಯಾಲೆಂಡರ್ ವರ್ಷದಲ್ಲಿ (ದಿನಾಂಕ:01.01.2022 ರಿಂದ 31.12.2022 ಹಾಗೂ ದಿನಾಂಕ:01.01.2023 ರಿಂದ 31.12.2023ರ ಒಳಗೆ) ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ / ಪ್ರಕಾಶಕರಿಂದ ಅರ್ಜಿ ಆಹ್ವಾನಿಸಿದೆ. ಆಯ್ಕೆಯಾದ ಪುಸ್ತಕಕ್ಕೆ ರೂ.25,000/-ಗಳ ಬಹುಮಾನವನ್ನು ನೀಡಲಾಗುವುದು. ಯಕ್ಷಗಾನದ ವಿವಿಧ ಆಯಾಮಗಳ ಬಗ್ಗೆ ಸಂಗೀತ, ಆಹರ್ಯ, ಅಭಿನಯ, ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ ಪುಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು ಹಾಗೂ ಸಂಪಾದಿತ ಕೃತಿ ಅಥವಾ ಅಭಿನಂದನ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು. ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ.ರಸ್ತೆ, ಬೆಂಗಳೂರು 560 002, ಇವರಿಗೆ 2024ರ ಜುಲೈಸ 25ರ ಒಳಗಾಗಿ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸುವುದು. ಯಾವುದೇ ಕಾರಣಕ್ಕೂ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ (ದೂ:080-22113146) ಪಡೆಯಬಹುದು ಹಾಗೂ ಅರ್ಜಿಗಳನ್ನು ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ ಎಂದು ಮಂಡ್ಯ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಹೇಳಿಕೆ

# ಡೆಂಘೆ ನಿಯಂತ್ರಣ ಎಲ್ಲರ ಜವಾಬ್ದಾರಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ 92 ಡೆಂಗ್ಯೂ ಪ್ರಕರಣಗಳು ಈ ವರ್ಷದ ಜನವರಿ ಮಾಹೆಯಿಂದ ಈವರೆಗೆ ದಾಖಲಾಗಿವೆ. ಈ ಡೆಂಗ್ಯೂ ಪ್ರಕರಣಗಳು ಮತ್ತಷ್ಟು ಹೆಚ್ಚಾಗದಂತೆ ಮುನ್ನೆಚ್ಚರಿಕೆ ಯುಕ್ತ ಕ್ರಮಗಳನ್ನು ಸಮುದಾಯದೊಂದಿಗೆ ಸೇರಿ ನಿಯಂತ್ರಿಸಲು ಜಿಲ್ಲಾಡಳಿತ ಕಾರ್ಯೋನ್ಮುಖವಾಗಿದ್ದು, ಸಾರ್ವಜನಿಕರು ಸಹ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಾ, ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕಾಗಿ ಗ್ರಾಮ ಹಾಗೂ ವಾರ್ಡ್ ಮಟ್ಟದಿಂದ ಕ್ರಮವಹಿಸುತ್ತಿದ್ದು, ಪ್ರತಿ ವಾರಕ್ಕೊಮ್ಮೆ ಶುಕ್ರವಾರ ದಿನಂದು ವಾರದ ಒಣಗಲು ದಿನಗಳನ್ನು ಆಚರಿಸುವ ಮೂಲಕ ಮನೆಗಳ ಸುತ್ತಮುತ್ತ ನೀರು ಸಂಗ್ರಹವಾಗುವ ತಾಣಗಳನ್ನು, ಬಳಕೆ ಮಾಡಿ ಎಸೆದಿರುವ ಅನುಪಯುಕ್ತ ವಸ್ತುಗಳಲ್ಲಿ ನೀರು ಶೇಖರಣೆಯಾಗಿರುವುದನ್ನು ತೆರವುಗೊಳಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಕಾರ್ಯಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಕಂದಾಯ, ಪಂಚಾಯತ್ ರಾಜ್, ಶಾಲಾ ಶಿಕ್ಷಣ, ಸಾರಿಗೆ ಹಾಗೂ ಇನ್ನಿತರ ಇಲಾಖೆಗಳ ಸಮನ್ವಯತೆಯೊಂದಿಗೆ ಕಾರ್ಯೋನ್ಮುಖವಾಗಿ ಜುಲೈ ಮಾಹೆಯನ್ನು ಡೆಂಗ್ಯೂ ವಿರೋಧಿ ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ಮತ್ತು ಶಿಡ್ಲಘಟ್ಟ ತಾಲ್ಲೂಕುಗಳಲ್ಲಿ ಹೆಚ್ಚಿನ ಡೆಂಗ್ಯೂ ಪ್ರಕರಣಗಳು ದಾಖಲಾಗಿವೆ. ಈ ಹಿನ್ನೆಲೆಯಲ್ಲಿ ರಕ್ತ ತಪಾಸಣ ಕಾರ್ಯಗಳನ್ನು ಜಿಲ್ಲೆಯಲ್ಲಿ ಹೆಚ್ಚಿಸಲಾಗಿದೆ. ಈವರೆಗೆ 820 ರಕ್ತ ತಪಾಸಣೆ ಮಾಡಲಾಗಿದ್ದು, ಬಾಗೇಪಲ್ಲಿ ತಾಲ್ಲೂಕಿನಲ್ಲಿ 15, ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ 26, ಚಿಂತಾಮಣಿ ತಾಲ್ಲೂಕಿನಲ್ಲಿ 14, ಗುಡಿಬಂಡೆ ತಾಲ್ಲೂಕಿನಲ್ಲಿ 3, ಗೌರಿಬಿದನೂರು ತಾಲ್ಲೂಕಿನಲ್ಲಿ 11 ಹಾಗೂ ಶಿಡ್ಲಘಟ್ಟ ತಾಲ್ಲೂಕಿನಲ್ಲಿ 23 ಡೆಂಗ್ಯೂ ಪ್ರಕರಣಗಳು ಜನವರಿಯಿಂದ ಈವರೆಗೆ ದಾಖಲಾಗಿವೆ. ಡೆಂಗ್ಯೂ ಪ್ರಕರಣ ಕಂಡುಬರುವ ಗ್ರಾಮ ಮತ್ತು ವಾರ್ಡ್ ಗಳಲ್ಲಿ ಸೊಳ್ಳೆಗಳನ್ನು ನಿಯಂತ್ರಿಸಲು ಮಾರ್ಗಸೂಚಿಯನುಸಾರ ಫಾಗಿಂಗ್ ಮಾಡಲು ಸ್ಥಳೀಯಾಡಳಿತ ಸಂಸ್ಥೆಗಳಿಗೆ ಸೂಚಿಸಲಾಗಿದೆ. ಡೆಂಗ್ಯೂ ತಪಾಸಣೆಗೆ 300 ರೂ.ಗಳು ನಿಗದಿ ಮಾಡಿರುವ ಸರ್ಕಾರದ ಸೂಚನೆಯನ್ನು ಜಿಲ್ಲೆಯ ಎಲ್ಲಾ ಖಾಸಗಿ ಆಸ್ಪತ್ರೆಗಳು ಪಾಲಿಸಬೇಕು. ಇಲ್ಲವಾದಲ್ಲಿ ಕೆ.ಪಿ.ಎಂ.ಇ ಅನ್ವಯ ಕಾನೂನು ಕ್ರಮಕ್ಕೆ ಗುರಿಪಡಿಸಲಾಗುತ್ತದೆ ಎಂದು ತಿಳಿಸಿದರು.



### ಶಾಲಾ ಮುಖ್ಯಸ್ಥರಲ್ಲಿ ಮನವಿ

**ಡೆಂಗ್ಯೂ ಪ್ರಕರಣಗಳು ಮಕ್ಕಳಲ್ಲಿ ಕಂಡು ಬರುತ್ತಿದ್ದು, ಶಾಲೆಯ ಸುತ್ತಮುತ್ತಲ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಂಡು ವಿದ್ಯಾರ್ಥಿಗಳ ಆರೋಗ್ಯ ಕಾಪಾಡುವುದು ಶಾಲಾ ಮುಖ್ಯಸ್ಥರ ಜವಾಬ್ದಾರಿಯಾಗಿರುತ್ತದೆ. ಶಾಲಾ ಕೊಠಡಿಗಳ ಕಿಟಕಿಗಳಿಗೆ ಜಾಲರಿ ಅಳವಡಿಸಿ ಸೊಳ್ಳೆಗಳು ಕೊಠಡಿಗೆ ಬಾರದಂತೆ ತಡೆಯಬೇಕು. ಮಕ್ಕಳಲ್ಲಿ ಜ್ವರ ಕಾಣಿಸಿಕೊಂಡ ಕೂಡಲೇ ಅವರ ಪೋಷಕರಿಗೆ ಅಥವಾ ನೇರವಾಗಿ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಕೊಡಿಸುವ ಜವಾಬ್ದಾರಿಯನ್ನು ಶಾಲೆಗಳನ್ನು ನಿರ್ವಹಿಸುವ ಮುಖ್ಯಸ್ಥರು, ಶಿಕ್ಷಕರು ಮಾಡುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ಎಲ್ಲಾ ನೀರಿನ ತೊಟ್ಟಿಗಳು, ಡ್ರಮ್, ಬ್ಯಾರಲ್ ಗಳು, ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಮ್ಮೆ ತಪ್ಪದೇ ಖಾಲಿ ಮಾಡಿ, ಒಣಗಿಸಿ ಪುನಃ ನೀರು ಭರ್ತಿ ಮಾಡಬೇಕು. ನೀರು ಖಾಲಿ ಮಾಡಲು ಸಾಧ್ಯವಿಲ್ಲದಿದ್ದಲ್ಲಿ ತೊಟ್ಟಿ ಮುಂತಾದವುಗಳಲ್ಲಿ ಕೀಟಗಳು ನುಸುಳದಂತೆ ಸರಿಯಾದ ಮುಚ್ಚಳದಿಂದ ಮುಚ್ಚಬೇಕು. ಬಯಲಿನಲ್ಲಿರುವ ಘನತ್ಯಾಜ್ಯ ವಸ್ತುಗಳಾದ ಟೈರು, ಎಳನೀರಿನ ಚಿಪ್ಪು, ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆ ನೀರು ಸಂಗ್ರಹವಾಗದಂತೆ ಎಚ್ಚರವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಗಳನ್ನು ಬಳಸುವುದು. ಸೊಳ್ಳೆ ಕಚ್ಚದಂತೆ ಎಚ್ಚರವಹಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.**

### ಚರಂಡಿಗಳಲ್ಲಿ ನೀರು ನಿಲ್ಲದಂತೆ ಕ್ರಮ ವಹಿಸಿ

**ಗ್ರಾಮಾಂತರ ಪ್ರದೇಶಗಳಲ್ಲಿ ನೀರು ಸಂಗ್ರಹ ಮಾಡಿ ಪೂರೈಸುವ ಟ್ಯಾಂಕ್ ಗಳನ್ನು, ತೊಟ್ಟಿಗಳನ್ನು ನಿಯಮಿತವಾಗಿ ಶುಚಿಗೊಳಿಸಲಾಗುತ್ತಿದೆ. ಈ ಕಾರ್ಯವನ್ನು ಮುಂದುವರೆಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಲಾಗಿದೆ. ಕುಡಿಯುವ ನೀರು ಪೂರೈಸುವ ಪೈಪ್ ಗಳು ದುರಸ್ತಿಯಾಗಿದ್ದಲ್ಲಿ, ನೀರು ಸೋರಿಕೆಯಾಗುತ್ತಿದ್ದಲ್ಲಿ ಕೂಡಲೆ ಸೂಕ್ತ ಕ್ರಮ ತೆಗೆದುಕೊಳ್ಳಲು ಮತ್ತು ಚರಂಡಿಗಳಲ್ಲಿ ನೀರು ನಿಲ್ಲದಂತೆ ಕ್ರಮ ವಹಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ ತಿಳಿಸಿದರು. ಡೆಂಗ್ಯೂ ಜ್ವರ ನಿಯಂತ್ರಣ ಕುರಿತು ಜಾಗೃತಿ ಮೂಡಿಸುವ ಕರಪತ್ರಗಳು ಮತ್ತು ಬಿತ್ತಿಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಪ್ರಕಾಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಎಂ.ಜುಂಜಣ್ಣ ಇದ್ದರು.**

## ಮಹಿಳೆಯರು ಸ್ವಾವಲಂಬಿಗಳಾಗಿ ಬದುಕಬೇಕು

**ಬೆಂಗಳೂರು:** ಸಮಾಜದಲ್ಲಿ ಮಹಿಳೆಯರು ಸ್ವಾವಲಂಭಿಗಳಾಗಬೇಕು ಅವರು ತಮ್ಮ ಕುಟುಂಬದ ಆದಾಯವನ್ನು ತಾವೇ ಸಂಪಾದಿಸಿ ಸ್ವತಂತ್ರವಾಗಿ ಜೀವನ ನಡೆಸಲು ನಿಗಮದ ಸವಿರುಚಿ ಕ್ಯಾಂಟೀನ್ ಯೋಜನೆ ತುಂಬಾ ಸಹಕಾರಿಯಾಗಿದೆ ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳು ಮತ್ತು ರಾಜ್ಯದಲ್ಲಿನ ಜಿಲ್ಲಾ ಒಕ್ಕೂಟಗಳ ಅಧ್ಯಕ್ಷರೊಂದಿಗೆ ಸಚಿರುಚಿ ಕ್ಯಾಂಟೀನ್ ಬಗ್ಗೆ ಸಭೆ ನಡೆಸಿ ಮಾತನಾಡಿದ ಅವರು, ಸವಿರುಚಿ ಕ್ಯಾಂಟೀನ್ ಪ್ರಾರಂಭವಾದ ರೀತಿ ಅದನ್ನು ಯಾವ ಆಧಾರದ ಮೇಲೆ ಜಿಲ್ಲಾ ಒಕ್ಕೂಟಗಳಿಗೆ ನೀಡಲಾಗಿತ್ತು ಹಾಗೂ ಅದರ ಸಾಲದ ಮೊತ್ತವನ್ನು ಮರುಪಾವತಿ ಮಾಡುವ ಬಗ್ಗೆ ಚರ್ಚಿಸಲಾಯಿತು. ಒಕ್ಕೂಟಗಳು ಸಹ ಕ್ಯಾಂಟೀನ್ ನಡೆಸಲು ಇರುವ ಜಾಗದ ಅನುಮತಿ, ವಾಹನ ರಿಪೇರಿ, ಬೋರ್ಡ್ ಮತ್ತು ಸ್ಟಿಕ್ಕರ್ ಸಮಸ್ಯೆಗಳು, ವಾಹನ ನಿರ್ವಹಣೆ ಮತ್ತು ಸಾಲ ಮರುಪಾವತಿಯಂತಹ ಹಲವು ಕುಂದುಕೊರತೆಗಳಿದ್ದು ಅವುಗಳನ್ನು ಬಗೆಹರಿಸಿಕೊಡುವ ಬಗ್ಗೆ ಮನವಿ ಮಾಡಿದರು. ಅದಕ್ಕೆ ಮಾನ್ಯ ಅಧ್ಯಕ್ಷರು ಉತ್ತರಿಸಿ ಎಲ್ಲಾ ಸಮಸ್ಯೆಗಳ ಬಗ್ಗೆ ಸರ್ಕಾರದ ಸಚಿವರ ಗಮನಕ್ಕೆ ತಂದು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದರ ಜೊತೆಗೆ ಮಹಿಳೆಯರು ಸ್ವಾವಲಂಭಿಗಳಾಗಿ ಜೀವನ ನಡೆಸಬೇಕು ಎಂದರು. ಸಭೆಯಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪುಷ್ಪಲತಾ, ಪ್ರಧಾನ ವ್ಯವಸ್ಥಾಪಕರಾದ ಶ್ರೀಮತಿ ಅಕ್ಕಮಹಾದೇವಿ ಮತ್ತು ಶ್ರೀಮತಿ ಇಂದಿರಮ್ಮ, ರಾಜ್ಯ ಮಹಿಳಾ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ರೆಹನಾ ಸುಲ್ತಾನಾ, ಉಪಾಧ್ಯಕ್ಷರಾದ ಶ್ರೀಮತಿ ಸಂಗಮ್ಮ, ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀನಿವಾಸ್ ಇನ್ನಿತರೆ ಒಕ್ಕೂಟಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಆನ್‌ಲೈನ್ ಮೂಲಕ ಬಿತ್ತನೆ ಬೀಜ ಖರೀದಿ

**ಬೆಂಗಳೂರು:** ಬೆಂಗಳೂರು ಕೃಷಿವಿವಿ, ಅಖಿಲಭಾರತಸುಸಂಘಿತ ಪ್ರಾಯೋಜನೆ (ಬೀಜ ಬೆಳೆಗಳು) ವತಿಯಿಂದ ಇದೇ ಪ್ರಥಮ ಬಾರಿಗೆ ಆನ್ಲೈನ್ ಮೂಲಕ ಬೀಜ ಮಾರಾಟ ಜಾಲತಾಣವನ್ನು ಅಭಿವೃದ್ಧಿಪಡಿಸಿದೆ. www.uasgkvkseeds.org ರೈತರು ನೊಂದಣಿ ಮಾಡಿಕೊಂಡು ನೇರವಾಗಿ ಬಿತ್ತನೆ ಬೀಜಗಳನ್ನು ಖರೀದಿಸಬಹುದಾಗಿದೆ. ನೊಂದಣಿ ಮಾಡುವಾಗ ಪೂರ್ಣವಿಳಾಸ, ಸರಿಯಾದ ಪಿನ್ ಕೋಡ್ ಅನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಬಿತ್ತನೆ ಬೀಜದ ಮೊತ್ತವನ್ನು ಆನ್ಲೈನ್ ಗೂಗಲ್ ಪೇ, ಫೋನ್ ಪೇ ಇತ್ಯಾದಿ ಮೂಲಕ ಪಾವತಿಸುವುದು. ಬಿತ್ತನೆ ಬೀಜಗಳನ್ನು ಅಂಚೆ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ಸರಬರಾಜು ಮಾಡಲಾಗುವುದು. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ವ್ಯಾಪ್ತಿಗೆ ಬರುವ 10 ಜಿಲ್ಲೆಗಳಿಗೆ ಸೂಕ್ತವಾದ ವಿವಿಧ ಬೆಳೆಗಳಾದ ರಾಗಿ, ಭತ್ತ, ತೊಗರಿ, ಅವರೆ, ಸಿರಿಧಾನ್ಯಗಳು ತಳಿಗಳ ನಿಜಬೀಜ ಹಾಗೂ ಪ್ರಮಾಣಿತ ಬಿತ್ತನೆ ಬೀಜ ಮತ್ತು ಎಣ್ಣೆಕಾಳು ಬೆಳೆಗಳಾದ ಸಂಕರಣ ಸೂರ್ಯಕಾಂತಿ ಬಿತ್ತನೆ ಬೀಜ ಲಭ್ಯವಿರುತ್ತದೆ. ಆಸಕ್ತ ರೈತರು ಬಿತ್ತನೆ ಬೀಜವನ್ನು ರಾಷ್ಟ್ರೀಯ ಬೀಜ ಪ್ರಾಯೋಜನೆ (ಎನ್.ಎಸ್.ಪಿ), ಕೃಷಿ ತಂತ್ರಜ್ಞಾನ ಮಾಹಿತಿಕೇಂದ್ರ (ಎ.ಟಿ.ಐ.ಸಿ), ಜಿ.ಕೆ.ವಿ.ಕೆ, ಮತ್ತು ಕೃಷಿ ವಿಜ್ಞಾನ ಕೇಂದ್ರಗಳಾದ ಚಾಮರಾಜನಗರ, ಕಂದಲಿ, ಹಾಸನ, ಚಿಂತಾಮಣಿ ಮತ್ತು ವಲಯ ಕೃಷಿ ಸಂಶೋಧನಾಕೇಂದ್ರ, ವಿ.ಸಿ.ಫಾರಂ, ಮಂಡ್ಯ ಹಾಗೂ ರಾಗಿ ಬ್ರಹ್ಮ ಲಕ್ಷ್ಮಣಯ್ಯ ನವರರೈತ ಸಲಹಾ ಕೇಂದ್ರ ಎ.ಪಿ.ಎಂ.ಸಿ.ಯಾರ್ಡ್, ಮಂಡ್ಯ ಕೇಂದ್ರಗಳಿಂದ ಖರೀದಿಸಬಹುದಾಗಿದೆ.

## ಪದ್ಮಶ್ರೇಣಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸಮಾಜದ ಯಾವುದೇ ಕ್ಷೇತ್ರಗಳಲ್ಲಿ ಅಂದರೆ ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಸೇವೆ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರೀಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ, ಇತ್ಯಾದಿಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಾದ ''ಪದ್ಮವಿಭೂಷಣ'' ''ಪದ್ಮಭೂಷಣ'' ಮತ್ತು ''ಪದ್ಮಶ್ರೀ'' ಪ್ರಶಸ್ತಿಗಳನ್ನು ಗಣರಾಜ್ಯೋತ್ಸವ ದಿನದ ಹಿಂದಿನ ದಿನದಂದು ಕೇಂದ್ರ ಸರ್ಕಾರದಿಂದ ಪ್ರಕಟಿಸಲಾಗುತ್ತದೆ. 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳ ಆನ್ ಲೈನ್ ನಲ್ಲಿ ವೆಬ್ ಸೈಟ್ https://psdmaawards.gov.in ರಲ್ಲಿ ಲಭ್ಯವಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯಿಂದ ಮೇಲ್ಕಂಡ ವಿಭಾಗಗಳಲ್ಲಿ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಸೆಪ್ಟೆಂಬರ್ 2 ರ ಒಳಗಾಗಿ ಜಿಲ್ಲಾ ಕಚೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಸೆಪ್ಟೆಂಬರ್ 10 ರ ಒಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಯಲ್ಲಿ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಖುದ್ದು ಭೇಟಿ ನೀಡುವಂತೆ ಅಥವಾ ದೂರವಾಣಿ ಸಂಖ್ಯೆ: 08156-270054ರ ಮೂಲಕ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ 2024-25ನೇ ಸಾಲಿಗೆ 13 ಫಲಾನುಭವಿ ಆಧಾರಿತ ಯೋಜನೆಗಳಾದ ಪ್ರತಿಭಾವಂತ ಅಂಕವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಆಧಾರ ಯೋಜನೆ, ಮರಣ ಪರಿಹಾರ ನಿಧಿ, ಸಾಧನೆ ಯೋಜನೆ, ಪ್ರತಿಭೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಯೋಜನೆ, ದೈಹಿಕ ವಿಕಲಚೇನತರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಸಾಧನ ಸಲಕರಣೆಗಳ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆಗಳಿಗೆ ಸುವಿಧಾ ತಂತ್ರಾಂಶದಡಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆನ್ ಲೈನ್ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಸೇವಾ ಸಿಂಧು ಪೋರ್ಟಲ್ ನಲ್ಲಿ ಆಗಸ್ಟ್ 31 ರೊಳಗೆ ಸಲ್ಲಿಸಿ ನಿಯಮಾನುಸಾರ ಸೌಲಭ್ಯಗಳನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾಡಳಿತ ಭವನ, ಕೊ.ಸಂ:ಜಿ.ಎ.18, ಚಿಕ್ಕಬಳ್ಳಾಪುರ ಹಾಗೂ ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ ದೂ.ಸಂ: 08156-200122 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಸರ್ಕಾರಿ ವಕೀಲರು, ಹೆಚ್ಚುವರಿ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಜಿಲ್ಲಾ ಸರ್ಕಾರಿ ವಕೀಲರ ಹಾಗೂ ಹೆಚ್ಚುವರಿ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗಳಿಗಾಗಿ 10 ವ?ಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರಿಂದ ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಯ ಪ್ರಭಾರವನ್ನು ವಹಿಸಿಕೊಳ್ಳುವ ದಿನಾಂಕದಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಧಿಸೂಚನೆ ಸಂಖ್ಯೆ:ಲಾ-ಎಲ್.ಎ.ಡಿ/01/2024 ದಿನಾಂಕ 01-01-2024ರ ಅನ್ವಯ ನೇಮಕಾತಿ ಮಾಡಲಾಗಿದ್ದು, ಪ್ರಸ್ತುತ ಸದರಿ ಹುದ್ದೆಗೆ ಹೊಸದಾಗಿ ನೇಮಕ ಮಾಡುವ ಸಂಬಂಧ 10 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಸಂಬಂಧಪಟ್ಟ ದಾಖಲಾತಿಗಳನ್ನು ದೃಢೀಕರಿಸಿ ಜುಲೈ 15ರೊಳಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸುವಂತೆ ತಿಳಿಸಿದೆ.

## ಜಿಲ್ಲೆಯಲ್ಲಿ ಹರಡುತ್ತಿರುವ ಡೆಂಗ್ಯೂ ರೋಗವನ್ನು ನಿಯಂತ್ರಿಸಿ

**ಮಂಡ್ಯ:** ಜಿಲ್ಲೆಯಲ್ಲಿ ಡೆಂಗ್ಯೂ ರೋಗ ಪ್ರಕರಣಗಳು ಹೆಚ್ಚುತ್ತಿದ್ದು, ಡೆಂಗ್ಯೂ ರೋಗ ನಿಯಂತ್ರಣ ಮಾಡಲು ಅಗತ್ಯ ಕ್ರಮವಹಿಸಿ ಎಂದು ಡಾ. ಕುಮಾರ ತಿಳಿಸಿದರು. ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಷ್ಟ್ರೀಯ ಡೆಂಗ್ಯೂ ನಿಯಂತ್ರಣ ದಿನದ ಪ್ರಯುಕ್ತ ಡೆಂಗ್ಯೂ ನಿಯಂತ್ರಣ ಕುರಿತು ಅಂತರ ಇಲಾಖೆಯ ಸಮನ್ವಯ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯಲ್ಲಿರುವ ಹಾಸ್ಟೆಲ್ಗಳಿಗೆ ಮಕ್ಕಳಿಗೆ ಕಡ್ಡಾಯವಾಗಿ ಸೊಳ್ಳೆ ಪರದೆ ಬಳಸುವಂತೆ ತಿಳಿಸಿ. ಹಾಸ್ಟಲ್ ಗಳ ಸುತ್ತ ನೀರು ನಿಲ್ಲದಂತೆ ನೋಡಿಕೊಳ್ಳಿ ಎಂದರು. ಜಿಲ್ಲೆಯಲ್ಲಿ 189 ಡೆಂಗ್ಯೂ ಪ್ರಕರಣಗಳು ದಾಖಲಾಗಿದ್ದು, ನಿಂತ ನೀರಿನಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತದೆ. ಸಾರ್ವಜನಿಕರು ಮನೆಯ ಸುತ್ತಮುತ್ತ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಹಳೆಯ ಟೈರ್, ತೆಂಗಿನ ಚಿಪ್ಪುಗಳು ಮುಂತಾದ ವಸ್ತುಗಳನ್ನು ತೆರವುಗೊಳಿಸಿ. ಶುದ್ಧ ಕುಡಿಯುವ ನೀರನ್ನು ಬಳಸಿ ಎಂದರು. ಡೆಂಗ್ಯೂ ಪ್ರಕರಣಗಳು ಹೆಚ್ಚು ವರದಿಯಾಗುವ ಸ್ಥಳಗಳನ್ನು ಗುರುತಿಸಿ ಆರೋಗ್ಯ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳು ಸಮನ್ವಯವಾಗಿ ಕಾರ್ಯನಿರ್ವಹಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಡೆಂಗ್ಯೂ ರೋಗ ಹರಡದಂತೆ ನಿಯಂತ್ರಿಸಿ ಎಂದರು. ಸಾಂಕ್ರಾಮಿಕ ರೋಗಗಳು ಹರಡದಂತೆ ತಡೆಗಟ್ಟಲು ಸಾರ್ವಜನಿಕರಿಗೆ ಶುದ್ಧ, ಸುರಕ್ಷಿತ ಕುಡಿಯುವ ನೀರನ್ನು ಪೂರೈಸುವುದು ಮುಖ್ಯ. ಸ್ಥಳೀಯ ಸಂಸ್ಥೆಗಳು ನೀರನ್ನು ಪರೀಕ್ಷಿಸಿ ವರದಿ ಪಡೆದ ತಕ್ಷಣ ಆರೋಗ್ಯ ಇಲಾಖೆಯೊಂದಿಗೆ ಹಂಚಿಕೊಂಡು ವಿಶ್ಲೇಷಣೆ ನಡೆಸಿ, ನೀರಿನಲ್ಲಿ ರೋಗವಾಹಕ ಅಂಶಗಳು ಕಂಡುಬಂದಲ್ಲಿ ತಕ್ಷಣವೇ ಕ್ರಮ ಕೈಗೊಳ್ಳಬಹುದು ಎಂದರು.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಮೈಸೂರು:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ 2024-25ನೇ ಸಾಲಿಗೆ ಅರ್ಹ ವಿಕಲಚೇತನ ವ್ಯಕ್ತಿಗಳಿಗೆ ವಿವಿಧ ಸೌಲಭ್ಯಗಳ 08 ಫಲಾನುಭವಿ ಆಧಾರಿತ ಯೋಜನೆಗಳನ್ನು ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಗಾಗಿ ಕೆಳಕಂಡ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಫಲಾನುಭವಿಗಳು ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಆಧಾರ ಯೋಜನೆ, ಮರಣ ಪರಿಹಾರ ನಿಧಿ, ಸಾಧನೆ ಯೋಜನೆ, ಪ್ರತಿಭೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ಟಾಪ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಸಾಧನ ಸಲಕರಣೆಗಳ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆಗಳಿಗೆ ಆನ್ಲೈನ್ನಲ್ಲಿ https://suvidha.karnataka.gov.in/ ಪೋರ್ಟಲ್ ಮೂಲಕ ಅರ್ಜಿಗಳನ್ನು ಭರ್ತಿ ಮಾಡಿ ಅಗಸ್ಟ್ 31 ರೊಳಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ



ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಬಹುದು. ಹೆಚ್.ಡಿ.ಕೋಟೆ ದೂ.ಸಂ:9611519719, ಸರಗೂರು ದೂ.ಸಂ:7090994492, ಹುಣಸೂರು : 9739644342, ಕೆ.ಆರ್ ನಗರ ದೂ.ಸಂ:9480253203, ಮೈಸೂರು ತಾಲ್ಲೂಕು. ದೂ.ಸಂ: 9591136015, 6360483829, ನಂಜನಗೂಡು-8951113120, ಪಿರಿಯಾಪಟ್ಟಣ-7204151852, ತಿ.ನರಸಿಪುರ-8050829685 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯ ವಿಕಲಚೇತನರ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ:0821-2490333 ನ್ನು ಸಂಪರ್ಕಿಸಬಹುದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನತಾ ದರ್ಶನದಲ್ಲಿ 55 ಅರ್ಜಿಗಳ ಸ್ವೀಕಾರ



**ಚಿಕ್ಕಬಳ್ಳಾಪುರ:** ಗೌರಿಬಿದನೂರು ತಾಲ್ಲೂಕು ಕೇಂದ್ರಕ್ಕೆ ಜಿಲ್ಲಾಡಳಿತದ ಅಧಿಕಾರಿಗಳು ತೆರಳಿ ಜಿಲ್ಲಾ ಮತ್ತು ತಾಲ್ಲೂಕು ಆಡಳಿತ ಅಧಿಕಾರಿಗಳ ಸಮ್ಮುಖದಲ್ಲಿ ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರ ಅಹವಾಲು, ದೂರುಗಳನ್ನು ಆಲಿಸಿ ಅವರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರೋಪಾಯಗಳನ್ನು ಒದಗಿಸುವ ನಿಟ್ಟಿನಲ್ಲಿ ಗುರುವಾರ ಗೌರಿಬಿದನೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜನತಾ ದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು.

ಸಾರ್ವಜನಿಕರು ಅಹವಾಲು ಅರ್ಜಿಗಳನ್ನು ಅಧಿಕಾರಿಗಳಿಗೆ ನೀಡಿ ಪರಿಹಾರಕ್ಕಾಗಿ ಮನವಿ ಸಲ್ಲಿಸಿದರು. ಕಂದಾಯ ಇಲಾಖೆಯಡಿ 30 ಅರ್ಜಿಗಳು, ಗೌರಿಬಿದನೂರು ನಗರಸಭೆ ವ್ಯಾಪ್ತಿಗೆ ಸಂಬಂಧಿಸಿದ 10 ಅರ್ಜಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ 10 ಅರ್ಜಿಗಳು ಹಾಗೂ ಪೊಲೀಸ್ ಇಲಾಖೆಯಡಿ 2 ಅರ್ಜಿಗಳು, ಅಬಕಾರಿ ಇಲಾಖೆಯ ಅರ್ಜಿ 01, ಆಹಾರ ಇಲಾಖೆಯಡಿ 1 ಅರ್ಜಿ, ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಸಂಬಂಧಿಸಿದ 1 ಅರ್ಜಿಯನ್ನು ಜನತಾ ದರ್ಶನದಲ್ಲಿ ಸ್ವೀಕರಿಸಿ ವಿಲೇವಾರಿಗೆ ಸೂಕ್ತ ಕ್ರಮವಹಿಸಲಾಯಿತು. ಒಟ್ಟಾರೆ ಜನತಾ ದರ್ಶನದಲ್ಲಿ 55 ಅರ್ಜಿಗಳ ಇತ್ಯರ್ಥಕ್ಕೆ ಅಗತ್ಯ ಕ್ರಮವಹಿಸಲಾಯಿತು.

ಖುದ್ದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ ಅವರು ಜಂಟಿಯಾಗಿ ಅರ್ಜಿಗಳನ್ನು ಪರಿಶೀಲಿಸಿದರು. 55 ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಯಿಸಿ ಕಾಲ ಮಿತಿಯೊಳಗೆ ಇತ್ಯರ್ಥಪಡಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಜನತಾ ದರ್ಶನದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ ಜಿ.ಟಿ ನಿಟ್ಟಾಲಿ, ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್, ತಹಶೀಲ್ದಾರ್ ಮಹೇಶ್ ಪತ್ರಿ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಹೊನ್ನಯ್ಯ, ನಗರಸಭೆ ಪೌರಾಯುಕ್ತೆ ಗೀತ, ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಜೀವನೋಪಾಯ ಪರಿಹಾರ ಮೊತ್ತ ಪಾವತಿಗೆ ನಿರ್ಧಾರ

**ರಾಮನಗರ:** ರಾಜ್ಯ ಸರ್ಕಾರವು 2023ರ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ಈಗಾಗಲೇ ಬೆಳೆಹಾನಿ ಪರಿಹಾರ ಪಾವತಿಸಿರುವ ಹಾಗೂ ಪಾವತಿಗೆ ಪರಿಗಣನೆಗಾಗಿ ಇರುವ ಮಳೆಯಾಶ್ರಿತ / ಒಣಭೂಮಿ ಹೊಂದಿರುವ ಸಣ್ಣ ಮತ್ತು ಅತೀ ಸಣ್ಣ ರೈತ ಕುಟುಂಬ-ಐಡಿ ಹೊಂದಿರುವ ಹಾಗೂ ಎಸ್‌ಆರ್‌ಡಿಎಫ್/ಎನ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ ವಿಪತ್ತುಗಳಿಂದ ಜೀವನೋಪಾಯಕ್ಕೆ ತೊಂದರೆ ಉಂಟಾಗಿರುವ ಪ್ರತಿ ಕುಟುಂಬದ ಇಬ್ಬರು ದುಡಿಯುವ ವ್ಯಕ್ತಿಗಳಿಗೆ ನರೇಗಾ ಯೋಜನೆಯಡಿ ಪ್ರತಿ ದಿನಕ್ಕೆ ನೀಡುವ ದರದಲ್ಲಿ ಜೀವನವೋಪಾಯಕ್ಕೆ ತೊಂದರೆ ಉಂಟಾಗಿರುವ ಪ್ರತಿ ಕುಟುಂಬಕ್ಕೆ ಗರಿಷ್ಠ 2,874 ರೂ.ರಂತೆ ಜೀವನೋಪಾಯ ಪರಿಹಾರ ಮೊತ್ತವನ್ನು ಪ್ರೊರೇಟಾ (ಅನುಪಾತ) ಆಧಾರದ ಮೇಲೆ ಪ್ರತಿಯೊಬ್ಬ ಅರ್ಹ ರೈತರಿಗೆ ನಿಯಮಾನುಸಾರ ಪಾವತಿಸಲು ತೀರ್ಮಾನಿಸಿರುತ್ತಾರೆ.

ಅದರಂತೆ, ರಾಮನಗರ ಜಿಲ್ಲೆಯ 2023-24ರ ಮುಂಗಾರು ಹಂಗಾಮಿಗೆ ಸಂಬಂಧಿಸಿದಂತೆ, ಈಗಾಗಲೇ ಬೆಳೆಹಾನಿ ಪರಿಹಾರ ಪಾವತಿಸಿರುವ ಹಾಗೂ ಪಾವತಿಗೆ ಪರಿಗಣನೆಗಾಗಿ ಇರುವ ಐಡಿ ಹೊಂದಿರುವ ಅರ್ಹ 48,939 ಕುಟುಂಬ, 52,889 ಸಣ್ಣ ಮತ್ತು ಅತೀ ಸಣ್ಣ ರೈತ ಕುಟುಂಬಗಳಿಗೆ ಒಟ್ಟು 14,01,81,458 ರೂ.ಗಳ ಜೀವನೋಪಾಯ ಪರಿಹಾರವನ್ನು ಗುರುತಿಸಿದ ರೈತ ಕುಟುಂಬಗಳ ಪಟ್ಟಿಗೆ ಅನುಮೋದನೆ ನೀಡಲಾಗಿದ್ದು ರಾಜ್ಯ ಸರ್ಕಾರದಿಂದ ಡಿಬಿಟಿ ಮುಖಾಂತರ ನೇರವಾಗಿ ಆಧಾರ್ ಸಂಖ್ಯೆ ಜೋಡಣೆಯಾಗಿರುವ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಾಗೂ ಪರಿಹಾರ ಹಣ ಖಾತೆಗೆ ಜಮಾ ಆಗದೆ ಇರುವ ಬಗ್ಗೆ ದೂರು ಸಲ್ಲಿಸಲು ಸಾರ್ವಜನಿಕರು ಸಂಬಂಧಪಟ್ಟ ತಾಲ್ಲೂಕು ಕೃಷಿ ಅಧಿಕಾರಿ/ ತಹಶೀಲ್ದಾರ್ ರವರ ಕಚೇರಿಗೆ ಖುದ್ದು ಭೇಟಿ ನೀಡಿ ಮಾಹಿತಿಯನ್ನು ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಜೆ ಮುಗಿಲು
ಶುಕ್ರವಾರ 5.7.2024

# ಸಂಜೆ ಟಿಪ್ಸ್





## ಕೆಎಫ್ ಸಿಯಿಂದ ಹೊಚ್ಚ ಹೊಸ ಕೆ-ಪಾಪ್ ಕೊರಿಯನ್ ಚಿಕನ್ ಪಾಪ್ ಕಾರ್ನ್ ಪರಿಚಯ

ಕೆಎಫ್‌ಸಿ ಅಭಿಮಾನಿಗಳಿಗೆ ಸಂತಸ ಸುದ್ದಿ ಬಂದಿದೆ. ಹೊಚ್ಚ ಹೊಸದಾದ ಕೆ-ಪಾಪ್‌ಅನ್ನು ಈ ಅಭಿಮಾನಿಗಳಿಗೆ ಪರಿಚಯಿಸಿದೆ. ಅಂದರೆ, ಏ-ಕಔಿಕ ನ ಕೊರಿಯನ್ ಚಿಕನ್ ಪಾಪ್ ಕಾರ್ನ್ ಅನ್ನು ಪರಿಚಯಿಸಲಾಗಿದ್ದು, ಚಿಕನ್ ಪ್ರಿಯರ ಮನಸೂರೆಗೊಳ್ಳಲಿದೆ. ಕೊರಿಯನ್ ಟ್ವಿಸ್ಟ್ ನೊಂದಿಗೆ ಕೆಎಫ್ ಸಿಯ ಸ್ವಾದವನ್ನು ಇದು ಬೆರಳ ತುದಿಯಲ್ಲಿ ನೀಡಲಿದೆ. ಕೊರಿಯನ್ ಝಿಂಗಿ ಸ್ವಾದಗಳು ಮತ್ತು ರೋಮಾಂಚಕಾರಿ ರುಚಿಯಿಂದ ಪ್ರೇರೇಪಿತವಾಗಿರುವ ಈ ಕೊರಿಯನ್ ಚಿಕನ್ ಪಾಪ್ ಕಾರ್ನ್ ಅನ್ನು ಭಾರತೀಯ ಆಹಾರ ಪ್ರಿಯರಿಗೆ ಉಣಬಡಿಸಲು ಪರಿಚಯಿಸಲಾಗಿದೆ. ಫಿಯೆರಿ ಚಿಲ್ಲಿ, ಸ್ಯಾವರಿ ಸಾಯ್ ಮತ್ತು ಕ್ರಂಚಿ ಸೀಸೇಮ್ ನಂತಹ ಕೊರಿಯನ್ ಪದಾರ್ಥಗಳನ್ನು ಬಳಸಿ ತಯಾರಿಸಲಾಗುವ ಈ ಚಿಕನ್ ಜಿಹ್ವಾಚಪಲವನ್ನು ಇಮ್ಮಡಿಗೊಳಿಸಲಿದೆ. ಈ ಕೊರಿಯನ್ ಚಿಕನ್ ಪಾಪ್ ಕಾರ್ನ್ ಬೆಲೆ 109 ರೂಪಾಯಿಗಳಿಂದ ಆರಂಭವಾಗಲಿದ್ದು, ಬೆಂಗಳೂರು ಮತ್ತು ಮುಂಬೈನಲ್ಲಿರುವ ಆಯ್ದ ಕೆಎಫ್ ಸಿ ರೆಸ್ಟೋರೆಂಟ್ ಗಳಲ್ಲಿ ಮಾತ್ರ ಲಭ್ಯವಿದೆ. ಈ ಕೊರಿಯನ್ ಚಿಕನ್ ಪಾಪ್ ಕಾರ್ನ್ ಪ್ಯಾಕ್ ವಿವಿಧ ಗಾತ್ರದಲ್ಲಿ ಲಭ್ಯವಿದೆ. ಇನ್ನೇಕೆ ತಡ ನಿಮ್ಮ ಹತ್ತಿರದ ಕೆಎಫ್ ಸಿ ರೆಸ್ಟೋರೆಂಟ್‌ಗೆ ಭೇಟಿ ನೀಡಿ ಅಥವಾ ಕೆಎಫ್ ಸಿ ಆ್ಯಪ್ ಅಥವಾ ವೆಬ್ ಸೈಟ್ www.online.kfc.in ಮೂಲಕ ನಿಮ್ಮ ನೆಚ್ಚಿನ ಕೊರಿಯನ್ ಚಿಕನ್ ಆರ್ಡರ್ ಮಾಡಿ. ಕೆಎಫ್‌ಸಿ ಆ್ಯಪ್‌ನಲ್ಲಿ ಆರ್ಡರ್ ಮಾಡಿದರೆ ಉಚಿತ ಡೆಲಿವರಿ ವ್ಯವಸ್ಥೆ ಇದೆ.


## ಮೈಸೂರು ಪಾಕ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1 ಕಪ್ ಕಡಲೆಹಿಟ್ಟು, 1 ½ ಕಪ್ - ಸಕ್ಕರೆ, ½ ಕಪ್ - ನೀರು, 1 ಕಪ್ - ತುಪ್ಪ, ½ ಕಪ್ - ಎಣ್ಣೆ.

### ಮಾಡುವ ವಿಧಾನ

ಮೊದಲಿಗೆ ಕಡಲೆಹಿಟ್ಟನ್ನು ಜರಡಿ ಹಿಡಿದುಕೊಳ್ಳಿ. ನಂತರ ಗ್ಯಾಸ್ ಮೇಲೆ ಒಂದು ಪಾತ್ರೆ ಇಟ್ಟು ಅದಕ್ಕೆ ತುಪ್ಪ ಹಾಗೂ ಎಣ್ಣೆ ಹಾಕಿ ಬಿಸಿ ಮಾಡಿಟ್ಟುಕೊಂಡು ಗ್ಯಾಸ್ ಆಫ್ ಮಾಡಿಕೊಳ್ಳಿ. ನಂತರ ಗ್ಯಾಸ್ ಮೇಲೆ ಒಂದು ದಪ್ಪ ತಳದ ಪಾತ್ರೆ ಇಟ್ಟು ಅದಕ್ಕೆ ಸಕ್ಕರೆ ಹಾಗೂ ನೀರು ಸೇರಿಸಿ ಒಂದೆಳೆ ಪಾಕ ತಯಾರಿಸಿಕೊಳ್ಳಿ. ನಂತರ ಕುದಿಯುತ್ತಿರುವ ಸಕ್ಕರೆ ಪಾಕಕ್ಕೆ ಸ್ವಲ್ಪ ಸ್ವಲ್ಪವೇ ಹಿಟ್ಟು ಸೇರಿಸಿಕೊಂಡು ಕೈಯಾಡಿಸುತ್ತಾ ಇರಿ.ನಂತರ ಬಿಸಿ ಮಾಡಿಟ್ಟುಕೊಂಡ ಎಣ್ಣೆ ಹಾಗೂ ತುಪ್ಪವನ್ನು ಒಂದು ಸಣ್ಣ ಸೌಟಿನ ಸಹಾಯದಿಂದ ಈ ಮಿಶ್ರಣಕ್ಕೆ ಹಾಕಿ. ಹೀಗೆ ಎಲ್ಲಾ ತುಪ್ಪ ಖಾಲಿಯಾಗುವವರೆಗೆ ಸ್ವಲ್ಪ ಸ್ವಲವೇ ಸೇರಿಸಿ ಸಣ್ಣ ಉರಿಯಲ್ಲಿ ಕೈಯಾಡಿಸುತ್ತಾ ಇರಿ. ಈ ಮಿಶ್ರಣ ದಪ್ಪಗಾಗುತ್ತಿದ್ದಂತೆ ಗುಳ್ಳೆಯ ರೀತಿ ಬರುತ್ತದೆ. ಆಗ ಗ್ಯಾಸ್ ಆಫ್ ಮಾಡಿ. ತುಪ್ಪ ಸವರಿದ ಪ್ಲೇಟ್ ಗೆ ಇದನ್ನು ಹಾಕಿ 15 ನಿಮಿಷಗಳ ಕಾಲ ಬಿಟ್ಟು ಕತ್ತರಿಸಿಕೊಳ್ಳಿ.

# ನಾಗ ಚೈತನ್ಯ-ಸಮಂತಾ ವಿಚ್ಛೇದನಕ್ಕೆ ಚಿರಂಜೀವಿ ಕಾರಣವೇ?



ಸಮಂತಾ-ನಾಗಚೈತನ್ಯ ಜೋಡಿ ತೆಲುಗು ಇಂಡಸ್ಟ್ರಿಯಲ್ಲಿ ಬೆಸ್ಟ್ ಜೋಡಿ ಎಂದೇ ಎಲ್ಲರೂ ಭಾವಿಸಿದ್ದರು. ಆದರೆ ಅವರ ನಡುವಿನ ಭಿನ್ನಾಭಿಪ್ರಾಯಗಳಿಂದ ಅವರು ವಿಚ್ಛೇದನ ಪಡೆದು ಪ್ರತ್ಯೇಕ ಜೀವನ ಮುಂದುವರೆಸಿದರು.

ಆದರೆ ವಿಚ್ಛೇದನ ವಿಚಾರದಲ್ಲಿ ಅಭಿಮಾನಿಗಳು ಎರಡು ಬಣಗಳಾಗಿ ಒಡೆದಿದ್ದಾರೆ.. ಸಮಂತಾ ಬೇರೊಬ್ಬ ಹುಡುಗಿಯೊಂದಿಗೆ ಸಂಬಂಧ ಹೊಂದಿದ್ದರಿಂದ ವಿಚ್ಛೇದನ ನೀಡಿದ್ದಾರೆ ಎಂದು ನಾಗ ಚೈತನ್ಯ ಅಭಿಮಾನಿಗಳು ಆರೋಪಿಸಿದ್ದರೆ, ಸಮಂತಾ ಅಭಿಮಾನಿಗಳು ನಾಗಚೈತನ್ಯ ಅವರಿಂದಲೇ ಸ್ಯಾಮ್ ವಿಚ್ಛೇದನ ನೀಡಿದ್ದು ಎಂದು ಆರೋಪ ಮಾಡುತ್ತಿದ್ದಾರೆ..

ವಿಚ್ಛೇದನದ ನಂತರ, ಇಬ್ಬರೂ ತಮ್ಮ ತಮ್ಮ ಜೀವನದಲ್ಲಿ ಬ್ಯುಸಿಯಾಗಿದ್ದಾರೆ. ಆದರೆ ಅವರ ವಿಚ್ಛೇದನಕ್ಕೆ ಸ್ಪಷ್ಟ ಕಾರಣ ಇದುವರೆಗೂ ತಿಳಿದುಬಂದಿಲ್ಲ. ಇತ್ತೀಚೆಗೆ ಇವರಿಬ್ಬರ ವಿಚ್ಛೇದನದ ಸುದ್ದಿಯೊಂದು ವೈರಲ್ ಆಗಿದೆ. ಸಮಂತಾ ಮತ್ತು ನಾಗ ಚೈತನ್ಯ ವಿಚ್ಛೇದನಕ್ಕೆ ಮೆಗಾಸ್ಟಾರ್ ಚಿರಂಜೀವಿ ಕೂಡ ಕಾರಣ ಎಂಬುದು ಈ ಸುದ್ದಿಯ ಸಾರಾಂಶ. ಮದುವೆಯ ನಂತರ ಸಮಂತಾಗೆ ರಾಮ್ ಚರಣ್ ಎದುರು ನಟಿಸುವ ಅವಕಾಶ ಸಿಕ್ಕಿತು. ರಂಗಸ್ಥಳಂ ಸಿನಿಮಾದಲ್ಲಿ ಆಫರ್ ಬಂದ ನಂತರ ಸಮಂತಾ ನಾಯಕಿಯಾಗಿ ಆಯ್ಕೆಯಾದರು. ಆದರೆ ಸಮಂತಾ ಅವರನ್ನು ನಾಯಕಿಯಾಗಿ ತೆಗೆದುಕೊಳ್ಳಬೇಕೋ ಬೇಡವೋ ಎಂದು ಚಿತ್ರತಂಡ ಸಾಕಷ್ಟು ಯೋಚಿಸಿತ್ತು,, ಸಮಂತಾ ಅಕ್ಕಿನೇನಿ ಮನೆಗೆ ಸೊಸೆಯಾಗಿ ಹೋಗಿದ್ದಾರೆ ಈಗ ಸಿನಿಮಾ ಮಾಡುತ್ತಾರಾ ಎಂದು ಚಿತ್ರತಂಡ ಚಿರು ಜೊತೆ ಮಾತನಾಡಿದಾಗ ಕೇಳಿದ್ದರಂತೆ ಆಗ ಚಿರು ಮದುವೆಯಾದರೆ ಹೀರೋಯಿನ್ ಆಗಬಾರದಾ ಎಂದು ಚಿತ್ರತಂಡಕ್ಕೆ ಹೇಳಿದ್ದರಂತೆ. ಮದುವೆಯ ನಂತರ, ಸಮಂತಾ ಮತ್ತೆ ತಮ್ಮ ನಟನೆಯಿಂದ ಉತ್ತಮ ಖ್ಯಾತಿಯನ್ನು ಗಳಿಸಲು ದಿ ಫ್ಯಾಮಿಲಿ ಮ್ಯಾನ್ ವೆಬ್ ಸರಣಿಗೆ ಗ್ರೀನ್ ಸಿಗ್ನಲ್ ನೀಡಿದ್ದರು. ಈ ವೆಬ್ ಸೀರಿಸ್ ನಂತರ ಸಮಂತಾ ಮತ್ತು ನಾಗ ಚೈತನ್ಯ ನಡುವೆ ಭಿನ್ನಾಭಿಪ್ರಾಯ ಮೂಡಿತ್ತು. ಅದರ ನಂತರ ದಂಪತಿಗಳು ವಿಚ್ಛೇದನ ಪಡೆದರು. ಇದರೊಂದಿಗೆ ಸಮಂತಾ ನಾಗ ಚೈತನ್ಯ ವಿಚ್ಛೇದನಕ್ಕೆ ಪರೋಕ್ಷವಾಗಿ ಚಿರು ಕಾರಣ ಎಂಬ ವಾದ ಮುನ್ನೆಲೆಗೆ ಬಂದಿದೆ.





# ಎಲೆಕೋಸು ಜ್ಯೂಸ್ ಪ್ರಯೋಜನಗಳಿವು



## ಹೆಲ್ತ್ ಟಿಪ್ಸ್

ಎಲೆಕೋಸಿನಲ್ಲಿ ಹೆಚ್ಚಿನ ಪೌಷ್ಟಿಕಾಂಶ ಇರುತ್ತದೆ. ಏಕೆಂದರೆ ಇದು ವಿಟಮಿನ್ ಗಳು, ಖನಿಜಗಳು ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಕ್ಯಾಬೇಜ್ ಜ್ಯೂಸ್ ಕಡಿಮೆ ಕ್ಯಾಲೋರಿ ಮತ್ತು ಹೆಚ್ಚಿನ ಫೈಬರ್ ಇರುವ ಆಹಾರ, ಎಲೆಕೋಸು ಜ್ಯೂಸ್ ತೂಕ ನಷ್ಟದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಎಲೆಕೋಸು ರಸದಲ್ಲಿ ಫೈಬರ್ ಸಮೃದ್ಧವಾಗಿದೆ. ಇದು ನಿಯಮಿತ ಕರುಳಿನ ಚಲನೆಯನ್ನು ಉತ್ತೇಜಿಸುವ ಮೂಲಕ ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ ಮತ್ತು ಮಲಬದ್ಧತೆಯನ್ನು ತಡೆಯುತ್ತದೆ. ಫೈಬರ್ ಉತ್ತಮ ಕರುಳಿನ ಬ್ಯಾಕ್ಟೀರಿಯಾದ ಬೆಳವಣಿಗೆಗೆ ಕೊಡುಗೆ ನೀಡುತ್ತದೆ, ಇದು ಒಟ್ಟಾರೆ ಜೀರ್ಣಕಾರಿ ಆರೋಗ್ಯಕ್ಕೆ ಒಳ್ಳೆಯದು. ಮಲಬದ್ಧತೆ,

ಎಲೆಕೋಸು ರಸವು ಪೊಟ್ಯಾಸಿಯಮ್ ನಲ್ಲಿ ಸಮೃದ್ಧವಾಗಿದೆ. ಇದು ಸೋಡಿಯಂನ ಪರಿಣಾಮಗಳನ್ನು ಪ್ರತಿರೋಧಿಸುವ ಮೂಲಕ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಎಲೆಕೋಸಿನಲ್ಲಿರುವ ಉತ್ಕರ್ಷಣ ನಿರೋಧಕಗಳು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದರಿಂದಾಗಿ ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ.

ಎಲೆಕೋಸು ಜ್ಯೂಸ್ನಲ್ಲಿ ವಿಟಮಿನ್ ಸಿ ಸಮೃದ್ಧವಾಗಿದೆ. ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಅವಶ್ಯಕವಾಗಿದೆ. ಈ ಪೋಷಕಾಂಶದ ಸಹಾಯದಿಂದ ಬಿಳಿ ರಕ್ತ ಕಣಗಳ ಉತ್ಪಾದನೆಯನ್ನು ಉತ್ತೇಜಿಸುತ್ತದೆ. ಇದು ಸೋಂಕುಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ವಿಟಮಿನ್ ಸಿ ಇರುವ ಕಾರಣ ಎಲೆಕೋಸು ಜ್ಯೂಸ್ ನಮ್ಮ ಚರ್ಮಕ್ಕೆ ಪ್ರಯೋಜನಕಾರಿ.

# ಯುಎಇ ದೇಶದಲ್ಲಿ ಈಗಾಗಲೇ ಇರುವ ಯುಪಿಐ ವರ್ತಕರ ಹಣ ಸ್ವೀಕೃತಿ ಜಾಲವು ಇನ್ನಷ್ಟು ಬಲ

ಎನ್ಪಿಸಿಐ ಇಂಟರ್ನ್ಯಾಷನಲ್ ಪೇಮೆಂಟ್ಸ್ ಲಿಮಿಟೆಡ್ (ಎನ್‌ಐಪಿಎಲ್), ಮಧ್ಯಪ್ರಾಚ್ಯ ಹಾಗೂ ಆಫ್ರಿಕಾದಲ್ಲಿ ಡಿಜಿಟಲ್ ವಹಿವಾಟುಗಳಿಗೆ ನೆರವು ಒದಗಿಸುವ ಪ್ರಮುಖ ಕಂಪನಿಯಾದ ನೆಟ್ವರ್ಕ್ ಇಂಟರ್ನ್ಯಾಷನಲ್ ಜೊತೆ ಪಾಲುದಾರಿಕೆಯಲ್ಲಿ, ಕ್ಯೂಆರ್ ಕೋಡ್ ಆಧಾರಿತ ಯುಪಿಐ (ಏಕೀಕೃತ ಪಾವತಿ ವ್ಯವಸ್ಥೆ) ಪಾವತಿಗಳ ಸ್ವೀಕೃತಿಯನ್ನು ಯುಎಇ ದೇಶದಲ್ಲಿ ನೆಟ್ವರ್ಕ್ ಕಂಪನಿಯ ಪಿಒಎಸ್ ಟರ್ಮಿನಲ್ಗಳ ಮೂಲಕ ಸಾಧ್ಯವಾಗಿಸಿದೆ.

ಇದರಿಂದಾಗಿ ಯುಎಇ ದೇಶದಾದ್ಯಂತ ಭಾರತದ ಪ್ರವಾಸಿಗರಿಗೆ ಹಾಗೂ ಅಲ್ಲಿರುವ ಅನಿವಾಸಿ ಭಾರತೀಯರಿಗೆ (ಎನ್‌ಆರ್‌ಐ) ನೆಟ್ವರ್ಕ್ ಇಂಟರ್ನ್ಯಾಷನಲ್ನ ವರ್ತಕರ ವಲಯದಲ್ಲಿ ಯಾವುದೇ ಅಡ್ಡಿಗಳು ಇಲ್ಲದ ಹಾಗೂ ಸುರಕ್ಷಿತವಾದ ವಹಿವಾಟುಗಳನ್ನು ನಡೆಸಲು ಅನುವು ಆಗುತ್ತದೆ. ನೆಟ್ವರ್ಕ್ ಕಂಪನಿಯು ಅರವತ್ತು ಸಾವಿರಕ್ಕೂ ಹೆಚ್ಚಿನ ವರ್ತಕರ ನಡುವೆ ಎರಡು ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪಿಒಎಸ್ ಟರ್ಮಿನಲ್‌ಗಳನ್ನು ಹೊಂದಿದೆ. ಚಿಲ್ಲರೆ ವಹಿವಾಟು, ಆತಿಥ್ಯ, ಸಾರಿಗೆ ಮತ್ತು ಸೂಪರ್ಮಾರ್ಕೆಟ್ ಸೇರಿದಂತೆ ಹಲವು ವಲಯಗಳ ವರ್ತಕರ ನಡುವೆ ನೆಟ್ವರ್ಕ್ ತನ್ನ ಪಿಒಎಸ್ಗಳನ್ನು ಹೊಂದಿದೆ. ಯುಪಿಐ ಸ್ವೀಕೃತಿ ಸೌಲಭ್ಯವನ್ನು ಹಂತ ಹಂತವಾಗಿ ಜಾರಿಗೆ ತರಲಾಗುತ್ತದೆ. ಚಿಲ್ಲರೆ ವಹಿವಾಟು ಮಳಿಗೆಗಳು, ಊಟದ ಹೋಟೆಲ್ಗಳು ಸೇರಿದಂತೆ ಹಲವು ವ್ಯಾಪಾರ ಮಳಿಗೆಗಳು ಇದರ ವ್ಯಾಪ್ತಿಗೆ ಬರಲಿವೆ. ಪ್ರವಾಸಿಗರ ಆಕರ್ಷಣೆಯ ಕೇಂದ್ರಗಳು, ದುಬೈ ಮಾಲ್ ಮತ್ತು ಮಾಲ್ ಆಫ್ ಎಮಿರೇಟ್ಸ್‌ನಲ್ಲಿಯೂ ಈ ಸೇವೆಗಳು ಲಭ್ಯವಾಗಲಿವೆ.

ಗಲ್ಫ್ ಸಹಕಾರ ಮಂಡಳಿಯ ದೇಶಗಳಿಗೆ ಭೇಟಿ ನೀಡುವ ಭಾರತೀಯರ ಸಂಖ್ಯೆಯು 2024ರಲ್ಲಿ 9.8 ಮಿಲಿಯನ್ಗೆ ಹೆಚ್ಚಳ ಕಾಣಲಿದೆ ಎಂದು ಅಂದಾಜಿಸಲಾಗಿದೆ. ಯುಎಇ ದೇಶಕ್ಕೆ ಭಾರತದಿಂದ 5.29 ಮಿಲಿಯನ್ ಮಂದಿ ಭೇಟಿ ನೀಡಲಿದ್ದಾರೆ ಎಂದು ಅಂದಾಜು ಮಾಡಲಾಗಿದೆ. ವ್ಯಾಪಾರ ವಹಿವಾಟು, ಪ್ರವಾಸ-ಮನರಂಜನೆ ಸೇರಿದಂತೆ ಹಲವು ಕಾರಣಗಳಿಂದಾಗಿ ಇಷ್ಟೊಂದು ಮಂದಿ ಇಲ್ಲಿಗೆ ಬರುತ್ತಾರೆ. ಪಿಒಎಸ್ ಟರ್ಮಿನಲ್ಗಳ ಮೂಲಕ ಯುಪಿಐ ಪಾವತಿ ಸ್ವೀಕೃತಿಯನ್ನು



ಸಾಧ್ಯವಾಗಿಸಿ, ನೆಟ್ವರ್ಕ್ ಕಂಪನಿಯು ದೇಶದಾಚೆಗಿನ ಪಾವತಿಗಳಿಗೆ ಕ್ಯೂಆರ್ ಆಧಾರಿತ ಸುರಕ್ಷಿತ ಪಾವತಿ ಸೌಲಭ್ಯವನ್ನು ಒದಗಿಸಲಿದೆ. ಇದರಿಂದಾಗಿ ಭಾರತದಲ್ಲಿ ಬ್ಯಾಂಕ್ ಖಾತೆಗಳನ್ನು ಹೊಂದಿರುವ ಎನ್.ಆರ್.ಐ.ಗಳಿಗೆ ಹಾಗೂ ಭಾರತದ ಪ್ರವಾಸಿಗರಿಗೆ ಯುಪಿಐ ವ್ಯವಸ್ಥೆ ಬಳಸಿ ಯುಎಇ ದೇಶದಲ್ಲಿ ನೆಟ್ವರ್ಕ್ ಕಂಪನಿಯ ಪಿಒಎಸ್ ಟರ್ಮಿನಲ್‌ಗಳಲ್ಲಿ ಹಣ ಪಾವತಿಸಲು ಸಾಧ್ಯವಾಗಲಿದೆ.

ಎನ್ಪಿಸಿಐ ಇಂಟರ್‌ನ್ಯಾಷನಲ್‌ನ ಸಿಇಒ ಆಗಿರುವ ರಿತೇಶ್ ಶುಕ್ಲಾ ಅವರು 'ನೆಟ್ವರ್ಕ್ ಇಂಟರ್‌ನ್ಯಾಷನಲ್ ಜೊತೆಗಿನ ನಮ್ಮ ಪಾಲುದಾರಿಕೆಯು ಯುಎಇ ದೇಶದಲ್ಲಿ ಯುಪಿಐ ಅಸ್ತಿತ್ವವನ್ನು ಇನ್ನಷ್ಟು ಬಲಪಡಿಸಲಿದೆ. ಯುಎಇ ದೇಶದಲ್ಲಿ ವರ್ತಕರು ಯುಪಿಐ ಪಾವತಿಗಳನ್ನು ಸ್ವೀಕರಿಸುವುದನ್ನು ಹೆಚ್ಚು ಮಾಡುವ ಮೂಲಕ ನಾವು ಭಾರತೀಯ ಪ್ರವಾಸಿಗರ ಪಾಲಿಗೆ ಚಿರಪರಿಚಿತವಾದ ಹಾಗೂ ಅಡೆತಡೆಗಳು ಇಲ್ಲದ ಪಾವತಿ ಸೌಲಭ್ಯವನ್ನು ಒದಗಿಸುವುದಷ್ಟೇ ಅಲ್ಲದೆ, ಹೊಸತನದ ಪಾವತಿ ವ್ಯವಸ್ಥೆಗಳ ಬಳಕೆಯನ್ನು ಜಾಗತಿಕವಾಗಿ ಹೆಚ್ಚಿಸುವ ಕೆಲಸವನ್ನೂ ಮಾಡುತ್ತಿದ್ದೇವೆ. ಈ ಪಾಲುದಾರಿಕೆಯು ತಾಂತ್ರಿಕ ಮುನ್ನಡೆಯ ಚಾಲಕಶಕ್ತಿಯಾಗುವಲ್ಲಿ ಹಾಗೂ ಹೆಚ್ಚು ಸಂಯೋಜಿತವಾದ ಜಾಗತಿಕ ಪಾವತಿ ವ್ಯವಸ್ಥೆಯನ್ನು ಸೃಷ್ಟಿಸುವಲ್ಲಿ ನಾವು ಹೊಂದಿರುವ ಬದ್ಧತೆಯನ್ನು ತೋರಿಸುತ್ತಿದೆ' ಎಂದು ಹೇಳಿದ್ದಾರೆ.

ನೆಟ್‌ವರ್ಕ್ ಇಂಟರ್‌ನ್ಯಾಷನಲ್‌ನ ಗ್ರೂಪ್ ಸಿಇಒ ನಂದನ್ ಮೆರ್ ಅವರು 'ಯುಎಇ ದೇಶದಲ್ಲಿ ಕೆಲಸ ಮಾಡುತ್ತಿರುವ ಅಥವಾ ಅಲ್ಲಿಗೆ ಭೇಟಿ ನೀಡುವ ಭಾರತೀಯರಿಗೆ ಪಾವತಿ ವ್ಯವಸ್ಥೆಯನ್ನು ಬಲಪಡಿಸುವುದಕ್ಕಾಗಿ ಎನ್ಪಿಸಿಐ ಇಂಟರ್ನ್ಯಾಷನಲ್ ಪೇಮೆಂಟ್ಸ್ ಲಿಮಿಟೆಡ್ ಜೊತೆ ಪಾಲುದಾರಿಕೆ ಹೊಂದುತ್ತಿರುವುದು ನಮಗೆ ಸಂತಸ ತಂದಿದೆ. ಗ್ರಾಹಕರಿಗೆ ತಮಗೆ ಇಷ್ಟವಾಗುವ ರೀತಿಯಲ್ಲಿ ಪಾವತಿ ಮಾಡಲು ಅವಕಾಶ ಕಲ್ಪಿಸುವ ಮೂಲಕ, ವಾಣಿಜ್ಯ ವಹಿವಾಟುಗಳಲ್ಲಿ ತೊಡಗಿರುವವರನ್ನು ಹಾಗೂ ವರ್ತಕರನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಜ್ಜುಗೊಳಿಸಬೇಕು ಎಂಬ ನಮ್ಮ ಆಲೋಚನೆಗೆ ಒಂದು ಹೆಜ್ಜೆ ಹತ್ತಿರವಾಗಿದ್ದೇವೆ. ಡಿಜಿಟಲ್ ಯುಎಇ ಆಲೋಚನೆಗೂ ಹತ್ತಿರವಾಗಿದ್ದೇವೆ. ಈ ಪಾಲುದಾರಿಕೆಯು ದೇಶದಲ್ಲಿ ಬಹಳ ಬಲಿಷ್ಠವಾದ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ರೂಪಿಸುತ್ತದೆ ಹಾಗೂ ನಗದುರಹಿತ ವಹಿವಾಟನ್ನು ಹೆಚ್ಚುಮಾಡುತ್ತದೆ ಎಂಬ ವಿಶ್ವಾಸ ನಮಗಿದೆ' ಎಂದು ಹೇಳಿದ್ದಾರೆ.

# ವ್ಯಾಕ್ಸಿಂಗ್ ತ್ವಚೆಯ ಆರೈಕೆಯತ್ತ ಗಮನಕೊಡಿ

## ಬ್ಯೂಟಿ ಟಿಪ್ಸ್



ಯಾವುದೇ ಕಾರ್ಯಕ್ರಮವಿರಲಿ ವ್ಯಾಕ್ಸಿಂಗ್ ಗಾಗಿ ಪ್ರತಿಯೊಬ್ಬರೂ ಬ್ಯೂಟಿಪಾರ್ಲರ್ ಕದ ತಟ್ಟಿಯೇ ತಟ್ಟುತ್ತಾರೆ. ಆ ಬಳಿಕ ಚರ್ಮದಲ್ಲಿ ಮೂಡುವ ದದ್ದುಗಳ ಬಗ್ಗೆ ತಲೆ ಕೆಡಿಸಿಕೊಂಡೂ ಇರುತ್ತಾರೆ. ಅದನ್ನು ತಡೆಯಲು ಸರಳ ಸುಲಭ ಉಪಾಯಗಳು ಇಲ್ಲಿವೆ. ವ್ಯಾಕ್ಸಿಂಗ್ ಗಿಂತ ಮೊದಲೇ ಡೆಡ್ ಸ್ಕಿನ್ ಕೋಶವನ್ನು ತೆಗೆಯಲು ಮೃದುವಾದ ಸ್ಕಬ್ಬಿಂಗ್ ಬಳಸಿ ತ್ವಚೆಯನ್ನು ಮೃದುವಾಗಿ ಉಜ್ಜಿ.

ವ್ಯಾಕ್ಸಿಂಗ್ ನ ಎರಡು ದಿನ ಮೊದಲು ಹೀಗೆ ಮಾಡುವುದರಿಂದ ವ್ಯಾಕ್ಸಿಂಗ್ ಬಳಿಕ ಬರುವ ತುರಿಕೆಯನ್ನು ಕಡಿಮೆ ಮಾಡಬಹುದು.

ಪಾರ್ಲರ್ ವಾತಾವರಣ ಹೇಗಿದೆ ಎಂಬುದನ್ನು ಮೊದಲೇ ಪರಿಶೀಲಿಸಿ. ಒಮ್ಮೆ ಭೇಟಿ ನೀಡಿದ್ದಾಗ ಹೆಚ್ಚು ತುರಿಕೆ, ದದ್ದುಗಳು ಮೂಡಿದ್ದರೆ ಮತ್ತೊಮ್ಮೆ ಹೋಗುವ ಮುನ್ನ ಆಲೋಚಿಸಿ.

ವ್ಯಾಕ್ಸಿಂಗ್ ಮಾಡಿದ ತಕ್ಷಣ ಬಿಸಿಲಿಗೆ ಹೋಗದಿರಿ. ಬಿಸಿ ನೀರಿನಲ್ಲಿ ಸ್ನಾನ ಮಾಡದಿರಿ. ತ್ವಚೆಯ ಆರೈಕೆಯತ್ತ ಹೆಚ್ಚಿನ ಗಮನ ಕೊಡಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಅಧಿಕ ದುಂದು ವೆಚ್ಚ, ಶತ್ರು ಕಾಟ, ಸಾಲ ಭಾದೆ, ವಿದ್ಯಾಭ್ಯಾಸದಲ್ಲಿ ಕುಂಠಿತ, ಮಾಟ ಮಂತ್ರ ತಂತ್ರದ ಭಯ

**ವೃಷಭ:** ಅನಿರೀಕ್ಷಿತ ಲಾಭ ಮತ್ತು ಯಶಸ್ಸು, ಕೌಟುಂಬಿಕ ಸಹಕಾರ, ಪ್ರೀತಿ ಪ್ರೇಮದಲ್ಲಿ ಯಶಸ್ಸು , ಆರೋಗ್ಯದಲ್ಲಿ ಸುಧಾರಣೆ, ತಂದೆಯಿಂದ ಲಾಭ

**ಮಿಥುನ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಆರ್ಥಿಕ ಪ್ರಗತಿ, ವಿದ್ಯಾಭ್ಯಾಸ ಬೆಳವಣಿಗೆ, ಉದ್ಯೋಗ ಸ್ಥಳದಲ್ಲಿ ಗೊಂದಲ

**ಕಟಕ:** ಆರ್ಥಿಕ ಮುಗ್ಗಟ್ಟು, ಕೌಟುಂಬಿಕ ಅಸಹಕಾರ, ಉದ್ಯೋಗ ನಷ್ಟ, ಮಾತಿನಿಂದ ಸಮಸ್ಯೆ

**ಸಿಂಹ:** ವ್ಯವಹಾರಕ್ಕೆ ಅಡೆತಡೆ, ಅಧಿಕ ಖರ್ಚು, ಪ್ರಯಾಣಕ್ಕೆ ವಿಘ್ನ, ವಿದ್ಯಾಭ್ಯಾಸಕ್ಕೆ ತೊಂದರೆ

**ಕನ್ಯಾ:** ಉದ್ಯೋಗ ಅವಕಾಶ, ಆಪತ್ತಿನಿಂದ ಪಾರು, ಸೋಮಾರಿತನ, ಆಲಸ್ಯ, ಪಾಲುದಾರಿಕೆಯಲ್ಲಿ ಮನಸ್ತಾಪ

**ತುಲಾ:** ಅನಾರೋಗ್ಯ ಸಮಸ್ಯೆ, ಶತ್ರು ಉಪಟಳ, ಸಾಲದ ಚಿಂತೆ, ಪಾಲುದಾರಿಕೆಯಲ್ಲಿ ನಷ್ಟ

**ವೃಶ್ಚಿಕ:** ಯತ್ನ ಕಾರ್ಯಗಳಿಗೆ ಅಡೆತಡೆ, ಪ್ರೀತಿ ಪ್ರೇಮದಲ್ಲಿ ಸೋಲು, ಕ್ರೀಡಾ ಚಟುವಟಿಕೆಯಲ್ಲಿ ಹಿನ್ನಡೆ, ಅಕಸ್ಮಿಕ ಲಾಭ

**ಧನಸ್ಸು:** ದಾಂಪತ್ಯ ಕಲಹ, ಪಾಲುದಾರಿಕೆಯಲ್ಲಿ ಸಮಸ್ಯೆ, ಶುಭ ಕಾರ್ಯ ಪ್ರಯತ್ನ, ಮನೆ ವಾತಾವರಣ ಕಲುಷಿತ

**ಮಕರ:** ವಾಹನ ಮತ್ತು ಸ್ಥಿರಾಸ್ತಿ ನಷ್ಟ, ತಾಯಿಯಿಂದ ಅಂತರ, ಗುಪ್ತ ವಿಷಯಗಳಿಂದ ಸಮಸ್ಯೆ, ಸಹೋದರಿಯಿಂದ ಲಾಭ

**ಕುಂಭ:** ಆರ್ಥಿಕ ಬೆಳವಣಿಗೆ, ಪ್ರಯಾಣಕ್ಕೆ ಅಡೆತಡೆ, ಮಕ್ಕಳೊಂದಿಗೆ ಕಿರಿಕಿರಿ, ಬಂಧು ಬಾಂಧವರಿಂದ ಸಮಸ್ಯೆ

**ಮೀನ:** ಭೂಮಿ ಮತ್ತು ವಾಹನದಿಂದ ಅನುಕೂಲ, ಆರ್ಥಿಕ ಬೆಳವಣಿಗೆ ಕುಂಠಿತ, ಕುಟುಂಬದಿಂದ ಅಂತರ, ರೋಗಭಾದೆಯಿಂದ ಮುಕ್ತಿ.

# ಮೆಕ್ಯಾನಿಕಲ್ ಪೆನ್ಸಿಲ್ ದಿನ



ಮೆಕ್ಯಾನಿಕಲ್ ಪೆನ್ಸಿಲ್ ದಿನವನ್ನು ಪ್ರತಿ ವರ್ಷ ಜುಲೈ 5 ರಂದು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. ಮೆಕ್ಯಾನಿಕಲ್ ಪೆನ್ಸಿಲ್ಗಳು ತರಗತಿ ಮತ್ತು ಕೆಲಸದ ಸ್ಥಳದಲ್ಲಿ ಹಲವು ಉಪಯೋಗಗಳನ್ನು ಹೊಂದಿವೆ. ನಿಮ್ಮ ಎಲ್ಲಾ ಲಿಖಿತ ಕೆಲಸಗಳಿಗೆ ನೀವು ಪೆನ್ನುಗಳನ್ನು ಬಳಸುತ್ತಿದ್ದರೂ ಸಹ, ನಮ್ಮ ಅಂತಿಮ ಪ್ರತಿಯಲ್ಲಿ ದೋಷ ಉಂಟಾಗುವುದನ್ನು ತಪ್ಪಿಸಲು ನಾವು ಸಾಮಾನ್ಯವಾಗಿ ಪೆನ್ಸಿಲ್ಗಳೊಂದಿಗೆ ಡ್ರಾಫ್ಟ್ ಲೆಕ್ಕಾಚಾರಗಳು ಮತ್ತು ಬರಹಗಳನ್ನು ಮಾಡುತ್ತೇವೆ. ಪ್ರಪಂಚವು ಡಿಜಿಟಲ್ ಸಂವಹನ ರೂಪಗಳಿಗೆ ಆದ್ಯತೆ ನೀಡುತ್ತಿರುವಾಗ, ಯಾಂತ್ರಿಕ ಪೆನ್ಸಿಲ್ಗಳು ಬರವಣಿಗೆ ಮತ್ತು ವಿನ್ಯಾಸವನ್ನು ಸುಲಭಗೊಳಿಸುತ್ತದೆ ಮತ್ತು ಅವುಗಳಿಗೆ ವೈಯಕ್ತಿಕ ಸ್ಪರ್ಶವನ್ನು ನೀಡುತ್ತದೆ. ಮೆಕ್ಯಾನಿಕಲ್ ಪೆನ್ಸಿಲ್ ಡೇ ಈ ಅದ್ಭುತ ಆವಿಷ್ಕಾರವನ್ನು ಆಚರಿಸುತ್ತದೆ ಮತ್ತು ಪೆನ್ಸಿಲ್ಗಳಿಂದ ಕಳೆದುಹೋದ ಕಲೆಯನ್ನು ತೆಗೆದುಕೊಳ್ಳಲು ಹೆಚ್ಚಿನ ಜನರನ್ನು ಪ್ರೋತ್ಸಾಹಿಸುತ್ತದೆ.

ಪೆನ್ಸಿಲ್‌ಗಳು ಸ್ವಲ್ಪ ಸಮಯದವರೆಗೆ ಇವೆ. 16 ನೇ ಶತಮಾನದ ಆರಂಭದಲ್ಲಿ ಯುರೋಪ್ನಲ್ಲಿ ಗ್ರ್ಯಾಫೈಟ್ ಗಣಿಗಳನ್ನು ಕಂಡುಹಿಡಿಯುವ ಸಮಯದಲ್ಲಿ ಮೊದಲ ಪೆನ್ಸಿಲ್‌ಗಳನ್ನು ರಚಿಸಲಾಯಿತು. ಪೆನ್ಸಿಲ್ನ ಮೊದಲ ಮೂಲಮಾದರಿಯನ್ನು ಕಾನ್ರಾಡ್ ಗೆಸ್ನರ್ 1565 ರಲ್ಲಿ ವಿನ್ಯಾಸಗೊಳಿಸಿದರು. ಅವರು ಸ್ವಿಸ್ ನೈಸರ್ಗಿಕವಾದಿ ಮತ್ತು ಗ್ರಂಥಸೂಚಿಗಾರರಾಗಿದ್ದರು. ಮೊದಲ ಪೆನ್ಸಿಲ್ಗಳು ಸ್ಟ್ರಿಂಗ್ನಲ್ಲಿ ಸುತ್ತಿದ ಗ್ರ್ಯಾಫೈಟ್ ಕಡ್ಡಿಗಳು! ನಂತರ ಅವುಗಳನ್ನು ಮರದ ಕೊಳವೆಗಳಲ್ಲಿ ಸೇರಿಸಲಾಯಿತು, ಆದ್ದರಿಂದ ಅವುಗಳನ್ನು ತೀಕ್ಷ್ಣಗೊಳಿಸಬಹುದು. ಮೊದಲ ಮೆಕ್ಯಾನಿಕಲ್ ಪೆನ್ಸಿಲ್ ಅನ್ನು 1822 ರಲ್ಲಿ ಬ್ರಿಟನ್ನಲ್ಲಿ ಸ್ಯಾಂಪ್ಸನ್ ಮೊರ್ಡಾನ್ ಮತ್ತು ಜಾನ್ ಐಸಾಕ್ ಹಾಕಿನ್ಸ್ ಅಭಿವೃದ್ಧಿಪಡಿಸಿದರು. ಈ ಪೆನ್ಸಿಲ್ಗಳು ಸೀಸವನ್ನು ಸರಿಸಲು ಸಾಧನಗಳನ್ನು ಹೊಂದಿದ್ದವು, ಇದರರ್ಥ ಬಳಕೆದಾರರು ಇನ್ನು ಮುಂದೆ ಸೀಸವನ್ನು ಹಸ್ತಚಾಲಿತವಾಗಿ ಹರಿತಗೊಳಿಸಬೇಕಾಗಿಲ್ಲ. ಅದರ ಆವಿಷ್ಕಾರದ ನಂತರ, ಅನೇಕ ಕಂಪನಿಗಳು ಯಾಂತ್ರಿಕ ಪೆನ್ಸಿಲ್ಗಳನ್ನು ಬೃಹತ್ ಪ್ರಮಾಣದಲ್ಲಿ ಉತ್ಪಾದಿಸಲು ಪ್ರಾರಂಭಿಸಿದವು. ಇಂದು ಯಾಂತ್ರಿಕ ಪೆನ್ಸಿಲ್ಗಳು ಮೂರು ವಿಧಗಳಲ್ಲಿ ಬರುತ್ತವೆ: ರಾಚೆಟ್ -ಆಧಾರಿತ, ಕ್ಲಚ್-ಆಧಾರಿತ ಮತ್ತು ಸ್ಕ್ರೂ-ಆಧಾರಿತ. ಮೆಕ್ಯಾನಿಕಲ್ ಪೆನ್ಸಿಲ್ಗಳು ವಿವಿಧ ರೀತಿಯ ಸೀಸದ ಅಗಲಗಳಲ್ಲಿ ಲಭ್ಯವಿವೆ ಮತ್ತು ಬಹು ಚೌಕಟ್ಟುಗಳನ್ನು ಹೊಂದಿರುತ್ತವೆ. ನಿಮ್ಮ ಯಾಂತ್ರಿಕ ಪೆನ್ಸಿಲ್ ಪ್ಲಾಸ್ಟಿಕ್, ಲೋಹ ಅಥವಾ ಮರದ ದೇಹವನ್ನು ಹೊಂದಿರಬಹುದು. ಮುಖ್ಯವಾಗಿ ಬರೆಯಲು ಬಳಸಲಾಗಿದ್ದರೂ, ಯಾಂತ್ರಿಕ ಪೆನ್ಸಿಲ್ಗಳು ಕಲೆ ಮತ್ತು ವಿನ್ಯಾಸಗಳನ್ನು ರಚಿಸಲು ತುಂಬಾ ಉಪಯುಕ್ತವಾಗಿವೆ. ಮೆಕ್ಯಾನಿಕಲ್ ಪೆನ್ಸಿಲ್ಗಳು ತುಂಬಾ ನುಣುಪಾದವಾಗಿರುವುದರಿಂದ, ಉತ್ತಮವಾದ ವಿವರಗಳನ್ನು ರಚಿಸಲು ಇದು ಸುಲಭವಾಗುತ್ತದೆ

# ಕೆಲಸದ ಒತ್ತಡ ತಾಳಲಾರದೆ ಆತ್ಮಹತ್ಯೆಗೆ ಶರಣಾದ ರೊಬೋಟ್!



**ಸಿಯೋಲ್:** ನಂಬಿದರೆ ನಂಬಿ! ಬಿಟ್ಟರೆ ಬಿಡಿ!! ಇದೇ ಪ್ರಥಮ ಬಾರಿಗೆ ಕೆಲಸದ ಒತ್ತಡ ತಾಳದೆ ರೊಬೋಟ್ ಕೂಡಾ ಆತ್ಮಹತ್ಯೆಗೆ ಶರಣಾಗಿದೆ! ಈ ಘಟನೆ ನಡೆದಿರುವುದು ಸಮಗ್ರ ಸ್ವಯಂಚಾಲಿತ ರೊಬೋಟ್ಗಳನ್ನು ವಿವಿಧ ವೃತ್ತಿಗಳಲ್ಲಿ ಬಳಕೆ ಮಾಡಿಕೊಳ್ಳುವುದರಲ್ಲಿ ಮುಂಚೂಣಿಯಲ್ಲಿರುವ ದಕ್ಷಿಣ ಕೊರಿಯಾದಲ್ಲಿ.

ನಾಗರಿಕ ಸೇವಾ ರೊಬೋಟ್ ಒಂದು ಇದೇ ಪ್ರಪ್ರಥಮ ಬಾರಿಗೆ ಮೆಟ್ಟಿಲುಗಳ ಮೇಲಿಂದ ತನ್ನನ್ನು ತಾನು ಕೆಳಕ್ಕೆ ದೂಡಿಕೊಂಡು ಆತ್ಮಹತ್ಯೆ ಮಾಡಿಕೊಂಡಿದೆ ಎಂದು The Daily Mailಸುದ್ದಿ ಸಂಸ್ಥೆ ವರದಿ ಮಾಡಿದೆ. ಎರಡು ಮೀಟರ್ ಎತ್ತರದಿಂದ ಕೆಳಗೆ ಬಿದ್ದ ನಂತರ ರೊಬೋಟ್ ನಿಷ್ಕ್ರಿಯವಾಗಿದೆ ಎಂದು ಗುಮಿ ಸಿಟಿ ಕೌನ್ಸಿಲ್ ಕೂಡಾ ದೃಢಪಡಿಸಿದೆ. ಕಟ್ಟಡದ ಎರಡು ಮತ್ತು ಮೊದಲ ಮಹಡಿಯ ನಡುವೆ ಕೆಳಕ್ಕೆ ಬಿದ್ದಿರುವ ರೊಬೋಟ್ ತುಂಡುತುಂಡಾಗಿದೆ ಎಂದು ಹೇಳಲಾಗಿದೆ.

ಮೊತ್ತಮೊದಲ ರೊಬೋಟ್ ಆತ್ಮಹತ್ಯೆ ಎಂದು ಹೇಳಲಾಗಿರುವ ಈ ಘಟನೆಗೆ ಗುಮಿ ನಗರದ ಸ್ಥಳೀಯ ನಾಗರಿಕರು ಕಂಬನಿ ಮಿಡಿಯುತ್ತಿದ್ದಾರೆ. ಪ್ರತ್ಯಕ್ಷದರ್ಶಿಗಳ ಪ್ರಕಾರ, ವಿವರಿಸಲಾಗದ ಪತನಕ್ಕೂ ಮುನ್ನ, ಅದೃಶ್ಯ ಉಪಸ್ಥಿತಿಗೆ ಪ್ರತಿಕ್ರಿಯಿಸಿದ ರೊಬೋಟ್, ನಿಂತ ಜಾಗದಲ್ಲೇ ಗಿರಿಗಿಟ್ಟಲೆ ಸುತ್ತಿ, ನಂತರ ಕೆಳಗೆ ಬಿದ್ದಿತು ಎನ್ನಲಾಗಿದೆ. ಈ ಘಟನೆಯ ನಿಖರ ಕಾರಣದ ಕುರಿತು ತನಿಖೆ ಪ್ರಗತಿಯಲ್ಲಿದ್ದು, ರೊಬೋಟ್ನ ಅವಶೇಷಗಳನ್ನು ಅಧಿಕಾರಿಗಳು ಸಂಗ್ರಹಿಸಿ, ಅವನ್ನು ವಿಶ್ಲೇಷಣೆಗೊಳಪಡಿಸಿದ್ದಾರೆ ಎಂದು ವರದಿಯಾಗಿದೆ

# ಅಧ್ಯಕ್ಷೀಯ ಚುನಾವಣೆಯಿಂದ ಜೋ ಬೈಡನ್ ಸ್ಪರ್ಧೆಯಿಂದ ಹಿಂದೆ ಸರಿಯುತ್ತಿಲ್ಲ



**ಅಮೆರಿಕ:** ಜೋ ಬೈಡನ್ ಅವರು ಅಮೆರಿಕದ ಅಧ್ಯಕ್ಷೀಯ ಚುನಾವಣೆಯ ಕಣದಿಂದ ಹಿಂದೆ ಸರಿಯುತ್ತಿಲ್ಲ ಎಂದು ಅವರ ವಕ್ತಾರರು ಸ್ಪಷ್ಟನೆ ನೀಡಿದ್ದಾರೆ. ಹಾಲಿ ಅಧ್ಯಕ್ಷರಾಗಿರುವ ಬೈಡನ್, ಚುನಾವಣೆ ಕಣದಿಂದ ಹಿಂದೆ ಸರಿಯಬೇಕು ಎಂಬ ಅಭಿಪ್ರಾಯ ಡೆಮಾಕ್ರಟಿಕ್ ಪಕ್ಷದಲ್ಲೇ ಕೇಳಿಬಂದಿತ್ತು.

ಕಳೆದ ಗುರುವಾರ ಬೈಡನ್ ಹಾಗೂ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ನಡುವಣ ಚರ್ಚೆಯಲ್ಲಿ ಬೈಡನ್ ಅವರಿಗೆ ಹಿನ್ನಡೆ ಉಂಟಾಗಿದೆ ಎಂದು ವಿಶ್ಲೇಷಿಸಲಾಗಿತ್ತು. ಇದರಿಂದ ಅವರು ಚುನಾವಣಾ ಕಣದಿಂದ ಹಿಂದೆ ಸರಿಯುವಂತೆ ಒತ್ತಡ ಇನ್ನಷ್ಟು ಹೆಚ್ಚಿತ್ತು. 'ಇನ್ನೊಂದು ಅವಧಿಗೆ ಅಧ್ಯಕ್ಷನಾಗುವ ಸಾಮರ್ಥ್ಯ ಇದೆ ಎಂಬ ಭರವಸೆಯನ್ನು ತ್ವರಿತವಾಗಿ ಜನರ ಮುಂದಿಡಲು ವಿಫಲವಾದರೆ, ಸ್ಪರ್ಧಿಸುವ ಅವಕಾಶ ಕಳೆದುಕೊಳ್ಳಲಿದ್ದೇನೆ ಎಂದು ಬೈಡನ್ ಅವರು ತಮ್ಮ ಆಪ್ತರ ಬಳಿ ಹೇಳಿಕೊಂಡಿದ್ದಾರೆ' ಎಂದು ನ್ಯೂಯಾರ್ಕ್ ಟೈಮ್ಸ್ ಮತ್ತು ಸಿಎನ್ಎನ್ ವರದಿ ಮಾಡಿತ್ತು. ಶ್ವೇತಭವನದ ವಕ್ತಾರೆ ಕರೀನ್ ಜಾನ್ ಪಿಯರ್ ಅವರು ಮಾಧ್ಯಮ ವರದಿಗಳನ್ನು ಅಲ್ಲಗಳೆದಿದ್ದು, 'ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸುವ ವಿಚಾರದಲ್ಲಿ ಬೈಡನ್ ಸ್ಪಷ್ಟ ನಿಲುವು ಹೊಂದಿದ್ದು, ಕಣದಿಂದ ಹಿಂದೆ ಸರಿಯುತ್ತಿಲ್ಲ' ಎಂದಿದ್ದಾರೆ. 'ಮುಂಬರುವ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದು, ಗೆಲ್ಲುವ ವಿಶ್ವಾಸವಿದೆ. ಏಕೆಂದರೆ ಡೆಮಾಕ್ರಟಿಕ್ ಪಕ್ಷದವರು ಒಗ್ಗಟ್ಟು ಪ್ರದರ್ಶಿಸಿದರೆ ನಾವು ಯಾವಾಗಲೂ ಗೆಲ್ಲುತ್ತೇವೆ. 2020 ರಲ್ಲಿ ಟ್ರಂಪ್ ಅವರನ್ನು ಸೋಲಿಸಿದ್ದ ನಾವು, ಮುಂಬರುವ ಚುನಾವಣೆಯಲ್ಲೂ ಸೋಲಿಸುತ್ತೇವೆ' ಎಂದು 81 ವರ್ಷದ ಬೈಡನ್ ಹೇಳಿದ್ದಾಗಿ ಮೂಲಗಳು ತಿಳಿಸಿವೆ.

# ಬ್ರಿಟನ್ ಸಾರ್ವತ್ರಿಕ ಚುನಾವಣೆ: ಋಷಿ ಸುನಕ್‌ಗೆ ಹಿನ್ನಡೆ?

**ಬ್ರಿಟನ್:** ಬ್ರಿಟನ್ ಸಂಸತ್ತಿಗೆ ಗುರುವಾರ ಸಾರ್ವತ್ರಿಕ ಚುನಾವಣೆ ನಡೆದಿದೆ. ಬರೋಬ್ಬರಿ 14 ವರ್ಷಗಳ ಬಳಿಕ ಭರ್ಜರಿ ಜಯದೊಂದಿಗೆ ಅಧಿಕಾರಕ್ಕೆ ಮರಳುವ ವಿಶ್ವಾಸವನ್ನು ವಿರೋಧ ಪಕ್ಷವಾದ ಲೇಬರ್ ಪಾರ್ಟಿ ವ್ಯಕ್ತಪಡಿಸಿದೆ.ಇನ್ನೂ ಆರು ತಿಂಗಳು ಅಧಿಕಾರವಧಿ ಇದ್ದರೂ ಅವಧಿಪೂರ್ವ ಚುನಾವಣೆಗೆ ಹೋಗುವ ಮೂಲಕ ರಿಷಿ ಸುನಕ್ ಅಚ್ಚರಿ ಮೂಡಿಸಿದ್ದರು.ಪ್ರಾಥಮಿಕ ವಿಶ್ಲೇಷಣೆ ಪ್ರಕಾರ, ವಿರೋಧಪಕ್ಷ ಲೇಬರ್ ಪಾರ್ಟಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮುವ ಸಾಧ್ಯತೆಗಳಿವೆ.ಆಡಳಿತ ವಿರೋಧಿ ಅಲೆಯ ಭೀತಿಯಲ್ಲಿರುವ ಆಡಳಿತಾರೂಢ ಕನ್ಸರ್ವೇಟಿವ್ ಪಕ್ಷ ಅಧಿಕಾರವನ್ನು ಉಳಿಸಿಕೊಳ್ಳಲು ಯತ್ನಿಸುತ್ತಿದೆ. ಈ ಚುನಾವಣೆ ಮೂಲಕ ಭಾರತ ಮೂಲದ ಬ್ರಿಟಿಷ್ ಪ್ರಧಾನಿ ರಿಷಿ ಸುನಕ್ ಅವರ ರಾಜಕೀಯ ಭವಿಷ್ಯವೂ ತೂಗುಯ್ಯಾಲೆಯಲ್ಲಿದೆ.



# ರಷ್ಯಾ, ಆಸ್ಟ್ರಿಯಾಗೆ ಪ್ರಧಾನಿ ಮೋದಿ ಪ್ರವಾಸ



**ದೆಹಲಿ:** ಪ್ರಧಾನಿ ನರೇಂದ್ರ ಮೋದಿ ಜು.8ರಂದು ರಷ್ಯಾ ಪ್ರವಾಸ ಕೈಗೊಳ್ಳಲಿದ್ದಾರೆ. ಜುಲೈ 8ರಿಂದ 10ರವರೆಗೆ ನರೇಂದ್ರ ಮೋದಿ ಅವರು ರಷ್ಯಾ ಹಾಗೂ ಆಸ್ಟ್ರಿಯಾ ಪ್ರವಾಸ ಕೈಗೊಳ್ಳಲಿದ್ದಾರೆ. ಅದರಲ್ಲೂ, ಉಕ್ರೇನ್ ಹಾಗೂ ರಷ್ಯಾ ಯುದ್ಧದ ಬಳಿಕ ಇದೇ ಮೊದಲ ಬಾರಿಗೆ ಮೋದಿ ಅವರು ರಷ್ಯಾಗೆ ತೆರಳುತ್ತಿದ್ದಾರೆ.

ಜುಲೈ 10ರಂದು ನರೇಂದ್ರ ಮೋದಿ ಅವರು ಆಸ್ಟ್ರಿಯಾಗೆ ಭೇಟಿ ನೀಡಲಿದ್ದಾರೆ. ಕಳೆದ 41 ವರ್ಷಗಳಲ್ಲಿಯೇ ಆಸ್ಟ್ರಿಯಾಗೆ ಭೇಟಿ ನೀಡುತ್ತಿರುವ ಮೊದಲ ಪ್ರಧಾನಿ ಎನಿಸಿದ್ದಾರೆ.

ಜುಲೈ 8 ಹಾಗೂ 9ರಂದು ನರೇಂದ್ರ ಮೋದಿ ಅವರು ಮಾಸ್ಕೋದಲ್ಲಿ ಇರಲಿದ್ದು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭೇಟಿಯಾಗಲಿದ್ದಾರೆ. ಇದೇ ವೇಳೆ ಭಾರತ-ರಷ್ಯಾ ನಡುವಿನ 22ನೇ ವಾರ್ಷಿಕ ಸಭೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ಭೇಟಿ ಭಾರತ ಮತ್ತು ರಷ್ಯಾ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಗೊಳಿಸಲಿದೆ. ಈ ಭೇಟಿ ವೇಳೆ ಉಭಯ ರಾಷ್ಟಗಳು ರಕ್ಷಣೆ, ಅನಿಲ ಮತ್ತು ಇತರೆ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗುತ್ತದೆ ಎಂದು ತಿಳಿದುಬಂದಿದೆ.

ಪ್ರಧಾನಿ ಮೋದಿ ಇತ್ತೀಚೆಗೆ ಇಟಲಿಯಲ್ಲಿ ಆಯೋಜಿಸಿರುವ ಜಿ7 ಶೃಂಗಸಭೆಯಲ್ಲಿ ಪಾಲ್ಗೊಂಡಿದ್ದರು. ಇದರ ಬಳಿಕ ರಷ್ಯಾ ಪ್ರವಾಸ ಮಹತ್ವ ಪಡೆದುಕೊಂಡಿದೆ.

# ನಿಗದಿತ ಅವಧಿಯೊಳಗೆ ಭೂಮಾಪನ ಮುಗಿಸುವಂತೆ ಬಿಹಾರ ಸಿಎಂ ಮನವಿ



**ಪಾಟ್ನಾ:** ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಗೂ ಮುನ್ನ ಭೂಮಾಪನ ನಡೆಸಬೇಕು. ನಿಗದಿತ ಅವಧಿಗೆ ಕೆಲಸ ಮಾಡಿದರೆ ನಿಮಗೆ ಕೈಮುಗಿದು ನಮಸ್ಕರಿಸುತ್ತೇನೆ. ಬೇಕಾದರೆ ನಿಮ್ಮ ಕಾಲಿಗೆ ಬೀಳಬೇಕೆ ಎಂದು ಸರ್ಕಾರಿ ಅಧಿಕಾರಿಗಳಿಗೆ ಬಿಹಾರ ಸಿಎಂ ನಿತೀಶ್ ಕುಮಾರ್ ಕೇಳಿಕೊಂಡಿದ್ದಾರೆ.

ನಿತೀಶ್ ಕುಮಾರ್ ಅವರು ಗುರುವಾರ ವಿಶೇಷ ಸರ್ವೇಕ್ಷಣಾ ಸಹಾಯಕ ವಸಾಹತು ಅಧಿಕಾರಿ ಮತ್ತು ಇತರ ಸಂಬಂಧಿತ ಹುದ್ದೆಗಳಿಗೆ ಆಯ್ಕೆಯಾದ 9,888 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಅವರು, ಜುಲೈ 2025 ರೊಳಗೆ ಭೂ ಸಮೀಕ್ಷೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಕೆಲಸವನ್ನು ಚುನಾವಣೆಯ ಮೊದಲು ಮಾಡಬೇಕು ಎಂದು ನಾನು ಹೇಳಿದ್ದೇನೆ. 2025 ರ ಜುಲೈ ತಿಂಗಳಿಗೆ ಮೊದಲು ಈ ಎಲ್ಲಾ ಕೆಲಸಗಳನ್ನು ಮಾಡಿದರೆ ಅದು ಒಳ್ಳೆಯದು. ನಾನು ನಿಮಗೆ ಕೈ ಜೋಡಿಸಿ ನಮಸ್ಕರಿಸುತ್ತೇನೆ. ನಾನು ನಿಮ್ಮ ಪಾದಗಳನ್ನು ಮುಟ್ಟಬೇಕೆ ಎಂದು ಕೇಳಿದ ಪ್ರಸಂಗ ನಡೆಯಿತು.

9,888 ಹೆಚ್ಚಿನ ಅಧಿಕಾರಿಗಳನ್ನು ನೇಮಿಸಲಾಗಿದೆ. ಇಲಾಖೆಯು 2025 ರ ಜುಲೈ ಒಳಗೆ ರಾಜ್ಯಾದ್ಯಂತ ವಿಶೇಷ ಸಮೀಕ್ಷೆ ಮತ್ತು ಜಮೀನುಗಳ ಇತ್ಯರ್ಥವನ್ನು ಪೂರ್ಣಗೊಳಿಸಬೇಕು ಎಂದು ಸಿಎಂ ಸೂಚನೆ ನೀಡಿದ್ದಾರೆ.

ಮಹಾಘಟಬಂಧನ್ ಮೈತ್ರಿಯೊಂದಿಗೆ ಭಿನ್ನಾಭಿಪ್ರಾಯದ ಬಳಿಕ ನಿತೀಶ್ ಕುಮಾರ್ ಎನ್‌ಡಿಎ ಬಣಕ್ಕೆ ಸೇರಿದರು. ಇದು ಮಹಾಘಟಬಂಧನ್ ಸರ್ಕಾರದ ಪತನಕ್ಕೆ ಕಾರಣವಾಯಿತು. ನಂತರ ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ರಚನೆಯಾಯಿತು.

# ಇಂಡಿಯನ್ ಮುಜಾಹಿದಿನ್ ಉಗ್ರ ಅರೆಸ್ಟ್!

**ಮಧ್ಯ ಪ್ರದೇಶ:** ಭಯೋತ್ಪಾದನಾ ನಿಗ್ರಹ ದಳ ಇಂಡಿಯನ್ ಮುಜಾಹಿದ್ದೀನ್‌ನ ಪ್ರಮುಖ ಕಾರ್ಯಕರ್ತನನ್ನು ಖಾಂಡ್ವಾದ ಕಂಜರ್ ಮೊಹಲ್ಲಾದಲ್ಲಿ ಸೆರೆಹಿಡಿದಿದೆ. ಫೈಜಾನ್ ಶೇಖ್ ಹೆಸರಿನ ಭಯೋತ್ಪಾದಕ ಭದ್ರತಾ ಪಡೆಗಳನ್ನು ಗುರಿಯಾಗಿಸಿಕೊಂಡು ದಾಳಿಯನ್ನು ಯೋಜಿಸುತ್ತಿದ್ದನು. ಕಾರ್ಯಾಚರಣೆಯ ಸಮಯದಲ್ಲಿ ಎಟಿಎಸ್ ಇಂಡಿಯನ್ ಮುಜಾಹಿದ್ದೀನ್, ಐಸಿಸ್ ಮತ್ತು ಇತರ ಉಗ್ರಗಾಮಿ ಗುಂಪುಗಳೊಂದಿಗೆ ಸಂಬಂಧಿಸಿದ ಜಿಹಾದಿ ಬರಹಗಳನ್ನು ವಶಪಡಿಸಿಕೊಳ್ಳಲಾಗಿದೆ. ನಾಲ್ಕು ಮೊಬೈಲ್ ಫೋನ್‌ಗಳು, ಒಂದು ಪಿಸ್ತೂಲ್, ಐದು ಲೈವ್ ಕಾರ್ಟ್ರಿಡ್ಜ್ ಮತ್ತು ನಿಷೇಧಿತ ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ ಸದಸ್ಯತ್ವ ನಮೂನೆಗಳನ್ನು ವಶಪಡಿಸಿಕೊಳ್ಳಲಾಗಿದೆ.ಕಂದಹಾರ್ ಅಪಹರಣ ಘಟನೆ ಮತ್ತು ಮುಲ್ಲಾ ಓಮರ್ಗೆ ಸಂಬಂಧಿಸಿದ ವಿಷಯಕ್ಕೆ ಜೈಶ್-ಎ-ಮೊಹಮ್ಮದ್‌ನ ಮಸೂದ್ ಅಜರ್ನ ಭಾಷಣಗಳನ್ನು ಒಳಗೊಂಡಿರುವ ಪೋಸ್ಟ್‌ಗಳು ಮತ್ತು ಪಾಕಿಸ್ತಾನದಲ್ಲಿ ಜಿಹಾದಿ ತರಬೇತಿ ಶಿಬಿರಗಳ ವಿಡಿಯೊಗಳನ್ನು ಶೇಖ್ ಸಾಮಾಜಿಕ ಮಾಧ್ಯಮಗಳ ಮೂಲಕ ಪ್ರಚಾರ ಮಾಡುತ್ತಿದ್ದರು ಎಂದು ತನಿಖೆಗಳು ಬಹಿರಂಗಪಡಿಸಿವೆ.




# ಮೋದಿ ವಿರುದ್ಧ ದೂರು!

**ದೆಹಲಿ;** ಸರಿಯಾದ ಉತ್ತರ ನೀಡುವಂತೆ ಪ್ರಧಾನಿ ಮೋದಿ ವಿರುದ್ಧ ಪ್ರತಿಪಕ್ಷಗಳು ಸ್ಪೀಕರ್ ಓಂಪ್ರಕಾಶ್ ಬಿರ್ಲಾಗೆ ದೂರು ನೀಡುವ ಮೂಲಕ ಲೋಕಸಭೆಯಲ್ಲಿ ಆಡಳಿತಾರೂಢ ಬಿಜೆಪಿಗೆ ತಿರುಗೇಟು ನೀಡಿದೆ.

ಲೋಕಸಭೆಯಲ್ಲಿ ಆಡಳಿತಾರೂಢ ಎನ್‌ಡಿಎ ಹಾಗೂ ಇಂಡಿಯಾ ಮೈತ್ರಿಕೂಟದ ಪ್ರತಿಪಕ್ಷಗಳ ನಡುವೆ ಸರಿಯಾದ ಮಾಹಿತಿ ವಿಷಯದಲ್ಲಿ ಸಮರ ತಾರಕಕ್ಕೇರಿದೆ.

ಲೋಕಸಭೆಗೆ ತಪ್ಪಾದ ಮಾಹಿತಿ ನೀಡುತ್ತಿರುವ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಕಲಾಪದ ದಿಕ್ಕು ತಪ್ಪಿಸುತ್ತಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಡಳಿತಾರೂಢ ಬಿಜೆಪಿ ಸಂಸದರು ಸ್ಪೀಕರ್‌ಗೆ ದೂರು ನೀಡಿದ್ದಾರೆ.ಇದರ ಬೆನ್ನಲ್ಲೇ ಪ್ರತಿಪಕ್ಷಗಳು ಕೂಡ ಪ್ರಧಾನಿ ಮೋದಿ ವಿರುದ್ಧ ಸ್ಪೀಕರ್ ಗೆ ದೂರು ನೀಡಿದ್ದು, ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆ ವೇಳೆ ಮೋದಿ ಭಾಷಣದಲ್ಲಿ ಅಂಕಿ-ಅಂಶ ಆಧಾರಿತ ಸರಿಯಾದ ಮಾಹಿತಿ ನೀಡದೇ ಸದನದ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದೆ.

ಪ್ರಧಾನಿ ಮೋದಿ 10 ವರ್ಷಗಳಲ್ಲಿ 25 ಕೋಟಿ ಜನರು ಬಡತನ ರೇಖೆಗಿಂತ ಮೇಲೆ ಬಂದಿದ್ದು ಕೋಟ್ಯಾಧಿಪತಿಗಳಾಗಿದ್ದಾರೆ ಎಂದು ಹೇಳಿಕೆ ನೀಡಿದ್ದಾರೆ. ಆದರೆ ಇದಕ್ಕೆ ಸೂಕ್ತ ದಾಖಲೆಗಳನ್ನೇ ನೀಡಿಲ್ಲ ಎಂದು ಆರೋಪಿಸಿದೆ.

ಪ್ರತಿಪಕ್ಷಗಳು ಮೋದಿ ವಿರುದ್ಧ ಮಾತ್ರವಲ್ಲದೇ ಬಿಜೆಪಿಯ ಹಮಿರ್ಪುರ್ ಸಂಸದ ಹಾಗೂ ಮಾಜಿ ಸಚಿವ ಅನುರಾಗ್ ಠಾಕೂರ್ ವಿರುದ್ಧವೂ ದೂರು ನೀಡಿದೆ.

# ಬ್ರೆಜಿಲ್‌ನಲ್ಲಿ ಭೀಕರ ಪ್ರವಾಹ

**ಬ್ರೆಜಿಲ್:** ಕಳೆದ ಕೆಲ ದಿನಗಳಿಂದ ಬ್ರೆಜಿಲ್ ನಲ್ಲಿ ಭೀಕರ ಪ್ರವಾಹ ಉಂಟಾಗಿದೆ.ಪರಿಣಾಮ ಇದುವರೆಗೂ 180 ಮಂದಿ ಮೃತಪಟ್ಟಿದ್ದು 32 ಜನರು ಕಾಣೆಯಾಗಿದ್ದಾರೆ ಎಂದು ನಾಗರಿಕ ರಕ್ಷಣಾ ಸಂಸ್ಥೆ ತಿಳಿಸಿದೆ ಏಪ್ರಿಲ್ 29 ರಂದು ಪ್ರಾರಂಭವಾದ ಧಾರಾಕಾರ ಮಳೆ ಹಲವು ದಿನಗಳವರೆಗೆ ಮುಂದುವರಿದಿದೆ. ರಾಜ್ಯದಾದ್ಯಂತ ಹಲವು ನಗರಗಳು ನೀರಿನಿಂದ ಮುಳುಗಡೆಯಾಗಿದ್ದು ಜನ ಜೀವನ ಅಸ್ತವ್ಯಸ್ತವಾಗಿದೆ. ಜೂನ್ ಮಧ್ಯದಲ್ಲಿ ಪ್ರವಾಹ ಕಡಿಮೆಯಾಗಲು ಪ್ರಾರಂಭಿಸಿದ ನಂತರ ರಕ್ಷಣಾ ಕಾರ್ಯಗಳು ಪ್ರಾರಂಭವಾದವು ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ರಾಜ್ಯ ರಾಜಧಾನಿ ಪೋರ್ಟೊ ಅಲೆಗ್ರ ಸೇರಿದಂತೆ 478 ಪಟ್ಟಣಗಳಲ್ಲಿ ಸುಮಾರು 2,398,255 ನಿವಾಸಿಗಳ ಮೇಲೆ ತೀವ್ರ ಹವಾಮಾನ ಪರಿಣಾಮ ಬೀರಿದೆ ಎಂದು ಏಜೆನ್ಸಿ ವರದಿಯಲ್ಲಿ ತಿಳಿಸಿದೆ.

ಬ್ರೆಜಿಲ್ ಸರ್ಕಾರವು ರಿಯೊ ಗ್ರಾಂಡೆ ಡೊ ಸುಲ್ ಗೆ ಸಹಾಯ ಮಾಡಲು ಮತ್ತು ಪುನರ್ನಿರ್ಮಿಸಲು 85.7 ಬಿಲಿಯನ್ ರಿಯಲ್ ಗಳನ್ನು (ಸುಮಾರು 15.4 ಬಿಲಿಯನ್ ಡಾಲರ್) ನಿಗದಿಪಡಿಸಿದೆ ಎಂದು ಸಾಮಾಜಿಕ ಸಂವಹನ ಕಾರ್ಯದರ್ಶಿ ಪೌಲೊ ಪಿಮೆಂಟಾ ಹೇಳಿದ್ದಾರೆ. ಉರುಗ್ವೆ ಮತ್ತು ಅರ್ಜೆಂಟೀನಾದ ಗಡಿಯಲ್ಲಿರುವ ಕೃಷಿ ರಾಜ್ಯವಾದ ರಿಯೊ ಗ್ರಾಂಡೆ ಡೊ ಸುಲ್ ಈ ವಿಪತ್ತಿನಿಂದ ದಾಖಲೆಯ ಆರ್ಥಿಕ ನಷ್ಟವನ್ನು ಅನುಭವಿಸುತ್ತಿದೆ.



# ಚೀನಕ್ಕೆ ಭಾರತ ಎಚ್ಚರಿಕೆ



**ಆಸ್ತಾನಾ:** ವಾಸ್ತವಿಕ ಗಡಿ ನಿಯಂತ್ರಣ ರೇಖೆ (ಎಲ್‌ಎಸಿ) ಗೌರವಿಸಿ ಮತ್ತು ಗಡಿ ಅತಿಕ್ರಮಣ ಮಾಡುವುದು ಬೇಡ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಚೀನಕ್ಕೆ ಸ್ಪಷ್ಟ ಮಾತುಗಳಲ್ಲಿ ತಿಳಿಸಿದ್ದಾರೆ. ಕಜಕಿಸ್ಥಾನದ ಆಸ್ತಾನದಲ್ಲಿ ಶಾಂಘೈ ಸಹಕಾರ ಒಕ್ಕೂಟದ ಸಭೆಯ ನಡುವೆ ಚೀನ ವಿದೇಶಾಂಗ ಸಚಿವ ವಾಂಗ್ ಇ ಜತೆಗೆ ನಡೆಸಿದ ಮಾತುಕತೆ ವೇಳೆ ಈ ಅಂಶ ಪ್ರಸ್ತಾವಿಸಲಾಗಿದೆ. ಪೂರ್ವ ಲಡಾಖ್ ಗಡಿತಂಟೆಯನ್ನು ಬಗೆಹರಿಸಲು ಮಾತುಕತೆಯೇ ಪರಿಹಾರವೆಂದು ಇಬ್ಬರು ನಾಯಕರು ಸಹಮತಕ್ಕೆ ಬಂದಿದ್ದಾರೆ. ಆದರೆ ಎಲ್‌ಎಸಿ ಗೌರವಿಸಬೇಕು ಎಂದು ಸಚಿವ ಜೈಶಂಕರ್ ಹೇಳಿದ್ದಾರೆ. ಪರಸ್ಪರ ಗೌರವ, ಪರಸ್ಪರ ಸೂಕ್ಷ್ಮತೆ, ಹಿತಾಸಕ್ತಿ ಯನ್ನು ಅರಿಯುವುದರಿಂದ ಭಾರತ ಹಾಗೂ ಚೀನ ನಡುವಿನ ದ್ವಿಪಕ್ಷೀಯ ಸಂಬಂಧಗಳು ಸುಧಾರಿಸುತ್ತವೆ ಎಂದು ಟ್ವೀಟ್ ಮಾಡಿದ್ದಾರೆ. ಉಭಯ ಸಚಿ ವರ ಬಗ್ಗೆ ವಿದೇಶಾಂಗ ಸಚಿವಾಲಯ ಹೇಳಿಕೆ ಬಿಡುಗಡೆ ಮಾಡಿದ್ದು, ಇಬ್ಬರು ನಾಯಕರು ದ್ವಿಪಕ್ಷೀಯ ಬಾಂಧವ್ಯ ವೃದ್ಧಿಸುವ ಬಗ್ಗೆ ಮಾತುಕತೆ ನಡೆಸಿದ್ದಾರೆ ಎಂದಿದೆ. ಪೂರ್ವ ಲಡಾಖ್ನಲ್ಲಿ ಚೀನ ಸೇನೆ ದಾಳಿ ನಡೆಸಿದ ಬಳಿಕ ಭಾರತ ಮತ್ತು ಚೀನದ ನಡುವಿನ ಸಂಬಂಧ ಹದಗೆಟ್ಟಿತ್ತು.

# ತಲೆಗೆ ಪೆನ್ ಚುಚ್ಚಿ 5 ವರ್ಷದ ಮಗು ಸಾವು



**ಹೈದರಾಬಾದ್:** ತಲೆಗೆ ಪೆನ್ ಚುಚ್ಚಿ 5 ವರ್ಷದ ಮಗು ಸಾವನ್ನಪ್ಪಿರುವ ಘಟನೆ ಬೆಳಕಿಗೆ ಬಂದಿದೆ. ತೆಲಂಗಾಣದ ಭದ್ರಾದ್ರಿ ಕೊತ್ತಗುಡ್ಡಂ ಜಿಲ್ಲೆಯ ಭದ್ರಾಚಲಂನಲ್ಲಿ ಈ ದುರಂತ ಸಂಭವಿಸಿದೆ. 5 ವರ್ಷದ ರಿಯಂಶಿಕಾ ಎಂಬ ಯುಕೆಜಿ ವಿದ್ಯಾರ್ಥಿನಿ ಶಾಲೆಯಿಂದ ಮನೆಗೆ ಬಂದ ಬಳಿಕ ಹೋಂ ವರ್ಕ್ ಮಾಡಲೆಂದು ಮಂಚದ ಮೇಲೆ ಕುಳಿತಿದ್ದಳು. ಹೋಂ ವರ್ಕ್ ಮಾಡುತ್ತಿದ್ದ ರಿಯಂಶಿಕಾ ಏಕಾಏಕಿ ಮಂಚದಿಂದ ಕೆಳಗೆ ಬಿದ್ದಿದ್ದಾಳೆ. ಕೈಯಲ್ಲಿದ್ದ ಪೆನ್ ತಲೆಗೆ ಚುಚ್ಚಿ ಗಂಭೀರವಾಗಿ ಗಾಯಗೊಂಡಿದ್ದಾಳೆ. ತಕ್ಷಣ ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಚಿಕಿತ್ಸೆ ಬಳಿಕ ಸರ್ಜರಿಯನ್ನೂ ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯದೇ ಬಾಲಕಿ ಸಾವನ್ನಪ್ಪಿದ್ದಾಳೆ.

# ಗಾಜಾ ಪಟ್ಟಿಯಲ್ಲಿ 38,000 ಶವಗಳ ರಾಶಿ!



**ಇಸ್ರೇಲ್:** ಇಸ್ರೇಲ್ ಹಮಾಸ್ ನಡುವೆ ನಡೆಯುತ್ತಿರುವ ಭೀಕರ ಕದನ ಈಗಾಗಲೇ ರಾಶಿ ರಾಶಿ ಶವಗಳು ಬೀಳುವಂತೆ ಮಾಡಿದೆ. ಹೀಗಿದ್ದರೂ ಇಬ್ಬರು ಸೈಲೆಂಟ್ ಆಗದೆ ಬಡಿದಾಡುತ್ತಾ ಇದ್ದಾರೆ. ಇದರ ಪರಿಣಾಮ ಈಗ ಗಾಜಾ ಪಟ್ಟಿ ಸ್ಮಶಾನ ಆಗಿದ್ದು, ಎಲ್ಲೆಲ್ಲೂ ಬರೀ ಶವಗಳ ರಾಶಿ ಕಾಣುತ್ತಿದೆ. ಇಸ್ರೇಲ್ ಯುದ್ಧ ನಿಲ್ಲಿಸಲು ರೆಡಿ ಇಲ್ಲ,ಹಮಾಸ್ ರಾಜಿ ಮಾಡಿಕೊಳ್ಳಲು ಮುಂದೆ ಬರ್ತಿಲ್ಲ ಹೀಗೆ ಇಬ್ಬರ ನಡುವೆ ದೊಡ್ಡ ತಿಕ್ಕಾಟ ನಡೆಯುತ್ತಿದೆ. ಈ ತಿಕ್ಕಾಟದ ಪರಿಣಾಮ ಇದೀಗ ಪರದಾಡುವ ಪರಿಸ್ಥಿತಿ ಬಂದಿದೆ. ಅದು ಏನು ಅಂದ್ರೆ, ಗಾಜಾ ಪಟ್ಟಿ ನಗರದಲ್ಲಿ ಯುದ್ಧ ಶುರುವಾದ ನಂತರ ಸುಮಾರು 38 ಸಾವಿರಕ್ಕೂ ಹೆಚ್ಚು ಜನರು ಜೀವ ಬಿಟ್ಟಿದ್ದಾರಂತೆ. ಅಲ್ಲದೆ ಲಕ್ಷಾಂತರ ಜನರು ಬೀದಿ ಪಾಲಾಗಿದ್ದು, ಪರದಾಡುತ್ತಿದ್ದಾರೆ. ಪರಿಸ್ಥಿತಿ ಹೀಗೆ, ಕೈಮೀರಿ ಹೋಗಿರುವ ಸಮಯದಲ್ಲಿ ಯುದ್ಧ ನಿಲ್ಲಿಸಲು ಒತ್ತಡ ಕೇಳಿಬಂದಿದೆ.

ಕಳೆದ 8 ತಿಂಗಳಿಂದ ಇಸ್ರೇಲ್ ಸೇನೆ ಹಮಾಸ್ ನಡುವೆ ನಡೆಯುತ್ತಿರುವ ಯುದ್ಧ ದೊಡ್ಡ ಅವಾಂತರ ಸೃಷ್ಟಿ ಮಾಡಿದೆ. ಈಗಾಗಲೇ ಸಾವಿರಾರು ಜನ ಜೀವ ಕಳೆದುಕೊಂಡು ಪರಿಸ್ಥಿತಿ ಮತ್ತಷ್ಟು ಭೀಕರವಾಗುತ್ತಿದೆ. ಹೀಗಿದ್ದರೂ ಇಸ್ರೇಲ್ ಮಾತ್ರ ಸುಮ್ಮನೆ ಕೂರುತ್ತಿಲ್ಲ. ಅದರ ಬದಲಾಗಿ ಗಾಜಾ ವಿರುದ್ಧ ಯುದ್ಧ ನಿಲ್ಲಿಸಿ ಮತ್ತೊಂದು ಯುದ್ಧ ಆರಂಭ ಮಾಡಲು ಸಿದ್ಧತೆ ನಡೆಸಿದೆ ಎಂಬ ಆರೋಪ ಕೇಳಿಬಂದಿದೆ. ಇದಕ್ಕೆ ಪೂರಕವಾಗಿ ಈಗ ಇಸ್ರೇಲ್ ನಾಯಕರು ಹೇಳಿಕೆ ನೀಡುತ್ತಿರುವುದು ಸಹಜವಾಗಿ ಸಂಚಲನ ಸೃಷ್ಟಿ ಮಾಡಿದೆ.

# ಈ ಶೈಕ್ಷಣಿಕ ವರ್ಷದಿಂದಲೇ 3, 6ನೇ ತರಗತಿಗೆ ಆಕರ್ಷಕ ಹೊಸ ಪಠ್ಯ ಪುಸ್ತಕ

**ನವದೆಹಲಿ:** 2024-2025ರ ಶೈಕ್ಷಣಿಕ ವರ್ಷದಿಂದ ಮೂರು ಮತ್ತು ಆರನೇ ತರಗತಿಗಳಲ್ಲಿ ಹೊಸ ಮತ್ತು ಆಕರ್ಷಕ ಪಠ್ಯಪುಸ್ತಕಗಳನ್ನು ಪರಿಚಯಿಸಲಾಗುವುದು.

ಪಠ್ಯಪುಸ್ತಕ ಅಭಿವೃದ್ಧಿ ಕಾರ್ಯ ಅಂತಿಮ ಹಂತದಲ್ಲಿದ್ದು, 3 ಮತ್ತು 6ನೇ ತರಗತಿಯ ಒಂಬತ್ತು ಪಠ್ಯಪುಸ್ತಕಗಳು ಈಗಾಗಲೇ ಲಭ್ಯವಿವೆ.

ಉಳಿದ ಎಂಟು ಅತಿ ಶೀಘ್ರದಲ್ಲಿ ಲಭ್ಯವಾಗಲಿದೆ ಎಂದು ಶಿಕ್ಷಣ ಸಚಿವಾಲಯ ಮಾಹಿತಿ ನೀಡಿದೆ.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ(ಎನ್ಸಿಇಆರ್ಟಿ) ಪಠ್ಯಪುಸ್ತಕ ರಚನಾ ಪ್ರಕ್ರಿಯೆ ಪ್ರಗತಿ ಪರಿಶೀಲಿಸಿದ್ದಾರೆ.

NCERT ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಎನ್ಸಿಇಆರ್ಟಿ ನಿರ್ದೇಶಕರು ಮತ್ತು ಕೇಂದ್ರೀಯ ಮಂಡಳಿಯ ಅಧ್ಯಕ್ಷರೊಂದಿಗೆ ಸಚಿವರು ಸಭೆ ನಡೆಸಿ ವಿವರವಾಗಿ ಚರ್ಚಿಸಿದ್ದಾರೆ.



2020 ರ ರಾಷ್ಟ್ರೀಯ ಶಿಕ್ಷಣ ನೀತಿಯು ಉತ್ತಮ ಗುಣಮಟ್ಟದ ಪಠ್ಯಪುಸ್ತಕಗಳನ್ನು ಒದಗಿಸುವ ಗುರಿ ಹೊಂದಿದೆ. ಉತ್ತಮ ಕಲಿಕೆಯ ಫಲಿತಾಂಶಗಳಿಗಾಗಿ ಕಲಿಕೆಯನ್ನು ಸಂತೋಷದಾಯಕ ಮತ್ತು ಒತ್ತಡ-ಮುಕ್ತವಾಗಿಸುವ ಉದ್ದೇಶವನ್ನೂ ಕೂಡ ಹೊಂದಿದೆ. NCERT ಹೊಸ ಪಠ್ಯಪುಸ್ತಕಗಳನ್ನು ಒಂದರಿಂದ ಹನ್ನೆರಡನೆಯ ತರಗತಿಗಳಿಗೆ ಸಿದ್ಧಪಡಿಸಲಾಗುತ್ತಿದೆ.

# ನಾಲ್ಕೂವರೆ ಲಕ್ಷ ಗೂಬೆಗಳನ್ನು ಕೊಲ್ಲಲು ಆದೇಶ ನೀಡಿದ ಸರ್ಕಾರ



**ನವದೆಹಲಿ:** ಇತ್ತೀಚೆಗೆ ಕೀನ್ಯಾ ತನ್ನ ದೇಶದಲ್ಲಿ ಸುಮಾರು 10 ಲಕ್ಷ ಭಾರತೀಯ ಮೂಲದ ಕಾಗೆಗಳನ್ನುಕೊಲ್ಲುವುದಾಗಿ ಘೋಷಿಸಿತ್ತು. ಅದರ ಬೆನ್ನಲ್ಲೇ ಇದೀಗ ಗೂಬೆಗಳನ್ನು ನಿರ್ನಾಮ ಮಾಡಲು ಅಮೆರಿಕ ಕರಡು ಸಿದ್ಧಪಡಿಸಿದೆ.

ಸುಮಾರು 5 ಲಕ್ಷ 'ಬಾರ್ಡ್' ಗೂಬೆಗಳನ್ನು ಕೊಲ್ಲಲು ಅಮೆರಿಕ ಪ್ಲಾನ್ ಮಾಡಿದ್ದು, ಬಾರ್ಡ್‌ರ್ ಗೂಬೆಗಳು ಅಮೆರಿಕದ 'ಸ್ಪಾಟೆಡ್ ಗೂಬೆ' ಜಾತಿಗೆ ಬೆದರಿಕೆಯಾಗಿ ಪರಿಣಮಿಸಿವೆ ಎಂದು ಹೇಳಲಾಗುತ್ತಿದೆ, 'ಮಚ್ಚೆಯುಳ್ಳ ಗೂಬೆಗಳು' ವಿನಾಶದ ಅಂಚಿನಲ್ಲಿವೆ.

ಇಂತಹ ಪರಿಸ್ಥಿತಿಯಲ್ಲಿ ಪಶ್ಚಿಮ ಕರಾವಳಿಯ ದಟ್ಟ ಅರಣ್ಯದಲ್ಲಿ ವೃತ್ತಿಪರ ಶೂಟರ್ಗಳನ್ನು ನಿಯೋಜಿಸಿ ಬಾರ್ಡ್ ಗೂಬೆಗಳನ್ನು ಕೊಲ್ಲಲು ವನ್ಯಜೀವಿ ಅಧಿಕಾರಿಗಳು ನಿರ್ಧರಿಸಿದ್ದಾರೆ.

ಈ ಯೋಜನೆಯಡಿ, ಸುಮಾರು 5 ಲಕ್ಷ 'ಬಾರ್ಡ್' ಗೂಬೆಗಳನ್ನು ಕೊಲ್ಲುವ ಗುರಿಯನ್ನು ಹೊಂದಲಾಗಿದ್ದು, 'ಬ್ಯಾರೆಡ್' ಗೂಬೆಗಳು ಗಖನಲ್ಲಿನ 'ಮಚ್ಚೆಯುಳ್ಳ' ಗೂಬೆ ಜಾತಿಗಳಿಗೆ ಕಂಟಕವಾಗಿ ಪರಿಣಮಿಸಿವೆ. ಯುಎಸ್ ವನ್ಯಜೀವಿ ಇಲಾಖೆಯು ಒರೆಗಾನ್, ವಾಷಿಂಗ್ಟನ್ ಮತ್ತು ಕ್ಯಾಲಿಫೋರ್ನಿಯಾದಲ್ಲಿ ಕ್ಷೀಣಿಸುತ್ತಿರುವ ಮಚ್ಚೆಯುಳ್ಳ ಗೂಬೆ ಜನಸಂಖ್ಯೆಯನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದೆ. ಹೀಗಾಗಿ ಈ ಯೋಜನೆಯಡಿ ಮುಂದಿನ ಮೂರು ದಶಕಗಳಲ್ಲಿ 4.50 ಲಕ್ಷ 'ಬಾರ್ಡ್' ಗೂಬೆಗಳಿಗೆ ಗುಂಡು ಹಾರಿಸಿ ಕೊಲ್ಲಲು ನಿರ್ಧರಿಸಲಾಗಿದೆ.

'ಬಾರ್ಡ್' ಗೂಬೆಗಳು ಮೂಲತಃ ಪೂರ್ವ ಯುನೈಟೆಡ್ ಸ್ಟೇಟ್ಸ್ ಮೂಲದ್ದು. ಆದರೆ ಈಗ ಯುನೈಟೆಡ್ ಸ್ಟೇಟ್ಸ್ನ ಪಶ್ಚಿಮ ಕರಾವಳಿಯನ್ನು ಆಕ್ರಮಿಸಿವೆ. 'ಬಾರ್ಡ್' ಗೂಬೆಗಳು ಹೆಚ್ಚಾಗಿ ಮಚ್ಚೆಯುಳ್ಳ ಗೂಬೆಗಳ ಸಂಪನ್ಮೂಲಗಳನ್ನು ಸ್ವಾಧೀನಪಡಿಸಿಕೊಂಡಿವೆ ಮತ್ತು ಸಣ್ಣ ಗೂಬೆಗಳು ಅವುಗಳ ವಿರುದ್ಧ ಹೋರಾಡಲು ಸಾಧ್ಯವಾಗುವುದಿಲ್ಲ. ಬಾರ್ಡ್ ಗೂಬೆಗಳ ಮೊಟ್ಟೆಗಳು ತುಂಬಾ ದೊಡ್ಡದಾಗಿದ್ದು, ಅವು ಸಣ್ಣ ಸ್ಥಳಗಳಲ್ಲಿಯೂ ಸಹ ಬದುಕಬಲ್ಲವು ಎಂದು ಅಧಿಕಾರಿಗಳು ಹೇಳಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಅದ್ದೂರಿಯಾಗಿ ನಡೆಯಿತು 'ಬಿಲ್ಲಾರಿ' ಸಿನಿಮಾದ ಮುಹೂರ್ತ



ಬಹುತೇಕ ಹೊಸಬರೇ ಸೇರಿಕೊಂಡು ಸಿದ್ಧಪಡಿಸುತ್ತಿರುವ 'ಬಿಲ್ಲಾರಿ' ಚಿತ್ರದ ಮುಹೂರ್ತ ಸಮಾರಂಭವು ಶ್ರೀ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ನಡೆಯಿತು. ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿ ತಂಡಕ್ಕೆ ಶುಭ ಹಾರೈಸಿದರು. ನಿರ್ಮಾಪಕ ತಾಯಿ ಲಕ್ಷ್ಮೀಧನಪಾಲ್ ಕ್ಯಾಮೆರಾ ಆನ್ ಮಾಡಿದರು. ಎವಿಕೆ ಪ್ರೊಡಕ್ಷನ್ ಅಡಿಯಲ್ಲಿ ರಿಶ್ವಿಕ್ ಶೆಟ್ಟಿ ಕತೆ ಬರೆದು ನಿರ್ಮಾಣ ಮಾಡುವುದರ ಜೊತೆಗೆ ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಗೋಕಾಕ್ ಮೂಲದ ಪಿ.ಎಲ್.ಭರಮಣ್ಣ ಚಿತ್ರಕತೆ-ನಿರ್ದೇಶನದ ಜವಬ್ದಾರಿಯನ್ನು ಹೊತ್ತುಕೊಳ್ಳುತ್ತಿದ್ದಾರೆ. ಶಿಲ್ಪಾ ಗೌಡ ಸಹ ನಿರ್ಮಾಪಕಿಯಾಗಿ ಗುರುತಿಸಿಕೊಂಡಿದ್ದಾರೆ.

ನಿರ್ದೇಶಕ ಭರಮಣ್ಣ ಹೇಳುವಂತೆ ಇದೊಂದು ಕಾಲ್ಪನಿಕ ಅಂಶಗಳನ್ನು ಒಳಗೊಂಡಿದೆ. ನಿಘಂಟುದಲ್ಲಿ ಬಿಲ್ಲಾರಿಗೆ ಬೇರೆ ಅರ್ಥ ಇರಲಿದೆ. ಆದರೆ ನಮ್ಮ ಸಿನಿಮಾದಲ್ಲಿ ಪಾತ್ರದ ಹೆಸರು ಶೀರ್ಷಿಕೆಯಾಗಿದೆ. ಬಿಲ್ಸ್ ಬುಡಕಟ್ಟು ಜನಾಂಗದ ರಾಜನ ಐತಿಹಾಸಿಕ ಸಸ್ಪೆನ್ಸ್, ಥ್ರಿಲ್ಲರ್ ಕಥೆಯಾಗಿದೆ. ಭಾರತದಲ್ಲಿ ಇವರುಗಳು ಹನ್ನೊಂದು ಲಕ್ಷ ಜನ ಸಂಖ್ಯೆ ಇರಲಿದ್ದು, ಹೆಚ್ಚಿನ ಭಾಗ ಗುಜರಾತ್, ರಾಜಸ್ತಾನದಲ್ಲಿ ವಾಸವಾಗಿದ್ದಾರೆ. ಬೆಂಗಳೂರು, ಅರಸಿಕೆರೆ, ಹಾಸನ, ಅಣ್ಣಿಗೇರಿ, ಗಜೇಂದ್ರ ಗಡ, ಯಾಣ ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲು ಯೋಜನೆ ಹಾಕಲಾಗಿದೆ. ಕ್ಲೈಮಾಕ್ಸ್‌ನಲ್ಲಿ ಸಿದ್ದಾಂತದೊಂದಿಗೆ ಭಾಗ-2 ಬರಲಿದೆ ಎಂಬುದಾಗಿ ತೋರಿಸಲಾಗುವುದು. ಇನ್ನು ಹೆಚ್ಚಿನ ವಿವರ ನೀಡಿದರೆ, ಸಿನಿಮಾದ ಹೂರಣ ಬಿಟ್ಟುಕೊಟ್ಟಂತೆ ಆಗುತ್ತದೆಂದು ಕುತೂಹಲ ಕಾಯ್ದಿರಿಸಿದರು.

ರಾಜ ಮತ್ತು ಅಧಿಕಾರಿಯಾಗಿ ರಿಶ್ವಿಕ್ ಶೆಟ್ಟಿ ನಾಯಕ. ಭಟ್ಟರ ಮಗಳಾಗಿ ಮೈಸೂರು ಕಡೆಯವರಾದ ಚೈತ್ರಾ, ಲೋಕನಾಥ್ ನಾಯಕಿ. ಉಳಿದಂತೆ ನಾಗೇಂದ್ರಅರಸ್, ಪ್ರಕಾಶ್ ತುಮ್ಮಿನಾಡು, ಎಂ.ಕೆ.ಮಠ, ಕೆಂಪೇಗೌಡ, ಬಲರಾಮ್ ಪಂಚಾಲ್, ಮಹಾಭಾರತದ ಚಂದ್ರಪ್ರಭಾ, 'ಕಾಂತಾರ' ಖ್ಯಾತಿಯ ನವೀನ್ ಬೊಂದೆಲ್ ಸಂಭಾಷಣೆ ಹಾಗೂ ನಟನೆ. ಇವರೊಂದಿಗೆ ಹಿರಿಯ ಕಲಾವಿದರು ನಟಿಸುತ್ತಿದ್ದಾರೆ.

ನಾಲ್ಕು ಹಾಡುಗಳ ಪೈಕಿ, ಒಂದು ಗೀತೆಗೆ ಪ್ರಮೋದ್ ಮರವಂತೆ ಹುರುಪು ಹೊರಪು ತುಂಬುವಂತ ಪ್ರೇಮಗೀತೆಗೆ ಪದಗಳನ್ನು ಪೋಣಿಸಿದ್ದಾರೆ. ಸಂಗೀತ ಸುಭಾಷ್, ಛಾಯಾಗ್ರಹಣ ಅಗಸ್ತ್ಯ.ಯು.ಗೌಡ, ಕಲೆ ತಿರುಪತಿ ಅವರದಾಗಿದ್ದು, ತಂತ್ರಜ್ಞರ ಆಯ್ಕೆ ಬಾಕಿ ಇದೆ.



# ಪ್ರಜ್ವಲ್ ದೇವರಾಜ್ ಹುಟ್ಟುಹಬ್ಬಕ್ಕೆ 'ಕರಾವಳಿ'ಯಿಂದ ಸಿಕ್ತು ಭರ್ಜರಿ ಗಿಫ್ಟ್



'ಕರಾವಳಿ' ಸ್ಯಾಂಡಲ್‌ವುಡ್‌ನಲ್ಲಿ ಸಖತ್ ಸದ್ದು ಮಾಡುತ್ತಿರುವ ಮತ್ತು ಭಾರೀ ನಿರೀಕ್ಷೆ ಮೂಡಿಸಿರುವ ಸಿನಿಮಾ. ಡೈನಾಮಿಕ್ ಪ್ರಿನ್ಸ್ ಪ್ರಜ್ವಲ್ ದೇವರಾಜ್ ನಟನೆಯ 'ಕರಾವಳಿ' ನಿರ್ದೇಶಕ ಗುರುದತ್ ಗಾಣಿಗ ಸಾರಥ್ಯದಲ್ಲಿ ಮೂಡಿ ಬರುತ್ತದೆ. ಕರಾವಳಿ ಈಗಾಗಲೇ ಫಸ್ಟ್ ಲುಕ್ ಮತ್ತು ಪೋಸ್ಟರ್ ಮೂಲಕ ಬಾರಿ ಕುತೂಹಲ ಮೂಡಿಸಿದೆ. ಮತ್ತೊಂದು ಭರ್ಜರಿ ಪೋಸ್ಟ್ ಅನಾವರಣವಾಗಿದೆ.

ಪ್ರಜ್ವಲ್ ದೇವರಾಜ್ ಹುಟ್ಟುಹಬ್ಬದ ಪ್ರಯುಕ್ತ ಬಂದಿರುವ ಈ ಪೋಸ್ಟರ್ ಕರಾವಳಿ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ. ಸಿನಿಮಾದಿಂದ ಈಗಾಗಲೇ ರಿಲೀಸ್ ಆಗಿರುವ ಪ್ರಜ್ವಲ್ ಅವರ ಎರಡು ಲುಕ್ ವೈರಲ್ ಆಗಿದೆ. ಇದೀಗ ಜನ್ಮದಿನದ ಪ್ರಯುಕ್ತ ಬಿಡುಗಡೆಯಾಗಿರುವ ಮತ್ತೊಂದು ಲುಕ್ ಗಮನ ಸೆಳೆಯುತ್ತದೆ.

ವಿಭಿನ್ನ ಅವತಾರಗಳಲ್ಲಿ ಕಾಣಿಸಿಕೊಂಡಿರುವ ಪ್ರಜ್ವಲ್ ಈ ಸಿನಿಮಾದಲ್ಲಿ ಯಾವ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ ಎನ್ನುವ ಕುತೂಹಲ ಮೂಡಿಸಿದೆ. ಯಕ್ಷಗಾನ ಕಂಬಳ, ಮಹಿಷಾಸುರ ಹೀಗೆ ವೆರೈಟಿ ಗೆಟಪ್‌ನಲ್ಲಿ ಪ್ರಜ್ವಲ್ ಕಾಣಿಸಿಕೊಂಡಿದ್ದಾರೆ. ಹಾಗಾಗಿ ಈ ಸಿನಿಮಾದಲ್ಲಿ ಪ್ರಜ್ವಲ್ ಯಕ್ಷಗಾನ ಕಲಾವಿದನಾ ಅಥವಾ ಕಂಬಳ ಕೊಡಿಸುವವನಾ? ಡೈನಮಿಕ್ ಪ್ರಿನ್ಸ್ ಪಾತ್ರ ಯಾವುದು ಎನ್ನುವ ಕುತೂಹಲ ಹೆಚ್ಚಾಗಿದೆ. ಪ್ರಜ್ವಲ್ ಅವರ ವೆರೈಟಿ ಗೆಟಪ್‌ನ ಪೋಸ್ಟರ್‌ಗಳನ್ನು ನೋಡುತ್ತಿದ್ದರೆ ತ್ರಿ ಪಾತ್ರದಲ್ಲಿ ನಟಿಸುತ್ತಿದ್ದಾರಾ ಎನ್ನುವ ಅನುಮಾನ ಕೂಡ ಮೂಡಿಸುವಂತಿದೆ. ಬರ್ತಡೇ ಪ್ರಯುಕ್ತ ರಿಲೀಸ್ ಆಗಿರುವ ಪೋಸ್ಟರ್‌ನಲ್ಲಿ ಪ್ರಜ್ವಲ್ ಕೋಣಗಳ ಮಧ್ಯೆ ಒಬ್ಬಂಟಿಯಾಗಿ ಕೊಟ್ಟಿಗೆಯಲ್ಲಿ ಕುಳಿತಿದ್ದಾರೆ. ಗಂಭೀರ ನೋಟ ಬೀರುತ್ತಾ ಕುಳಿತಿರುವ ಪ್ರಜ್ವಲ್ ಅವರ ಸಿಂಪಲ್ ವ್ಯಕ್ತಿತ್ವದ ಲುಕ್ ಆಕರ್ಷಕವಾಗಿದೆ.

'ಕರಾವಳಿ' ಈಗಾಗಲೇ 60ರಷ್ಟು ಚಿತ್ರೀಕರಣ ಮುಗಿಸಿದೆ. ಸಿನಿಮಾದಲ್ಲಿ ಪ್ರಜ್ವಲ್‌ಗೆ ನಾಯಕಿಯಾಗಿ ನಟಿ ಸಂಪದಾ ಕಾಣಿಸಿಕೊಂಡಿದ್ದಾರೆ. ಬಹುತೇಕ ಸಿನಿಮಾ ಕರಾವಳಿಯ ಸುತ್ತಮುತ್ತನೇ ಚಿತ್ರೀಕರಣಗೊಂಡಿದೆ. ಈ ಸಿನಿಮಾಗೆ ಗುರುದತ್ ಗಾಣಿಗ ನಿರ್ದೇಶನದ ಜೊತೆಗೆ ಅವರದೇ ಗಾಣಿಗ ಫಿಲ್ಮ್ಸ್ ಹಾಗೂ ವಿಕೆ ಫಿಲ್ಮಂ ಅಸೋಸಿಯೇಷನ್‌ನಲ್ಲಿ ನಿರ್ಮಾಣವಾಗುತ್ತಿದೆ. ಕರಾವಳಿ ಮನುಷ್ಯ ಹಾಗೂ ಪ್ರಾಣಿ ಮಧ್ಯೆ ನಡೆಯುವ ಸಂಘರ್ಷದ ಕಥೆ. ಪಕ್ಕಾ ಹಳ್ಳಿ ಬ್ಯಾಕ್ ಡ್ರಾಪ್‌ನಲ್ಲಿ ಸಿನಿಮಾ ಮೂಡಿ ಬರಲಿದೆ. ಈ ಚಿತ್ರಕ್ಕೆ ಸಚಿನ್ ಬಸ್ರೂರು ಸಂಗೀತ ಸಂಯೋಜನೆ ಮಾಡಿದ್ದಾರೆ.

# ಶೀಘ್ರದಲ್ಲೇ 'ಬಿಗ್ ಬಾಸ್' ಶೋ ಶುರು- ಸ್ಪರ್ಧಿಗಳ ಲಿಸ್ಟ್ ಔಟ್



ಕಿರುತೆರೆಯ ಅತೀ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಮತ್ತೆ ಶುರುವಾಗ್ತಿದೆ. ಶೀಘ್ರದಲ್ಲೇ ತೆಲುಗಿನ ಬಿಗ್ ಬಾಸ್ ಸೀಸನ್ 8 ಶುರುವಾಗಲಿದೆ. ಈ ಮೂಲಕ ಫ್ಯಾನ್ಸ್‌ಗೆ ಸಿಹಿಸುದ್ದಿ ಸಿಕ್ಕಿದೆ. ಅದಷ್ಟೇ ಅಲ್ಲ, ದೊಡ್ಮನೆ ಆಟಕ್ಕೆ ಬರಲಿರುವ ಸ್ಪರ್ಧಿಗಳು ಕೂಡ ಫೈನಲ್ ಆಗಿದ್ದಾರೆ.

ಕನ್ನಡದ ಬಿಗ್ ಬಾಸ್ ಮತ್ತು ತೆಲುಗಿನ ಬಿಗ್ ಬಾಸ್‌ಗಾಗಿ ಫ್ಯಾನ್ಸ್ ಕಾತರದಿಂದ ಕಾಯುತ್ತಾರೆ. ಬಿಗ್ ಬಾಸ್‌ಗೆ ದೊಡ್ಡಮಟ್ಟದ ಫ್ಯಾನ್ ಬೇಸ್ ಕೂಡ ಇದೆ. ಅಂದಹಾಗೆ, ಇದೇ ಆಗಸ್ಟ್ 4ರಂದು ತೆಲುಗಿನ ಬಿಗ್ ಬಾಸ್ ಪ್ರಸಾರವಾಗಿದೆ. ಇನ್ನೂ ಸ್ಪರ್ಧಿಗಳ ವಿಚಾರಕ್ಕೆ ಬಂದರೆ, ಕುಮಾರಿ ಆಂಟಿ ಎಂಬುವರು ರಸ್ತೆ ಬದಿ ಫುಡ್ ಟ್ರಕ್ ಇಟ್ಟುಕೊಂಡಿದ್ದಾರೆ. ಇವರು ಬಿಗ್ ಬಾಸ್‌ಗೆ ಬರಲಿದ್ದಾರೆ ಎನ್ನಲಾಗಿದೆ.

ರೇವ್ ಪಾರ್ಟಿ ಪ್ರಕರಣದ ಆರೋಪಿ ಹೇಮಾ, ಅಮೃತಾ ಪ್ರಣಯ್, ಯೂಟ್ಯೂಬರ್ ನೇತ್ರಾ ಮತ್ತು ವಂಶಿ ಸೇರಿದಂತೆ ಅನೇಕರ ಹೆಸರುಗಳು ವೈರಲ್ ಆಗಿದೆ. ಅಧಿಕೃತ ಮಾಹಿತಿಗಾಗಿ ಕಾಯಬೇಕಿದೆ.

ಅಂದಹಾಗೆ, ಈ ಸೀಸನ್ ಕೂಡ ಅಕ್ಕಿನೇನಿ ನಾಗಾರ್ಜುನ ಅವರೇ ನಿರೂಪಣೆ ಮಾಡಲಿದ್ದಾರೆ. ಸದ್ಯ ಈ ಸುದ್ದಿ ಕೇಳಿ ಬಿಗ್ ಬಾಸ್ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ.

## ಟಿ20 ವಿಶ್ವಕಪ್ ಪ್ರಶಸ್ತಿಯನ್ನು ದೇಶಕ್ಕೆ ಅರ್ಪಿಸಿದ ರೋಹಿತ್

# ವೇದಿಕೆಯಲ್ಲಿ ಕೊಹ್ಲಿ ಭಾವುಕ!



2024ರ ಟಿ20 ವಿಶ್ವಕಪ್ ವಿಜೇತ ಭಾರತ ತಂಡಕ್ಕೆ ಗೌರವಿಸುವ ಸಲುವಾಗಿ ವಾಂಖೆಡೆ ಮೈದಾನದಲ್ಲಿ ನಡೆದ ವಿಜಯೋತ್ಸವ ಕಾರ್ಯಕ್ರಮವು ಅನೇಕ ಭಾವುಕ ಕ್ಷಣಗಳಿಗೆ ಸಾಕ್ಷಿಯಾಯಿತು. ಟೀಂ ಇಂಡಿಯಾದ ಪ್ರತಿಯೊಬ್ಬ ಆಟಗಾರರು ಮಾತನಾಡಿ ಹಂಚಿಕೊಂಡರು. ಈ ವೇಳೆ ಟಿ20 ವಿಶ್ವಕಪ್ ಪ್ರಶಸ್ತಿಯನ್ನು ರೋಹಿತ್ ಶರ್ಮಾ ಇಡೀ ದೇಶಕ್ಕೆ ಸಮರ್ಪಿಸಿದರು.

ನಾಯಕ ರೋಹಿತ್ ಶರ್ಮಾ ಮಾತನಾಡಿ ಮುಂಬೈ ಅಭಿಮಾನಿಗಳಿಗೆ ಧನ್ಯವಾದ ಅರ್ಪಿಸಿದರು. ಜೊತೆಗೆ ತಂಡದ ಪ್ರತಿಯೊಬ್ಬ ಆಟಗಾರನ ಶ್ರಮವನ್ನು ಗುಣಗಾನ ಮಾಡಿದರು. ಅಷ್ಟೇ ಅಲ್ಲದೇ ಈ ಗೆಲುವಿನಲ್ಲಿ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಅವರ ಕೊಡುಗೆಯನ್ನು ಸ್ಮರಿಸಿದರು. ಇದನ್ನು ಕೇಳಿದ ಪಾಂಡ್ಯ ಮೈದಾನದಲ್ಲೇ ಕಣ್ಣೀರಿಟ್ಟರು. ಕೊನೇ ಓವರ್‌ನ ಮೊದಲ ಎಸೆತದಲ್ಲಿ ಡೇವಿಡ್ ಮಿಲ್ಲರ್ ಅವರನ್ನು ಔಟ್ ಮಾಡಿದ್ದೇ ಗೆಲುವಿಗೆ ದೊಡ್ಡ ತಿರುವು ಕೊಟ್ಟಿತು ಎಂದು ರೋಹಿತ್ ಗುಣಗಾನ ಮಾಡಿದರು. ಅಷ್ಟೇ ಅಲ್ಲ, ಭಾರತೀಯ ಕ್ರಿಕೆಟ್ ತಂಡವನ್ನು ಸ್ವಾಗತಿಸಲು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದು, ಅವರು ಈ ಟಿ20 ವಿಶ್ವಕಪ್ ಪ್ರಶಸ್ತಿಗಾಗಿ ಆಟಗಾರರಂತೆ ಹಪಹಪಿಸುತ್ತಿದ್ದರು. ಇಂದು ಎಲ್ಲರ ಕನಸು ನನಸಾಗಿದೆ. ಈ ವಿಶ್ವಕಪ್ ನಮ್ಮ ಗೆಲುವಲ್ಲ, ದೇಶದ ಗೆಲುವು, ದೇಶದ ಪ್ರತಿಯೊಬ್ಬರಿಗೂ ಸೇರಿದ್ದು ಎಂದು ಭಾವುಕರಾದರು.

ಇದೇ ವೇಳೆ ಮಾತನಾಡಿದ ನಿರ್ಗಮಿತ ಕೋಚ್ ರಾಹುಲ್ ದ್ರಾವಿಡ್, ನಾನು ಈ ಪ್ರೀತಿಯನ್ನು ಕಳೆದುಕೊಳ್ಳಲಿದ್ದೇನೆ, ರಾತ್ರಿ ಬೀದಿಗಳಲ್ಲಿ ನಾನು ಕಂಡದ್ದನ್ನು ನಾನು ಮರೆಯುವುದಿಲ್ಲ ಎಂದು ಕೃತಜ್ಞತೆ ವ್ಯಕ್ತಪಡಿಸಿದರು.

**ಕೊಹ್ಲಿಯೂ ಭಾವುಕ:** ರೋಹಿತ್ ಬಳಿಕ ಮಾತನಾಡಿದ ಕಿಂಗ್ ಕೊಹ್ಲಿ, ನನ್ನ 15 ವರ್ಷಗಳ ವೃತ್ತಿಜೀವನದಲ್ಲಿ ರೋಹಿತ್ ಇಷ್ಟೊಂದು ಭಾವುಕರಾಗಿರುವುದನ್ನು ನಾನು ನೋಡಿಲ್ಲ. ನಾನು ಡ್ರೆಸ್ಸಿಂಗ್ ರೂಮ್‌ಗೆ ಹೋಗುತ್ತಿದ್ದೆ ಮತ್ತು ರೋಹಿತ್ ಹೊರಗೆ ಬರುತ್ತಿದ್ದರು. ಇಬ್ಬರೂ ಭಾವುಕರಾಗಿ ಪರಸ್ಪರ ಅಪ್ಪಿಕೊಂಡೆವು. ಆ ಕ್ಷಣ ನನಗೆ ವಿಶೇಷವಾಗಿತ್ತು ಎಂದು ಹೇಳಿದರು.

2007 ಅಥವಾ 2011ರಲ್ಲಿ ನಾವು ವಿಶ್ವಕಪ್ ಗೆದ್ದಾಗ ಹಿರಿಯ ಆಟಗಾರರು ತುಂಬಾ ಅಳುತ್ತಿದ್ದರು. ಆದರೆ ನಾನು ಅವರೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗಲಿಲ್ಲ. ಖುಷಿಯ ಸಂದರ್ಭದಲ್ಲಿ ಅವರೆಲ್ಲಾ ಯಾಕೆ ಇಷ್ಟೊಂದು ಭಾವುಕರಾಗುತ್ತಿದ್ದಾರೆ ಎಂದು ಆಶ್ಚರ್ಯ ಪಡುತ್ತಿದ್ದೆ. ಆದರೆ ಈಗ ನನಗೆ ಅರ್ಥವಾಯಿತು. ನಾನಿರಲಿ ಅಥವಾ ರೋಹಿತ್ ಆಗಿರಲಿ, ಇಬ್ಬರೂ ಬಹುಕಾಲ ಟ್ರೋಫಿ ಗೆಲ್ಲುವುದರಲ್ಲಿ ನಿರತರಾಗಿದ್ದರು. ಮೊದಲು ನನ್ನ ನಾಯಕತ್ವದಲ್ಲಿ ಮತ್ತು ನಂತರ ರೋಹಿತ್ ನಾಯಕತ್ವದಲ್ಲಿ. ನಾವಿಬ್ಬರೂ ಈ ಟ್ರೋಫಿ ಗೆಲ್ಲಲು ಹತಾಶರಾಗಿದ್ದೆವು. ಈಗ ನಾವು ಗೆದ್ದಿರುವುದು ನಮಗೆ ವಿಶೇಷ. ಗೆದ್ದು ಮತ್ತೆ ವಾಂಖೆಡೆಗೆ ಬರುವುದು ನಮ್ಮ ಪಾಲಿಗೆ ವಿಶೇಷವಾಗಿದೆ ಎಂದು ಹಳೆಯ ನೆನಪುಗಳನ್ನು ಮೆಲುಕುಹಾಕಿದರು.

# ಟ್ರಾಫಿಕ್ ರೂಲ್ಸ್ ಉಲ್ಲಂಘನೆಯಲ್ಲಿ ಬೈಕ್ ಸವಾರರದ್ದೇ ಮೇಲುಗೈ



**ಬೆಂಗಳೂರು:** ಟ್ರಾಫಿಕ್ ರೂಲ್ಸ್‌ನ ನಿಜಕ್ಕೂ ಜನ ಪಾಲಿಸುತಿದ್ದಾರಾ? ಎಂಬ ಪ್ರಶ್ನೆ ಎದ್ದಿದೆ. ದಂಡದ ಮೌಲ್ಯ ಹೆಚ್ಚಾದರೂ ಟ್ರಾಫಿಕ್ ರೂಲ್ಸ್ ಉಲ್ಲಂಘನೆ ಮಾಡುವವರ ಸಂಖ್ಯೆ ಹೆಚ್ಚಾಗಿದೆ. ಇತ್ತೀಚೆಗೆ ಹೆಚ್ಚಾಗಿ ಬೈಕ್ ಸವಾರರಿಂದಲೇ ಟ್ರಾಫಿಕ್ ರೂಲ್ಸ್ ಉಲ್ಲಂಘನೆಯಾಗುತ್ತಿದೆ. ನಗರದಲ್ಲಿ ನಡೆಯುವ ಅಪಘಾತ ಪ್ರಕರಣಗಳಲ್ಲಿ ಬೈಕ್ ಸವಾರದ್ದೇ ಮೇಲುಗೈ. ಈ ಹಿನ್ನಲೆ ಪಶ್ಚಿಮ ಸಂಚಾರಿ ವಿಭಾಗದ ಪೊಲೀಸರು ನಿನ್ನೆ ದಿನವಿಡೀ ವಿಶೇಷ ಕಾರ್ಯಾಚರಣೆ ನಡೆಸಿದ್ದು ಒಂದೇ ದಿನ 851 ಪ್ರಕರಣಗಳು ದಾಖಲಾಗಿವೆ. ಬರೋಬ್ಬರಿ 4.33 ಲಕ್ಷ ದಂಡ ಹಾಕಿದ್ದಾರೆ.

ಕಾರ್ಯಾಚರಣೆ ವೇಳೆ ಬೈಕ್ ಸವಾರರ ಬೇಜವಾಬ್ದಾರಿ ಚಾಲನೆ ಪತ್ತೆಯಾಗಿದೆ. ಹೆಲ್ಮೆಟ್ ಇಲ್ಲ, ರಾಂಗ್ ರೂಟ್‌ನಲ್ಲಿ ಓಡಾಟ. ಸೇರಿದಂತೆ ನಾನಾ ಟ್ರಾಫಿಕ್ಸ್ ರೂಲ್ಸ್ ಉಲ್ಲಂಘನೆಯ ಕೇಸ್‌ಗಳು ಪತ್ತೆಯಾಗಿವೆ. ನಿನ್ನೆ ಒಂದೇ ದಿನ ಹೆಲ್ಮೆಟ್ ಇಲ್ಲದ ಬೈಕ್ ಸವಾರರ ವಿರುದ್ಧ 500ಕ್ಕೂ ಹೆಚ್ಚು ಕೇಸ್‌ಗಳು ದಾಖಲಾಗಿವೆ. ಹೆಲ್ಮೆಟ್ ಹಾಕದೇ ಬೈಕ್ ಚಾಲನೆ ಮಾಡಿದವರ ವಿರುದ್ದವೇ ಬರೋಬ್ಬರಿ ಎರಡೂವರೆ ಲಕ್ಷಕ್ಕೂ ಅಧಿಕ ರೂ ದಂಡ ಹಾಕಲಾಗಿದೆ.

ಕಾರ್ಯಾಚರಣೆಯ ದಂಡದ ವಿವರದಲ್ಲಿ ಬೈಕ್ ಸವಾರರ ಪಟ್ಟಿಯೇ ಹೆಚ್ಚು. ಹೆಲ್ಮೆಟ್ ಧರಿಸದೇ ಚಾಲನೆ ಮಾಡಿದ 511 ಕೇಸ್ ಸಂಬಂಧ 2,51,500ರೂ ದಂಡ ವಿಧಿಸಲಾಗಿದೆ. ಒನ್ ವೇ ರಾಂಗ್ ರೂಟ್‌ನ 55 ಕೇಸ್ ಸಂಬಂಧ 27,600 ರೂ ದಂಡ ಬಿದ್ದಿದ್ದು. ರಾಂಗ್ ಪಾರ್ಕಿಂಗ್‌ನ 69 ಕೇಸ್ ಸಂಬಂಧ 37,800ರೂ ದಂಡ ವಿಧಿಸಲಾಗಿದೆ. ಫುಟ್ ಪಾತ್ ಪಾರ್ಕಿಂಗ್ ಸಂಬಂಧ 6 ಕೇಸ್ ಸಂಬಂಧ 5 ಸಾವಿರ ದಂಡ ವಿಧಿಸಲಾಗಿದೆ. ರೇಡಿಂಗ್ ವೇಳೆ ಮೊಬೈಲ್ ಬಳಕೆ 7 ಕೇಸ್ ದಾಖಲಾಗಿದ್ದು 10,000ರೂ ದಂಡ ಹಾಕಲಾಗಿದೆ. ತ್ರಿಬಲ್ ರೇಡಿಂಗ್ 10 ಕೇಸ್ ಸಂಬಂಧ 6 ಸಾವಿರ ರೂ ದಂಡ ಬಿದ್ದಿದೆ. ಇತರೆ ಸಂಚಾರಿ ನಿಯಮ ಉಲ್ಲಂಘನೆಯ 184 ಪ್ರಕರಣ ಸಂಬಂಧ 90,700ರೂ ದಂಡ ಹಾಕಲಾಗಿದ್ದು ಒಟ್ಟು 851 ಪ್ರಕರಣ ಸಂಬಂಧ 4,33,600ರೂ ದಂಡ ವಿಧಿಸಲಾಗಿದೆ.

# ತ್ರಿವರ್ಣ ಧ್ವಜ ಹಿಡಿದು 'ವಂದೇ ಮಾತರಂ' ಹಾಡಿದ ಟೀಂ ಇಂಡಿಯಾ ಆಟಗಾರರು, ಫ್ಯಾನ್ಸ್

ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾ ಆಟಗಾರರನ್ನು ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಭವ್ಯ ಸಮಾರಂಭ ಆಯೋಜಿಸಿ ಅಭಿನಂದಿಸಲಾಯಿತು. ಈ ವೇಳೆ 'ವಂದೇ ಮಾತರಂ' ಹಾಡನ್ನು ಹಾಡುವ ಮೂಲಕ ಟೀಂ ಇಂಡಿಯಾ ಆಟಗಾರರು ಮತ್ತು ಅಭಿಮಾನಿಗಳು ದೇಶಪ್ರೇಮ ಮೆರೆದರು.



ಕ್ರೀಡಾಂಗಣದಲ್ಲಿ ರೋಹಿತ್ ಪಡೆ ತ್ರಿವರ್ಣ ಧ್ವಜ ಹಿಡಿದು ಸಂಭ್ರಮಿಸಿತು. ಈ ವೇಳೆ ಅಭಿಮಾನಿಗಳು ಸಹ ಕ್ರಿಕೆಟಿಗರ ಜೊತೆ ಸಂಭ್ರಮಾಚರಿಸಿದರು. ಕ್ರೀಡಾಂಗಣದಲ್ಲಿ 'ವಂದೇ ಮಾತರಂ' ಹಾಡು ಕೇಳಿಬಂತು. ಇದಕ್ಕೆ ಆಟಗಾರರು, ಫ್ಯಾನ್ಸ್ ಎಲ್ಲರೂ ದನಿಗೂಡಿದರು.

ಎಲ್ಲರೂ ಹಾಡನ್ನು ಹಾಡುವ ಮೂಲಕ ದೇಶಪ್ರೇಮ ಮೆರೆದರು. ಈ ಸಂದರ್ಭ ನಿಜಕ್ಕೂ ಮೈನವರೇಳಿಸುವಂತಿತ್ತು. ದೃಶ್ಯದ ವೀಡಿಯೋವನ್ನು ಐಪಿಎಲ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ.

**ವಿಜಯೋತ್ಸವಕ್ಕೆ ಆಹ್ವಾನಿಸಿದ್ದ ರೋಹಿತ್:** ಮುಂಬೈನವರೇ ಆಗಿರುವ ನಾಯಕ ರೋಹಿತ್ ಶರ್ಮಾ ತಮ್ಮ ತವರಿನ ಅಭಿಮಾನಿಗಳಿಗೆ ಈ ಬೃಹತ್ ಮೆರವಣಿಯಲ್ಲಿ ಪಾಲ್ಗೊಳ್ಳುವಂತೆ ವಿಶೇಷವಾಗಿ ಮನವಿ ಮಾಡಿದ್ದರು. ಭಾರತಕ್ಕೆ ಬರುವ ಮುನ್ನವೇ ರೋಹಿತ್ 'ಇಂತಹ ವಿಶೇಷ ಸಂಭ್ರಮವನ್ನು ನಿಮ್ಮೊಂದಿಗೆ ಆಚರಿಸುವ ಬಯಕೆಯಿದೆ. ಮರೈನ್ ಡ್ರೈವ್ ಹಾಗೂ ವಾಂಖೇಡೆ ಕ್ರೀಡಾಂಗಣದಲ್ಲಿ ನಮ್ಮೊಂದಿಗೆ ನೀವೂ ಜತೆಯಾಗಿ' ಎಂದು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದರು. ಅಲ್ಲದೇ ವಾಂಖೆಡೆ ಮೈದಾನಕ್ಕೆ ಉಚಿತ ಪ್ರವೇಶ ಕಲ್ಪಿಸಿದ್ದರಿಂದ ಮೈದಾನದ ತುಂಬಾ ಅಭಿಮಾನಿಗಳು ಕಿಕ್ಕಿರಿದಿದ್ದರು.

ಮುಂಬೈಗೆ ತೆರಳುವ ಮುನ್ನ ಟೀಮ್ ಇಂಡಿಯಾ ಆಟಗಾರರು ದೆಹಲಿಯ ಲೋಕ ಕಲ್ಯಾಣ ಮಾರ್ಗದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸಕ್ಕೆ ಭೇಟಿ ನೀಡಿ ವಿಶ್ವಕಪ್ ಗೆಲುವಿನ ಕುರಿತು ಪ್ರಧಾನಿ ಜತೆ ತಮ್ಮ ಅನುಭವ ಹಂಚಿಕೊಂಡರು. ಮೋದಿ ಕೂಡ ಆಟಗಾರರೊಂದಿಗೆ ಕೆಲ ಕಾಲ ಕುಶಲೋಪರಿ ನಡೆಸಿದರು. ಜೊತೆಗೆ ಗ್ರೂಫ್ ಫೋಟೊ ತೆಗೆಸಿಕೊಂಡರು. ಆಟಗಾರರಿಗೆ ವಿಶೇಷ ಭೋಜನ ಕೂಟ ಸಹ ಏರ್ಪಡಿಸಲಾಗಿತ್ತು. ಈ ವೇಳೆ ಬಿಸಿಸಿಐ ಕಡೆಯಿಂದ ಮೋದಿಗೆ ನಮೋ ನಂ.1 ಎಂದು ಬರೆದ ಟೀಂ ಇಂಡಿಯಾ ಜೆರ್ಸಿಯನ್ನು ಉಡುಗೊರೆಯಾಗಿ ನೀಡಲಾಯಿತು.

## ಬಿಬಿಎಂಪಿ ಕಲ್ಯಾಣ ಇಲಾಖೆಯಲ್ಲಿ ಬಹುಕೋಟಿ ಹಗರಣ

# ಪಶ್ಚಿಮ ವಲಯ ಜಂಟಿ ಅಯುಕ್ತರ ವರ್ಗಾವಣೆ

**ಬೆಂಗಳೂರು** ಬಿಬಿಎಂಪಿ ಕಲ್ಯಾಣ ಇಲಾಖೆಯಲ್ಲಿ ನಡೆದಿತ್ತು ಎನ್ನಲಾದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಬಿಬಿಎಂಪಿ ಪಶ್ಚಿಮ ವಲಯ ಜಂಟಿ ಅಯುಕ್ತರನ್ನು ವರ್ಗಾವಣೆ ಮಾಡಲಾಗಿದೆ. ಬಹುಕೋಟಿ ಹಗರಣ ಹೊರ ಬರುತ್ತಿದಂತೆಯೇ ಜಂಟಿ ಅಯುಕ್ತರ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಸದ್ಯ ಅವರನ್ನು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ನಿರ್ದೇಶಕರಾಗಿ ನಿಯುಕ್ತಿಗೊಳಿಸಲಾಗಿದೆ.

ಕಲ್ಯಾಣ ಇಲಾಖೆಯಲ್ಲಿ ಹಗರಣ ನಡೆದಿದ್ದ ಬಗ್ಗೆ ಸುದ್ದಿ ಬಿತ್ತರವಾಗಿತ್ತು. ಕೋವಿಡ್ ಸಾಂಕ್ರಾಮಿಕದ ವೇಳೆ ನಡೆದಿದ್ದ ಹಗರಣ ಸಂಬಂಧ ಲೋಕಾಯುಕ್ತ ವಿಚಾರಣೆಗೆ ಅನುಮತಿ ಕೇಳಿದ್ದ ಬಗ್ಗೆ ವರದಿ ಪ್ರಸಾರ ಮಾಡಿತ್ತು. ಇದರ ಬೆನ್ನಲ್ಲೇ ಜಂಟಿ ಆಯುಕ್ತರ ವರ್ಗಾವಣೆಯಾಗಿದೆ.



**102 ಕೋಟಿ ರೂ. ಹಗರಣ:** ಕಲ್ಯಾಣ ಇಲಾಖೆಯಿಂದ ಹೆಸರೇ ಇಲ್ಲದ ಸೊಸೈಟಿಗಳಿಗೆ ಹಣ ವರ್ಗಾಯಿಸಿದ್ದ ಆರೋಪ ಕೇಳಿಬಂದಿತ್ತು. ಸುಮಾರು 102 ಕೋಟಿ ರೂಪಾಯಿ ವರ್ಗಾವಣೆ ಮಾಡಿದ ಆರೋಪ ಕೇಳಿಬಂದಿತ್ತು. ಕೋವಿಡ್ ವೇಳೆ ಹಣ ವರ್ಗಾಯಿಸಿದ್ದ ಬಗ್ಗೆ ಲೋಕಾಯುಕ್ತದಲ್ಲಿ ದೂರು ದಾಖಲಾಗಿತ್ತು. 2020 ರಿಂದ 2021ರ ಅವಧಿಯಲ್ಲಿ ಬಿಬಿಎಂಪಿಯ ಪಶ್ಚಿಮ ವಲಯದಲ್ಲಿ ಈ ಬಹುಕೋಟಿ ಹಗರಣ ನಡೆದಿದೆ ಎನ್ನಲಾಗಿದೆ. ಈ ಸಂಬಂಧ ಹಣಕಾಸು ವಿಭಾಗದ 9 ಅಧಿಕಾರಿಗಳ ಮೇಲೆ ದೂರು ದಾಖಲಾಗಿತ್ತು.

ಹಣ ದುರುಪಯೋಗದ ಕುರಿತು ವಿಚಾರಣೆ ನಡೆಯುತ್ತಿದೆ. ಯಾವ ಆಧಾರದಲ್ಲಿ ಆರೋಪ ಮಾಡಲಾಗಿದೆ ಎಂಬುದನ್ನು ತಿಳಿಯಬೇಕಿದೆ. ಹಗರಣ ಸಂಬಂಧ ಲೋಕಾಯುಕ್ತರು ನಮ್ಮ ಬಳಿ ವರದಿ ಕೇಳಿದ್ದಾರೆ ಎಂದು ಕೆಲವು ದಿನಗಳ ಹಿಂದೆ ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದರು. ಹಗರಣ ಆರೋಪಕ್ಕೆ ಸಂಬಂಧಿಸಿ ಮುಖ್ಯಮಂತ್ರಿಗಳ ಕಚೇರಿ ಕೂಡ ಬಿಬಿಎಂಪಿಯಿಂದ ವರದಿ ಕೇಳಿತ್ತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com